VOLUME: 16 | 24 APRIL 2026 | ಶುಕ್ರವಾರ | RS: 2 | PAGE: 06 ISSUE: 79 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಶ್ರೀಲೀಲಾ ಈಗಾಗಲೇ ಕೆಲವು ಹಿಂದಿ ಸಿನಿಮಾಗಳನ್ನೂ ಸಹ ಒಪ್ಪಿಕೊಂಡಿದ್ದು, ದೊಡ್ಡ ನಿರ್ಮಾಣ ಸಂಸ್ಥೆಗಳ ಜೊತೆಗೆ ಕೆಲಸ ಮಾಡುತ್ತಿದ್ದಾರೆ. ಶ್ರೀಲೀಲಾ ಮೊದಲ ಹಿಂದಿ ಸಿನಿಮಾ ಒಪ್ಪಿಕೊಂಡು ವರ್ಷವಾಗುತ್ತಾ ಬಂದಿದೆ. ಆದರೆ ಸಿನಿಮಾದ ಬಿಡುಗಡೆ ಇನ್ನೂ ಸಾಕಷ್ಟು ತಡ ಆಗಬಹುದು ಎಂದು ಸ್ವತಃ ನಿರ್ದೇಶಕರೇ ಹೇಳಿದ್ದಾರೆ. ಮೊದಲ ಹಿಂದಿ ಸಿನಿಮಾ ಬಗ್ಗೆ ಸಾಕಷ್ಟು ನಿರೀಕ್ಷೆ ಇರಿಸಿಕೊಂಡಿದ್ದ ಶ್ರೀಲೀಲಾಗೆ ಇದು ಬೇಸರ ತಂದಂತಿದೆ.

BHARATHA SARATHI
KANNADA DAILY NEWS PAPER
# ಭಾರತ ಸಾರಥಿ
CALL 9740160669
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಟ್ರಂಪ್ ಸಾಮಾಜಿಕ ಮಾಧ್ಯಮದ ಪೋಸ್ಟ್ ನಲ್ಲಿ ಈ ಕುರಿತು ಬರೆದುಕೊಂಡಿದ್ದು, 'ಹಾರ್ಮುಜ್ ಜಲಸಂಧಿಯಲ್ಲಿ ನೌಕಾ ಮೈನ್‌ಗಳನ್ನು ಅಳವಡಿಸುತ್ತಿರುವ ಇರಾನಿನ ಯಾವುದೇ ಸಣ್ಣ ದೋಣಿಗಳನ್ನು "ಕಂಡಲ್ಲಿ ಗುಂಡಿಕ್ಕಿ" ಎಂದು ಅಮೆರಿಕ ನೌಕಾಪಡೆಗೆ ಆದೇಶಿಸಿದ್ದಾರೆ. 'ಈ ಪ್ರಮುಖ ಜಲಮಾರ್ಗವನ್ನು ಬಂದ್ ಮಾಡಲು ಪ್ರಯತ್ನಿಸುವ ಹಡಗುಗಳ ವಿರುದ್ಧ ಯಾವುದೇ "ಹಿಂಜರಿಕೆ" ಇಲ್ಲದೆ ಕ್ರಮ ಕೈಗೊಳ್ಳುವಂತೆ ಮಿಲಿಟರಿಗೆ ಸೂಚಿಸಲಾಗಿದೆ ಎಂದು ಬರೆದುಕೊಂಡಿದ್ದಾರೆ.

# ಇರಾನ್ ದೋಣಿಗಳ ಹೊಡೆದುರುಳಿಸಿ

ವಾಷಿಂಗ್ಟನ್: ಹಾರ್ಮುಜ್‌ನಲ್ಲಿ ಅಮೆರಿಕ ಮತ್ತು ಇರಾನ್ ನಡುವಿನ ಸಂಘರ್ಷ ಇದೀಗ ಮತ್ತೊಂದು ಹಂತ ತಲುಪಿದ್ದು, ಉಸಿರುಗಟ್ಟಿದ ವಾತಾವರಣದಲ್ಲಿ ನೌಕೆಗಳು ಸಾಗಬೇಕಿದೆ. ಈ ನಡುವೆ ಅಮೆರಿಕ ಸೇನೆಗೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಹತ್ವದ ಆದೇಶ ನೀಡಿದ್ದಾರೆ.

ಹಾರ್ಮುಜ್ ಜಲಸಂಧಿಯಲ್ಲಿ ನೌಕೆಗಳಿಗೆ ಅಡ್ಡಬರುವ ಇರಾನಿನ ಸಣ್ಣ ದೋಣಿಗಳನ್ನು 'ಗುಂಡಿಟ್ಟು ಉಡಾಯಿಸಲು' ಟ್ರಂಪ್ ತಮ್ಮ ಅಮೆರಿಕ ಮಿಲಿಟರಿಗೆ ಆದೇಶಿಸಿದ್ದಾರೆ.

ಇರಾನಿನ ತೈಲ ಕಳ್ಳಸಾಗಣೆಯೊಂದಿಗೆ ಸಂಬಂಧಿಸಿದ ಮತ್ತೊಂದು ಟ್ಯಾಂಕರ್ ಅನ್ನು ಅಮೆರಿಕ ಸೇನೆ ವಶಪಡಿಸಿಕೊಂಡ ಸ್ವಲ್ಪ ಸಮಯದ ನಂತರ ಟ್ರಂಪ್ ಈ ಆದೇಶ



ಹೊರಡಿಸಿದ್ದಾರೆ.

ಟ್ರಂಪ್ ಸಾಮಾಜಿಕ ಮಾಧ್ಯಮದ ಪೋಸ್ಟ್ ನಲ್ಲಿ ಈ ಕುರಿತು ಬರೆದುಕೊಂಡಿದ್ದು, 'ಹಾರ್ಮುಜ್ ಜಲಸಂಧಿಯಲ್ಲಿ ನೌಕಾ ಮೈನ್‌ಗಳನ್ನು ಅಳವಡಿಸುತ್ತಿರುವ ಇರಾನಿನ ಯಾವುದೇ ಸಣ್ಣ ದೋಣಿಗಳನ್ನು "ಕಂಡಲ್ಲಿ ಗುಂಡಿಕ್ಕಿ" ಎಂದು ಅಮೆರಿಕ ನೌಕಾಪಡೆಗೆ ಆದೇಶಿಸಿದ್ದಾರೆ.

'ಈ ಪ್ರಮುಖ ಜಲಮಾರ್ಗವನ್ನು ಬಂದ್ ಮಾಡಲು ಪ್ರಯತ್ನಿಸುವ ಹಡಗುಗಳ ವಿರುದ್ಧ ಯಾವುದೇ "ಹಿಂಜರಿಕೆ" ಇಲ್ಲದೆ ಕ್ರಮ ಕೈಗೊಳ್ಳುವಂತೆ ಮಿಲಿಟರಿಗೆ ಸೂಚಿಸಲಾಗಿದೆ ಎಂದು ಬರೆದುಕೊಂಡಿದ್ದಾರೆ. ಫೆಬ್ರವರಿ ಕೊನೆಯಲ್ಲಿ ಪ್ರಾರಂಭವಾದ ಅಮೆರಿಕ–ಇಸ್ರೇಲ್ ಮತ್ತು ಇರಾನ್ ನಡುವಿನ ಯುದ್ಧದ ಉದ್ವಿಗ್ನತೆಯ ನಡುವೆ ಈ ಬೆಳವಣಿಗೆ ನಡೆದಿದೆ.

'ಎಲ್ಲಾ ಕಚ್ಚಾ ತೈಲ ಮತ್ತು ನೈಸರ್ಗಿಕ ಅನಿಲ ವಹಿವಾಟಿನ ಶೇಕಡಾ 20 ರಷ್ಟು ಹಾದುಹೋಗುವ ಜಲಸಂಧಿಯ ಬಗ್ಗೆ ಟೆಹ್ರಾನ್‌ನೊಂದಿಗೆ ಬಿಕ್ಕಟ್ಟನ್ನು ಉಂಟು ಮಾಡಿದೆ.

ಹಾರ್ಮುಜ್ ಜಲಸಂಧಿಯ ನೀರಿನಲ್ಲಿ ಅಡ್ಡಿ ಪಡಿಸುತ್ತಿರುವ ಯಾವುದೇ ದೋಣಿ, ಸಣ್ಣ ದೋಣಿಗಳು ಇದ್ದರೂ ಸಹ, ಗುಂಡು ಹಾರಿಸಿ ಕೊಲ್ಲಲು ನಾನು ಯುನೈಟೆಡ್ ಸ್ಟೇಟ್ಸ್ ನೌಕಾಪಡೆಗೆ ಆದೇಶಿಸಿದ್ದೇನೆ" ಎಂದು ಟ್ರಂಪ್ ಪೋಸ್ಟ್ ಮಾಡಿದ್ದಾರೆ.

"ಯಾವುದೇ ಹಿಂಜರಿಕೆ ಬೇಡ. ಹೆಚ್ಚುವರಿಯಾಗಿ, ನಮ್ಮ ಗಣಿ ಗುಡಿಸುವವರು ಇದೀಗ ಜಲಸಂಧಿಯನ್ನು ತೆರವುಗೊಳಿಸುತ್ತಿದ್ದಾರೆ. ನಾನು ಆ ಚಟುವಟಿಕೆಯನ್ನು ಮುಂದುವರಿಸಲು ಆದರೆ ಮೂರು ಪಟ್ಟು ಹೆಚ್ಚಿನ ಮಟ್ಟದಲ್ಲಿ ಇಲ್ಲಿಗೆ ಆದೇಶಿಸುತ್ತಿದ್ದೇನೆ. ನಿರ್ಣಾಯಕ ಜಲಮಾರ್ಗದಲ್ಲಿ ಮಿಲಿಟರಿ ಗಣಿ ತೆರವುಗೊಳಿಸುವ ಕಾರ್ಯಾಚರಣೆಗಳನ್ನು ತೀವ್ರಗೊಳಿಸುತ್ತಿದೆ!" ಎಂದು ಟ್ರಂಪ್ ಹೇಳಿದರು.

# ಎಸ್‌ಎಸ್‌ಎಲ್‌ಸಿ: ದಾಖಲೆಯ ಫಲಿತಾಂಶ

ಬೆಂಗಳೂರು: ಲಕ್ಷಾಂತರ ವಿದ್ಯಾರ್ಥಿಗಳು ಹಾಗು ಪೋಷಕರುಗಳು ಕಾತರದಿಂದ ನಿರೀಕ್ಷಿಸುತ್ತಿರುವ 10ನೇ ತರಗತಿ ಪರೀಕ್ಷೆ–1ರ ಫಲಿತಾಂಶ ಇಂದು ಪ್ರಕಟವಾಗಿದೆ. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಫಲಿತಾಂಶ ಬಿಡುಗಡೆ ಮಾಡಿದ್ದಾರೆ.

ಮಾಧ್ಯಮಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಈ ಬಾರಿ ಉತ್ತಮ ಫಲಿತಾಂಶ ಬಂದಿದೆ. ಮೊದಲ ಬಾರಿಗೆ ಡಿಜಿ ಲಾಕರ್‌ನಲ್ಲಿ ಅಂಕಪಟ್ಟಿಯಲ್ಲಿ ಲಭ್ಯವಾಗಲಿವೆ. ಈ ಬಾರಿ 7,24,794 ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ. ಈ ಪೈಕಿ ಶೇ.94.01ರಷ್ಟು ಫಲಿತಾಂಶ ಬಂದಿದೆ. ಕಳೆದ ವರ್ಷ 80.04ರಷ್ಟು ವಿದ್ಯಾರ್ಥಿಗಳು ಪಾಸ್‌ಆಗಿದ್ದರು.

ಈ ಬಾರಿ ಶೇ.14ರಷ್ಟು ಫಲಿತಾಂಶ ಪ್ರಮಾಣ ಹೆಚ್ಚಳವಾಗಿದೆ. ದಕ್ಷಿಣ ಕನ್ನಡ (98.40) ಮತ್ತು ಉಡುಪಿ (98.18) ಅಗ್ರ ಸ್ಥಾನ ಪಡೆದರೆ, ಕಲಬುರಗಿ (85.06) ಮತ್ತು ಮಧುಗಿರಿ (90.26) ಕೊನೆಯ ಸ್ಥಾನ ಪಡೆದಿವೆ. ಏಳು ವಿದ್ಯಾರ್ಥಿಗಳು 625ಕ್ಕೆ 625 ಅಂಕ ಪಡೆದಿದ್ದಾರೆ ಎಂದು ಸಚಿವರು ತಿಳಿಸಿದರು.

ಬಾಲಕಿಯರೇ ಮೇಲುಗೈ, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಹೆಚ್ಚು ಪಾಸ್: ಪರೀಕ್ಷೆ ಬರೆದಿದ್ದ 3,92,922 ಬಾಲಕಿಯರ ಪೈಕಿ 3,77,992 (ಶೇ.96.18) ಪಾಸಾದರೆ, 3,77,287 ಬಾಲಕರ ಪೈಕಿ 3,46,872 (91.94) ಮಂದಿ ಉತ್ತೀರ್ಣರಾಗಿದ್ದಾರೆ. ಪರೀಕ್ಷೆಯಲ್ಲಿ ವಿದ್ಯಾರ್ಥಿನಿಯರೇ ಮೇಲುಗೈಯಾದರೂ, ಬಾಲಕರು ಕಳೆದ ವರ್ಷಗಿಂತ ಈ ವರ್ಷ ಹೆಚ್ಚು ಮಂದಿ ಪಾಸ್ ಆಗಿದ್ದಾರೆ. ಗ್ರಾಮೀಣ ಭಾಗದಲ್ಲಿ 4,42,280 ವಿದ್ಯಾರ್ಥಿಗಳ ಪೈಕಿ 4,19,261 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ನಗರ ಪ್ರದೇಶದಲ್ಲಿ 3,27,929 ವಿದ್ಯಾರ್ಥಿಗಳ ಪೈಕಿ 3,055,33 ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ. ನಗರ ಪ್ರದೇಶಕ್ಕಿಂತ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಹೆಚ್ಚು ಮಂದಿ ಪಾಸಾಗಿದ್ದಾರೆ ಎಂದು ಮಾಹಿತಿ ನೀಡಿದರು.

ಸ್ಕ್ಯಾನ್ ಪ್ರತಿ ಪಡೆಯಲು ಒಂದು ವಿಷಯಕ್ಕೆ 410 ರೂ. ಮರುಮೌಲ್ಯಮಾಪನ ಮಾಡಲು ಒಂದು ವಿಷಯಕ್ಕೆ 810 ಶುಲ್ಕ ವಿಧಿಸಲಾಗಿದೆ ಫಲಿತಾಂಶ ಉತ್ತಮಪಡಿಸಿಕೊಳ್ಳಲು ಒಂದು ವಿಷಯಕ್ಕೆ 448 ರೂ. ಎರಡು ವಿಷಯಕ್ಕೆ 559 ಹಾಗೂ ಮೂರಕ್ಕಿಂತ ಮೇಲ್ಪಟ್ಟ ವಿಷಯಗಳಿಗೆ 752 ರೂ.ಶುಲ್ಕ ನಿಗದಿಪಡಿಸಲಾಗಿದೆ.

ಅಥಣಿ ತಾಲೂಕಿನ ಕಟಗೇರಿ ಸರ್ಕಾರಿ ಶಾಲೆಯ ವಿದ್ಯಾರ್ಥಿನಿ ಪ್ರಾರ್ಥನಾ ನಾಗಪ್ಪ ಪಾಟೀಲ್ ದಾವಣಗೆರೆಯ ಚನ್ನಗಿರಿ ತಾಲೂಕಿನ ಕಬ್ಬಾಳ ಶ್ರೀವಿದ್ಯಾಲಕ್ಷ್ಮೀ ಹೈಸ್ಕೂಲ್‌ನ ಭರತ್ ಜಿ ಚಿಕ್ಕಮಗಳೂರು ತಾಲೂಕಿನ ಸೇಂಟ್ ಮೇರಿ ಹೈಸ್ಕೂಲ್‌ನ ಬೃಂದಾ ಎಂ ತಾಪ್ಸೆ ಬೆಂಗಳೂರು ಉತ್ತರದ ಪೂರ್ಣಪ್ರಜ್ಞಾ ಶಾಲೆಯ ಧನುಷ್ ಸುದೀರ್ ಉಡುಪಿಯ ಕುಂದಾಪುರ ತಾಲೂಕಿನ ಮದರ್ ತೆರೇಸಾ ಶಾಲೆಯ ಪ್ರೀಥಮ್ ಜಿ ಪೂಜಾರ್ ವಿಜಯಪುರದ ಮುದ್ದೇಬಿಹಾಳ ತಾಲೂಕಿನ ನಗರಬೆಟ್ಟದ ಆಕ್ಸ್‌ಫರ್ಡ್ ಹೈಸ್ಕೂಲ್‌ನ ಸೌಜನ್ಯ ಬಸವರಾಜ್ ಕಂದಕೂರ್ ರಾಯಚೂರು–ಮಾನ್ವಿಯ ಬಿವಿಆರ್ ಹೈಸ್ಕೂಲ್‌ನ ಸುಖದೇವ್.

# ಶಾಂತಿಯುತ ಮತದಾನ

ಚೆನ್ನೈ: ತಮಿಳುನಾಡು ವಿಧಾನಸಭಾ ಚುನಾವಣೆ ಸಂಜೆ 6 ಗಂಟೆಗೆ ಮುಕ್ತಾಯವಾಯಿತು. ಅಧಿಕಾರಿಗಳು ಮುಕ್ತಾಯದ ಸಮಯಕ್ಕಿಂತ ಮೊದಲು ಮತಗಟ್ಟೆಗಳನ್ನು ತಲುಪಿದ ಮತದಾರರಿಗೆ ತಮ್ಮ ಮತಪತ್ರಗಳನ್ನು ಚಲಾಯಿಸಲು ಅವಕಾಶ ನೀಡಿದರು.



ಇದೇ ಮೊದಲ ಬಾರಿಗೆ ದಾಖಲೆಯ ಶೇ. 84ರಷ್ಟು ಮತದಾನ ದಾಖಲಾಗಿದೆ. 5.73 ಕೋಟಿ ಅರ್ಹ ಮತದಾರರಲ್ಲಿ ಸುಮಾರು ಶೇ. 84ರಷ್ಟು ಜನರು ತಮ್ಮ ಮತದಾನ ಮಾಡಿದರು. 75,064 ಮತಗಟ್ಟೆಗಳಲ್ಲಿ ಮತದಾನ ನಡೆಯಿತು.

4,023 ಅಭ್ಯರ್ಥಿಗಳು ಇಂದಿನ ಚುನಾವಣೆಯಲ್ಲಿ ಸ್ಪರ್ಧಿಸಿದ್ದರು. 74 ವರ್ಷಗಳ ಬಳಿಕ ತಮಿಳುನಾಡಿನಲ್ಲಿ ಇಷ್ಟು ದೊಡ್ಡ ಪ್ರಮಾಣದ ಮತದಾನ ನಡೆದಿದೆ.

ತಮಿಳುನಾಡಿನ 8 ಜಿಲ್ಲೆಗಳನ್ನು ಹೊರತುಪಡಿಸಿ, ಉಳಿದ 30 ಜಿಲ್ಲೆಗಳಲ್ಲಿ ಶೇ.80ಕ್ಕಿಂತ ಹೆಚ್ಚು ಮತದಾನ ನಡೆದಿದೆ. ತಮಿಳುನಾಡು ರಾಜ್ಯದ ಪಶ್ಚಿಮ ಜಿಲ್ಲೆಗಳು ರಾಜ್ಯದ ಇತರ ಭಾಗಗಳಿಗಿಂತ ಹೆಚ್ಚಿನ ಮತಗಳನ್ನು ದಾಖಲಿಸಿವೆ. ಕರೂರ್‌ನಲ್ಲಿ ಗರಿಷ್ಠ ಶೇ. 89ರಷ್ಟು ಮತಗಳು ದಾಖಲಾಗಿವೆ. 16 ಕ್ಷೇತ್ರಗಳ ಪೈಕಿ ಚೆನ್ನೈ ಜಿಲ್ಲೆಯಲ್ಲಿ ಶೇ. 83.44ರಷ್ಟು ಮತಗಳು ಮತ್ತು 12 ಕ್ಷೇತ್ರಗಳಲ್ಲಿ ಶೇ. 80ಕ್ಕಿಂತ ಹೆಚ್ಚು ಮತಗಳನ್ನು ಚಲಾಯಿಸಲಾಗಿದೆ.

ತಮಿಳುನಾಡಿನ ಎಲ್ಲಾ 234 ಕ್ಷೇತ್ರಗಳಿಗೆ ಇಂದು ಒಂದೇ ಹಂತದಲ್ಲಿ ಚುನಾವಣೆ ನಡೆದಿದ್ದು, ರಾಜ್ಯದಾದ್ಯಂತ ಜನರು ಬೆಳಗಿನ ಜಾವದಿಂದಲೇ ಹೆಚ್ಚಿನ ಉತ್ಸಾಹದಿಂದ ಮತ ಚಲಾಯಿಸಿದ್ದಾರೆ. ತಮಿಳುನಾಡಿನಲ್ಲಿ ಈ ಹಿಂದೆ 2011ರ ವಿಧಾನಸಭಾ ಚುನಾವಣೆಯಲ್ಲಿ ಶೇ.78.29ರಷ್ಟು ಮತದಾನ ದಾಖಲಾಗಿತ್ತು. ಇಂದಿನ ಶೇ. 84ರಷ್ಟು ಮತದಾನವು ಆ ದಾಖಲೆಯನ್ನು ಮೀರಿಸಿದೆ. ಇಂದು ಸರಿಸುಮಾರು 4.71 ಕೋಟಿ ಜನರು ತಮ್ಮ ಮತದಾನವನ್ನು ಚಲಾಯಿಸಿದ್ದಾರೆ.

ಕರೂರು ಜಿಲ್ಲೆಯಲ್ಲಿ ಶೇ. 89ರಷ್ಟು ಮತದಾನವಾಗಿದ್ದು, ರಾಜ್ಯದಲ್ಲಿ ಅತಿ ಹೆಚ್ಚು ಮತದಾನವಾಗಿದೆ. ಚೆನ್ನೈ ಜಿಲ್ಲೆಯಲ್ಲಿ ಶೇ.81.34ರಷ್ಟು ಮತದಾನವಾಗಿದ್ದರೆ, ಕನ್ಯಾಕುಮಾರಿಯಲ್ಲಿ ಶೇ.73.44ರಷ್ಟು ಮತದಾನವಾಗಿದೆ.
ಎಡಪ್ಪಾಡಿ ಪಳನಿಸ್ವಾಮಿ ಅವರ ಕ್ಷೇತ್ರ ಎಡಪ್ಪಾಡಿಯಲ್ಲಿ ಶೇ. 89.09ರಷ್ಟು ಮತದಾನ ದಾಖಲಾಗಿದೆ. ದಳಪತಿ ವಿಜಯ್ ಅವರ ಪೆರಂಬೂರ್ ಕ್ಷೇತ್ರದಲ್ಲಿ ಶೇ. 86.72ರಷ್ಟು ಮತದಾನವಾಗಿದ್ದರೆ, ಅವರ ಇನ್ನೊಂದು ಕ್ಷೇತ್ರವಾದ ತಿರುಚ್ಚಿ ಪೂರ್ವದಲ್ಲಿ ಶೇ. 79.32ರಷ್ಟು ಮತದಾನವಾಗಿದೆ.

ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರ ಕೊಳತ್ತೂರು ಕ್ಷೇತ್ರದಲ್ಲಿ ಶೇ. 83.58ರಷ್ಟು ಮತ್ತು ಸೀಮನ್ ಅವರ ಕಾರೈಕುಡಿ ಕ್ಷೇತ್ರದಲ್ಲಿ ಶೇ. 71.88ರಷ್ಟು ಮತದಾನ ದಾಖಲಾಗಿದೆ.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಹದಗೂರು ಶ್ರೀ ಬೀರೇಶ್ವರ ಸ್ವಾಮಿ (ತೊರಸಾಲಪ್ಪ) ಸೇವಾ ಸಮಿತಿ ಆಯೋಜಿಸಿದ್ದ, ಬೀರೇಶ್ವರ ಸ್ವಾಮಿ ದೇವಸ್ಥಾನದ ಕುಂಬಾಭಿಷೇಕ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಹಿಂದುಳಿದ ವರ್ಗಗಳ ಮತ್ತು ಶೋಷಿತ ಸಮುದಾಯಗಳ ಒಕ್ಕೂಟದ ಅಧ್ಯಕ್ಷರಾದ ರಾಮಚಂದ್ರಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವರಾದ ಬೈರತಿ ಸುರೇಶ್, ಮಾಜಿ ಸಚಿವರಾದ ಹೆಚ್. ಎಂ.ರೇವಣ್ಣ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# ಗ್ಯಾರಂಟಿ ಕೊಟ್ಟ ಸರ್ಕಾರಕ್ಕೆ ಸಂಬಳ ಕೊಡಲು ದುಡ್ಡಿಲ್ಲ: ಎಚ್‌ಡಿಕೆ

ಹೊಳೆನರಸೀಪುರ: ಕೇವಲ ರೂ.2000 ಗ್ಯಾರಂಟಿ ಹಣದಿಂದ ಅಭಿವೃದ್ಧಿ ಸಾಧ್ಯವಿಲ್ಲ. ಮಹಿಳೆಯರು ಈ ಸಣ್ಣ ಮೊತ್ತಕ್ಕೆ ಮರುಳಾಗಬಾರದು. ಜನರ ಕುಟುಂಬಗಳ ಉದ್ಧಾರವು ಅಸಾಧ್ಯ. ಇಂತಹ ಗ್ಯಾರೆಂಟಿಗಳಿಂದ ರಾಜ್ಯ ಸರ್ಕಾರಗಳಿಗೆ ಸಂಬಳ ಕೊಡಲಾಗದಂತ ದುಸ್ಥಿತಿ ಎದುರಾಗಿದೆ ಎಂದು ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಕಳವಳ ವ್ಯಕ್ತಪಡಿಸಿದರು.



ಹೊಳೆನರಸೀಪುರ ತಾಲೂಕಿನ ಉದ್ದನ ಹೊಸಹಳ್ಳಿ ಗ್ರಾಮದಲ್ಲಿ ಶ್ರೀ ವೀರಾಂಜನೇಯಸ್ವಾಮಿ ದೇವಾಲಯದ ಜೀರ್ಣೋದ್ಧಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಸಚಿವರು, ಕೇವಲ ಎರಡು ಸಾವಿರ ರೂಪಾಯಿಯಿಂದ ಅಭಿವೃದ್ಧಿ ಸಾಧ್ಯವಿಲ್ಲ. ಅದರಿಂದ ಆರೋಗ್ಯ, ಶಿಕ್ಷಣ ಸೇರಿದಂತೆ ಕುಟುಂಬಗಳ ಯಾವ ಅಗತ್ಯವು ಪೂರೈಕೆ ಆಗುವುದಿಲ್ಲ. ದೊಡ್ಡ ದೊಡ್ಡ ಕಾಯಿಲೆಗಳು ಬಂದಾಗ ಜನರಿಗೆ ಈ ಎರಡು ಸಾವಿರ ರೂಪಾಯಿಯಿಂದ ಚಿಕಿತ್ಸೆ ಪಡೆಯಲು ಸಾಧ್ಯವೇ? ಎಂದು ಪ್ರಶ್ನಿಸಿದರು.

ಕರ್ನಾಟಕದಲ್ಲಿ ಮಾರ್ಚ್ ತಿಂಗಳ ಸರ್ಕಾರಿ ನೌಕರರ ವೇತನವನ್ನು ಇನ್ನು ಕೊಟ್ಟಿಲ್ಲ ಎನ್ನುವ ಮಾಹಿತಿಯು ಇದೆ. ಹಾಗೆಯೇ ಕಾಂಗ್ರೆಸ್ ಆಡಳಿತ ಇರುವ ಹಿಮಾಚಲ ಪ್ರದೇಶದಲ್ಲಿಯೂ ಸರ್ಕಾರಿ ನೌಕರರ ಸಂಬಳವನ್ನು ನೀಡಲು ಪರದಾಡುತ್ತಿದೆ. ಆ ಸರ್ಕಾರವು ನೌಕರರ ಸಂಬಳವನ್ನು ಕಡಿತ ಮಾಡಿಕೊಂಡಿದೆ ಎಂದು ಮಾಧ್ಯಮಗಳಲ್ಲಿ ವರದಿಯಾಗಿದೆ. ಹೀಗಾಗಿ ರಾಜ್ಯಗಳ ಅಭಿವೃದ್ಧಿ ಸಂಪೂರ್ಣವಾಗಿ ಹಳಿತಪ್ಪಿದೆ, ಇದಕ್ಕೆ ಕಾಂಗ್ರೆಸ್ ಕಾರಣವಾಗಿದೆ ಎಂದು ಕೇಂದ್ರ ಸಚಿವರು ಹೇಳಿದರು.

ಸುಮಾರು ರೂ.7,26,000 ಲಕ್ಷ ಕೋಟಿಗೂ ಹೆಚ್ಚು ಹಣವನ್ನು ಕರ್ನಾಟಕ ಸರ್ಕಾರ ಸಾಲ ಮಾಡಿದೆ. ಕಾಂಗ್ರೆಸ್ ಸರ್ಕಾರವೇ ಅತಿಹೆಚ್ಚು ಸಾಲ ಮಾಡಿದೆ. ರಾಜ್ಯದ ಪ್ರತಿಯೊಬ್ಬರ ತಲೆಯ ಮೇಲೆಯೂ ಕನಿಷ್ಠವೆಂದರೂ ಒಂದು ಲಕ್ಷ ರೂಪಾಯಿಗೂ ಅಧಿಕ ಸಾಲವಿದೆ.

ಇದಕ್ಕೆ ಕಾರಣ ಯಾರು? ಇದನ್ನು ತೀರಿಸುವವರು ಯಾರು? ಇಷ್ಟು ಸಾಲವನ್ನು ಮಾಡಿದರೆ ರಾಜ್ಯ ಅಭಿವೃದ್ಧಿ ಹೊಂದಲು ಸಾಧ್ಯವೇ ಎಂದು ಸಚಿವ ಕುಮಾರಸ್ವಾಮಿ ಅವರು ಆತಂಕ ವ್ಯಕ್ತಪಡಿಸಿದರು.

ಒಂದು ಕೈಯಲ್ಲಿ ನಿಮಗೆ _2000 ಕೊಡುತ್ತಾರೆ. ಇನ್ನೊಂದು ಕೈಯಲ್ಲಿ ತೆರಿಗೆ ಮೇಲೆ ತೆರಿಗೆ ವಿಧಿಸುತ್ತಾರೆ. ಬೆಲೆ ಏರಿಕೆಗಳ ಬಗ್ಗೆ ಹೇಳುವ ಹಾಗೆಯೇ ಇಲ್ಲ. ಇತ್ತೀಚೆಗೆ ವಿದ್ಯುತ್ ದರವನ್ನು ಹೆಚ್ಚಿಸಿದರು. ಹಾಗೆಯೇ ಮದ್ಯದ ದರವನ್ನು ಏರಿಸಿದರು. ಎಷ್ಟು ಸಾಧ್ಯವೊ ಅಷ್ಟು ಕಡೆ ಜನರನ್ನು ಕಿತ್ತು ತಿನ್ನುವ ಕೆಲಸವನ್ನು ಈ ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ ಎಂದು ಸಚಿವರು ಕಿಡಿಕಾರಿದರು.

ಚುನಾವಣೆ ಬಂದಾಗ ನಿಮ್ಮ ಭವಿಷ್ಯ ಮತ್ತು ನಿಮ್ಮ ಮಕ್ಕಳ ಉದ್ಧಾರಕ್ಕಾಗಿ ಪ್ರಾಮಾಣಿಕವಾಗಿ ಕೆಲಸ ಮಾಡುವವರನ್ನು ನೋಡಿ ಆಯ್ಕೆ ಮಾಡಿ. ಜಾತಿ ನೋಡಿ ಮತ ಹಾಕಬೇಡಿ. ಹಾಸನ ಜಿಲ್ಲೆ ಸೇರಿ ಇಡೀ ರಾಜ್ಯದಲ್ಲಿ ಆರೋಗ್ಯ, ಶಿಕ್ಷಣ, ವಿದ್ಯುತ್ ಕ್ಷೇತ್ರಗಳಲ್ಲಿ ಆಗಿರುವ ಅಭಿವೃದ್ಧಿಯನ್ನು ಗಮನಿಸಿ. ನನಗೆ ದೊರೆತ ಸಣ್ಣ ಅವಧಿಯಲ್ಲಿ ಇಷ್ಟೆಲ್ಲ ಕೆಲಸಗಳನ್ನು ಮಾಡಿದ್ದೇನೆ.

ಸಾವಿರಾರು ಶಿಕ್ಷಕರನ್ನು ನೇರವಾಗಿ ಮತ್ತು ಪಾರದರ್ಶಕವಾಗಿ ನೇಮಕ ಮಾಡಿದ್ದೆ. ಆದರೆ ಈಗಿನ ಸರ್ಕಾರಕ್ಕೆ ಒಂದೇ ಒಂದು ನೇಮಕಾತಿ ಮಾಡುವ ಶಕ್ತಿಯು ಇಲ್ಲವಾಗಿದೆ ಎಂದು ಕೇಂದ್ರ ಸಚಿವರು ದೂರಿದರು.

# ಕುತೂಹಲಕ್ಕೆ ಕಾರಣವಾದ ಡಿಕೆಶಿ ನಡೆ

ನವದೆಹಲಿ: ಕರ್ನಾಟಕ ಕಾಂಗ್ರೆಸ್‌ನಲ್ಲಿ ನಡೆಯುತ್ತಿ ರುವ ರಾಜಕೀಯ ಚಟುವಟಿಕೆಗಳ ನಡುವೆ ಕೆಪಿಸಿಸಿ ಅಧ್ಯಕ್ಷ ಹಾಗೂ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ದೆಹಲಿಗೆ ಭೇಟಿ ನೀಡಿ ವರಿಷ್ಠ ನಾಯಕರೊಂದಿಗೆ ಗೌಪ್ಯವಾಗಿ ಮಹತ್ವದ ಚರ್ಚೆ ನಡೆಸಿರುವುದು ರಾಜಕೀಯ ವಲಯದಲ್ಲಿ ಕುತೂಹಲಕ್ಕೆ ಕಾರಣವಾಗಿದೆ.

ದೆಹಲಿ ಕರ್ನಾಟಕ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, "ನಾನು ದೆಹಲಿಗೆ ಗಾಳಿ ಕುಡಿಯಲು ಬಂದಿಲ್ಲ. ಖಂಡಿತವಾಗಿ ಪಕ್ಷದ ಕೆಲವರನ್ನು ಭೇಟಿ ಮಾಡಿ ಚರ್ಚೆ ಮಾಡಿದ್ದೇನೆ. ಆದರೆ ಯಾರನ್ನು ಭೇಟಿ ಮಾಡಿದ್ದೇನೆಂದು ಬಹಿರಂಗಪಡಿಸುವುದು ಸೂಕ್ತವಲ್ಲ," ಎಂದು ಹೇಳಿದರು.

ಪಕ್ಷದ ವಿಚಾರಗಳ ಬಗ್ಗೆ ವರಿಷ್ಠರೊಂದಿಗೆ ಚರ್ಚೆ ನಡೆಸಿರುವುದಾಗಿ ತಿಳಿಸಿದ ಡಿಕೆ ಶಿವಕುಮಾರ್, "ನನ್ನಂಥವನು ಎಲ್ಲವನ್ನೂ ಬಹಿರಂಗವಾಗಿ ಹೇಳಲು ಸಾಧ್ಯವಿಲ್ಲ. ನನ್ನ ಕೆಲಸವನ್ನು ನಾನು ಮಾಡುತ್ತಿರುತ್ತೇನೆ," ಎಂದು ಹೇಳಿ ಭೇಟಿಯ ವಿವರಗಳನ್ನು ಬಹಿರಂಗಪಡಿಸಲು ನಿರಾಕರಿಸಿದರು.

ಈ ಬಗ್ಗೆ ರಾಜಕೀಯ ವಲಯದಲ್ಲಿ ಹಲವಾರು ಊಹಾಪೋಹಗಳು ಹರಿದಾಡುತ್ತಿವೆ.


ಇತ್ತೀಚೆಗೆ ಕಾಂಗ್ರೆಸ್ ಪಕ್ಷದೊಳಗಿನ ಅಸಮಾಧಾನ, ವಿಶೇಷವಾಗಿ ಮುಸ್ಲಿಂ ನಾಯಕರ ಅಸಮಾಧಾನ, ಸಂಪುಟ ಪುನಾರಚನೆ ಮತ್ತು ನಾಯಕತ್ವ ಬದಲಾವಣೆಯ ಕುರಿತ ಚರ್ಚೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಡಿಕೆ ಶಿವಕುಮಾರ್ ಅವರ ಈ ರಹಸ್ಯ ಭೇಟಿ ಹೆಚ್ಚಿನ ಮಹತ್ವ ಪಡೆದುಕೊಂಡಿದೆ.

# ಸಾರಿಗೆ ನಿಗಮ ದುಃಸ್ಥಿತಿಗೆ ಬೊಮ್ಮಾಯಿ ಕಾರಣ: ರಾಮಲಿಂಗಾರೆಡ್ಡಿ

ಬೆಂಗಳೂರು: ಒಂದು ಕಾಲಕ್ಕೆ ಸದೃಢವಾಗಿದ್ದ ಸಾರಿಗೆ ನಿಗಮಗಳು ಇಂದು ದುಃಸ್ಥಿತಿಗೆ ಬರಲು ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ ಮತ್ತು ಬಸವರಾಜ ಬೊಮ್ಮಾಯಿ ಅವರೇ ಕಾರಣ. ಅವರ ಅದಕ್ಷ ಆಡಳಿತ, ಪ್ರಯಾಣಿಕರ ಕುರಿತು ಅವರಿಗಿರುವ ಬೇಜವಾಬ್ದಾರಿ, ಅಧಿಕಾರದ ಅಮಲು ಅವರಿಗೆ ಏರಿತ್ತು. ಸಾರಿಗೆ ನೌಕರರ ಹೊಟ್ಟೆಯ ಮೇಲೆ ಹೊಡೆದ ಬಿಜೆಪಿಗರು, ಈಗ ಯಾವ ಮುಖ ಇಟ್ಟುಕೊಂಡು ಉಪದೇಶ ಮಾಡುತ್ತಾರೆ? ಎಂದು ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ತಮ್ಮ ಆಕ್ರೋಶ ಹೊರ ಹಾಕಿದ್ದಾರೆ.

ಸಾರಿಗೆ ನಿಗಮಗಳ ಆರ್ಥಿಕ ಪರಿಸ್ಥಿತಿ ಕುರಿತಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಆರೋಪಕ್ಕೆ ತಿರುಗೇಟು ನೀಡಿದ ರಾಮಲಿಂಗಾರೆಡ್ಡಿ ತಮ್ಮ ಸಾಮಾಜಿಕ ಜಾಲತಾಣದಲ್ಲಿ, ಬಿ.ವೈ. ವಿಜಯೇಂದ್ರ ಅವರೇ ನಿಮ್ಮ ನಕಲಿ ಕಾಳಜಿಯ ಮುಖವಾಡ ಕಳಚಿಡಿ. ಸಾರಿಗೆ ನಿಗಮಗಳು ಈಗಿನ ಸ್ಥಿತಿಗೆ ತಲುಪಲು ತಮ್ಮ ಪೂಜ್ಯ ತಂದೆ ಬಿ.ಎಸ್. ಯಡಿಯೂರಪ್ಪ ಮತ್ತು ಬಸವರಾಜ ಬೊಮ್ಮಾಯಿ ಅವರ ಕಾಲದ ಅದಕ್ಷ ಆಡಳಿತವೇ ನೇರ ಕಾರಣ. ಅಧಿಕಾರದಲ್ಲಿದ್ದಾಗ ಅಧಿಕಾರದ ಅಮಲಿನಲ್ಲಿ ನೌಕರರ ಹೊಟ್ಟೆಯ ಮೇಲೆ ಹೊಡೆದ ನೀವು, ಈಗ ಯಾವ ಮುಖ ಇಟ್ಟುಕೊಂಡು ಉಪದೇಶ ಮಾಡುತ್ತಿದ್ದೀರಿ? ಎಂದು ಪ್ರಶ್ನಿಸಿದ್ದಾರೆ.

ನಿಮಗೆ ವಿಷಯದ ಅರಿವಿಲ್ಲವೆಂದು ನೇರವಾಗಿ ವಿಜಯೇಂದ್ರ ಅವರನ್ನು ತರಾಟೆಗೆ ತೆಗೆದುಕೊಂಡ ಸಚಿವರು, ನಿಮಗೆ ಪ್ರಚಾರದ ಹುಚ್ಚು ಹಿಡಿದಿದೆ. ನಿಮ್ಮಲ್ಲಿರುವುದು ಕೇವಲ ಪ್ರಚಾರ ಹಪಾಹಪಿ. ನಿಮ್ಮ ಹಳೆಯ ಪಾಪದ ರಾಶಿಯನ್ನು ನಾವು ಪದೇಪದೆ ಅಗೆದು ತೆಗೆಯಬೇಕಾಗಿರುವುದು



ರಾಜ್ಯದ ಅತಿದೊಡ್ಡ ದುರಂತ. ಇನ್ನಾದರೂ ಜನರನ್ನು ದಾರಿ ತಪ್ಪಿಸುವ ಪೊಳ್ಳು ಹೋರಾಟಗಳನ್ನು ನಿಲ್ಲಿಸಬೇಕು. ನಿಮ್ಮ ಕಾಲದಲ್ಲಿಯೇ ಸಾರಿಗೆ ನಿಗಮಗಳಿಗೆ ಆಗಿರುವ ಅಧಃಪತನಕ್ಕೆ ಕಾರಣರಾರು? ಎನ್ನುವುದನ್ನು ಮೊದಲು ಉತ್ತರ ನೀಡಿ ಎಂದು ತಾಕೀತು ಮಾಡಿದ್ದಾರೆ.

ಈ ಹಿಂದೆ ಅಧಿಕಾರದಲ್ಲಿದ್ದ ಬಿಜೆಪಿ ಆಡಳಿತದ ಅವಧಿಯ ಅದಕ್ಷ ಆಡಳಿತವೇ ಸಾರಿಗೆ ನಿಗಮಗಳಿಗೆ ಸಂಕಷ್ಟ ತಂದೊಡ್ಡಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಬಳಿಕ ಸಂಕಷ್ಟ ಸರಿಪಡಿಸುವ ಕೆಲಸ ಮಾಡುತ್ತಿದೆ. ಸತ್ಯಾಂಶಗಳ ಅರಿವಿಲ್ಲದೇ, ಈ ರೀತಿ ಮಾತನಾಡುವುದು ಬೇಡ. ಸಾರಿಗೆ ಸಂಸ್ಥೆಯ ಇತಿಹಾಸದಲ್ಲೇ ಮೊದಲ ಬಾರಿಗೆ 15 ದಿನಗಳ ಕಾಲ ಮುಷ್ಕರ ಮಾಡಿಸಿ, ಮುಂದೆ ತಿಂಗಳು ಕಾಲ ಮುಷ್ಕರ ಮಾಡುವುದಕ್ಕೆ ಅಡಿಪಾಯ ಹಾಕಿ ಕೊಟ್ಟವರೇ ನೀವು. ಈ ಘನ ಕೀರ್ತಿ ತಮಗೆ ಸಲ್ಲಬೇಕು. ನಿಮ್ಮ ಅವಧಿಯಲ್ಲಿ ಎರಡೆರಡು ಬಾರಿ ಮುಷ್ಕರ ನಡೆದ ದಾಖಲೆಯಿದೆ. ಮುಷ್ಕರದ ಹೆಸರಲ್ಲಿ 3500ಕ್ಕೂ ಹೆಚ್ಚಿನ ನೌಕರರನ್ನು ವಜಾ, ಅಮಾನತು ಮಾಡಿ ಎಫ್ ಐಆರ್ ದಾಖಲಿಸಿದ್ದೀರಿ. ಈಗಲೂ ಅವರು ಕೋರ್ಟ್‌ಗಳಿಗೆ ಅಲೆಯುವಂತಾಗಿದೆ.

ಆಗಲೂ ನೌಕರರಿಗೆ ವೇತನ ಸರಿಯಾಗಿ ನೀಡುತ್ತಿರಲಿಲ್ಲ. ವೇತನ ಪರಿಷ್ಕರಿಸಿ ಹಣ ಪಾವತಿಸದೇ ಬಾಕಿ ಇಟ್ಟು ಹೋಗಿದ್ದೀರಿ. ಅದರ ಭಾಗವೇ ಈಗಿನ ನೌಕರರ ಮುಷ್ಕರದ ಕೂಗು.

2020ರಲ್ಲಿ ಆಗಬೇಕಿದ್ದ ವೇತನ ಪರಿಷ್ಕರಣೆಯನ್ನು 2023ರ ಮಾರ್ಚ್‌ನಲ್ಲಿ ಮಾಡಲಾಗಿದೆ. ಈಗ ನೌಕರರ ವೇತನ ಪರಿಷ್ಕರಣೆ ತಡವಾಗಿರುವ ಬಗ್ಗೆ ಮಾತನಾಡುವುದಕ್ಕೆ ನಿಮಗೆ ಯಾವ ನೈತಿಕತೆಯೂ ಇಲ್ಲ. ವೇತನ ಪರಿಷ್ಕರಣೆ ಘೋಷಿಸಿ ಅದಕ್ಕೆ ಅನುದಾನ ಮೀಸಲಿಡಲಿಲ್ಲ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
24/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸೌತಾಂಪ್ಟನ್ ವಿಶ್ವವಿದ್ಯಾನಿಲದಿಂದ ಹೊಸ ವೃತ್ತಿಜೀವನ ಪ್ಯಾಕೇಜ್ ಪ್ರಾರಂಭ

ಮೈಸೂರು

ಸ್ಪರ್ಧಾತ್ಮಕ ಜಾಗತಿಕ ಉದ್ಯೋಗ ಮಾರುಕಟ್ಟೆಯಲ್ಲಿ ಭಾರತೀಯ ವಿದ್ಯಾರ್ಥಿಗಳು ಮುನ್ನಡೆ ಸಾಧಿಸಲು ಸಹಾಯ ಮಾಡುವ ಉದ್ದೇಶದಿಂದ ಸೌತಾಂಪ್ಟನ್ ವಿಶ್ವವಿದ್ಯಾನಿಲಯವು ಹೊಸ ವೃತ್ತಿಜೀವನ ಪ್ಯಾಕೇಜ್ ಅನ್ನು ಪ್ರಾರಂಭಿಸಿದೆ.

ಅರ್ಜಿದಾರರು ವಿಶ್ವವಿದ್ಯಾನಿಲಯಕ್ಕೆ ತಮ್ಮ ಆಹ್ವಾನವನ್ನು ಸ್ವೀಕರಿಸಿದ ಕ್ಷಣದಿಂದಲೇ, ಅವರಿಗೆ ಈ ವಿಶಿಷ್ಟವಾದ 'ಕರಿಯರ್ ಅಡ್ವಾಂಟೇಜ್' ಕಾರ್ಯಕ್ರಮದ ಮೂಲಕ ತರಬೇತಿ ಮತ್ತು ಬೆಂಬಲವನ್ನು ನೀಡಲಾಗುತ್ತದೆ.

ಸೌತಾಂಪ್ಟನ್‌ನಲ್ಲಿ ಯಶಸ್ವಿಯಾಗಿ ಪ್ರವೇಶ ಪಡೆಯುವ ಭಾರತೀಯ ಅಭ್ಯರ್ಥಿಗಳು ವಿಶೇಷ ಅವಕಾಶಗಳ ಪ್ರಯೋಜನವನ್ನು ಪಡೆಯಲಿದ್ದಾರೆ.

ಇದು ಭಾರತದಲ್ಲಿರುವ ವಿಶ್ವವಿದ್ಯಾನಿಲಯದ ಹೊಸ ವೃತ್ತಿಜೀವನ ಮಾರ್ಗದರ್ಶನ ತಂಡದ ಸಂಪರ್ಕವನ್ನು ಒಳಗೊಂಡಿರುತ್ತದೆ ಮತ್ತು ಉದ್ಯಮಶೀಲತಾ ಕೌಶಲಗಳನ್ನು ರೂಪಿಸಲು ಮತ್ತು ಅಭಿವೃದ್ಧಿಪಡಿಸಲು ಮೀಸಲಾದ ಬೆಂಬಲವನ್ನು ನೀಡುತ್ತದೆ.

'ಕರಿಯರ್ ಅಡ್ವಾಂಟೇಜ್' ಕಾರ್ಯಕ್ರಮವನ್ನು ಭಾರತೀಯ ವಿದ್ಯಾರ್ಥಿಗಳು ಯುಕೆಯಲ್ಲಿ ತಮ್ಮ ವ್ಯಾಸಂಗವನ್ನು ಪ್ರಾರಂಭಿಸುವ ಮೊದಲೇ ಅವರನ್ನು ಸಜ್ಜುಗೊಳಿಸಲು, ಸೌತಾಂಪ್ಟನ್‌ನಲ್ಲಿರುವಾಗ ಅವರ ಉದ್ಯೋಗ ಕೌಶಲಗಳನ್ನು ಅಭಿವೃದ್ಧಿಪಡಿಸಲು ಮತ್ತು ಪದವಿ ಮುಗಿಸಿದ ನಂತರ ಐದು ವರ್ಷಗಳವರೆಗೆ ನಿರಂತರ ಬೆಂಬಲವನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ.

ಭಾರತದಲ್ಲಿ ಕ್ಯಾಂಪಸ್ ಹೊಂದಿರುವ ವಿಶ್ವದ ಅಗ್ರ 100 ವಿಶ್ವವಿದ್ಯಾನಿಲಯಗಳಲ್ಲಿ ಮೊದಲನೆಯದಾಗಿರುವುದರಿಂದ, ಇಲ್ಲಿನ ವಿದ್ಯಾರ್ಥಿಗಳು ಸೌತಾಂಪ್ಟನ್ ವಿಶ್ವವಿದ್ಯಾನಿಲಯವು ಭಾರತೀಯ ಉದ್ಯೋಗದಾತರೊಂದಿಗೆ ಹೊಂದಿರುವ ಉತ್ತಮ ಸಂಬಂಧದ ಮತ್ತು ದೆಹಲಿ ಕ್ಯಾಂಪಸ್‌ಗೆ ಸಂಬಂಧಿಸಿದ ನೆಟ್‌ವರ್ಕ್‌ಗಳ ಪ್ರಯೋಜನವನ್ನು ಪಡೆಯಲಿದ್ದಾರೆ.

ಸೌತಾಂಪ್ಟನ್ ವಿಶ್ವವಿದ್ಯಾನಿಲಯವು ತನ್ನೆಲ್ಲಾ ವಿದ್ಯಾರ್ಥಿಗಳಿಗೆ ಅತ್ಯಗತ್ಯವಾದ ಎಐ ತರಬೇತಿಯನ್ನು ಪರಿಚಯಿಸಿದೆ.

# ಸಂಪಿನ ಕಾಮಗಾರಿಯ ತನಿಖೆಗೆ ಒತ್ತಾಯಿಸಿ ಮನವಿ



ವಿಜಯಪುರ

ಪಟ್ಟಣದ 11ನೇ ವಾರ್ಡ್‌ನ ಚಂದೇನಹಳ್ಳಿ ಗೇಟ್ ನಲ್ಲಿ, ಸ.ನಂ.69 ರಲ್ಲಿ ನಿರ್ಮಾಣ ಮಾಡುತ್ತಿರುವ ಕುಡಿಯುವ ನೀರಿನ ಸಂಪಿನ ಕಾಮಗಾರಿ ಕಳಪೆಯಾಗಿದ್ದು, ಕೂಡಲೇ ಸೂಕ್ತ ತನಿಖೆ ನಡೆಸುವಂತೆ ಕರ್ನಾಟಕ ದಲಿತ ಜನಸೇನೆಯ ಪದಾಧಿಕಾರಿಗಳು ಪುರಸಭೆ ಮುಖ್ಯಾಧಿಕಾರಿಗೆ ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ಕರ್ನಾಟಕ ದಲಿತ ಜನಸೇನೆಯ ರಾಜ್ಯಾಧ್ಯಕ್ಷ ಟಿ.ಭರತ್ ಮಾತನಾಡಿ, 11 ನೇ ವಾರ್ಡಿನಲ್ಲಿ ನಡೆಯುತ್ತಿರುವ ನೀರಿನ ಸಂಪಿನ ಕಾಮಗಾರಿಗೆ ಬಳಕೆ ಮಾಡುತ್ತಿರುವ ಕಬ್ಬಿಣ, ಸಿಮೆಂಟ್, ಹಾಗೂ ಎಂ.ಸ್ಯಾಂಡ್ ಗುಣಮಟ್ಟದಲ್ಲಿ ಇಲ್ಲ. ನಿಗದಿತ ಪ್ರಮಾಣದಲ್ಲಿ ಕಚ್ಚಾವಸ್ತುಗಳನ್ನು ಬಳಕೆ ಮಾಡಿಲ್ಲ. ಸಂಪಿನ ಸುತ್ತಲೂ, ಕಳಪೆ ಗುಣಮಟ್ಟದ ಮಣ್ಣನ್ನು ತಂದು ಸುರಿದಿದ್ದಾರೆ. ಕೇವಲ ಒಂದು ತಿಂಗಳಿನಲ್ಲಿ ಸಂಪಿನ ಕಾಮಗಾರಿ ಮಾಡಿದ್ದು, ಸರಿಯಾಗಿ ಕ್ಯೂರಿಂಗ್ ಮಾಡಿಲ್ಲ. ಈ ಬಗ್ಗೆ ಸೂಕ್ತ ತನಿಖೆಯಾಗಬೇಕು. ಗುತ್ತಿಗೆದಾರರ ಮೇಲೆ ಕ್ರಮ ಕೈಗೊಳ್ಳಬೇಕು. ಕಳಪೆ ಕಾಮಗಾರಿಯಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದು, ಅವರನ್ನು ಕಪ್ಪು ಪಟ್ಟಿಗೆ ಸೇರಿಸಬೇಕು ಎಂದು ಒತ್ತಾಯಿಸಿದರು.


ಮನವಿ ಪತ್ರವನ್ನು ಸ್ವೀಕರಿಸಿದ ಪುರಸಭೆ ಮುಖ್ಯಾಧಿಕಾರಿ ವೈ. ಎನ್.ಸತ್ಯನಾರಾಯಣ ಮಾತನಾಡಿ, ಸಂಪು ನಿರ್ಮಾಣದ ಕಾಮಗಾರಿಯೂ , ನಗರೋತ್ಥಾನ ಯೋಜನೆಯಡಿ, 4 ನೇ ಹಂತದಲ್ಲಿ, ಜಿಲ್ಲಾಧಿಕಾರಿಗಳ ಹಂತದಲ್ಲೆ ಕ್ರಿಯಾಯೋಜನೆ ತಯಾರಿಸಿ, ಟೆಂಡರ್ ಕರೆದು, ಕಾರ್ಯಾದೇಶ ವಿತರಣೆ ಮಾಡಿರುತ್ತಾರೆ. ಅದರಂತೆ ಗುತ್ತಿಗೆದಾರರು ಕಾಮಗಾರಿ ಮಾಡುತ್ತಿದ್ದಾರೆ. ಮನವಿಯಂತೆ ಪರಿಶೀಲನೆ ನಡೆಸಲು ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರಿಗೆ ರವಾನಿಸಲಾಗುತ್ತದೆ ಅಲ್ಲಿಂದ ವರದಿ ಬಂದ ನಂತರ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ದಲಿತ ಜನಸೇನೆ ಮುಖಂಡರಾದ ಹರೀಶ್, ಪ್ರವೀಣ್ ಕುಮಾರ್, ಕೃಷ್ಣಮೂರ್ತಿ, ಗಂಗಾಧರ್, ಪ್ರಕಾಶ್, ಮೋಹನ್, ಮುಂತಾದವರು ಹಾಜರಿದ್ದರು.

# ಸೊಮಾನಿ ಸೆರಾಮಿಕ್ಸ್ ಹೊಸ ಬ್ರಾಂಡ್ ಗುರುತು ಅನಾವರಣ

ಬೆಂಗಳೂರು

ಏಪ್ರಿಲ್ 23ವಿಶ್ವದ 12ನೇ ದೊಡ್ಡ ಟೈಲ್ ಉತ್ಪಾದಕ ಮತ್ತು ಭಾರತದಲ್ಲಿ ಟೈಲ್ಸ್, ಬಾತ್ ವೇರ್ ಮತ್ತು ಗೃಹ ಹಾಗೂ ಕಟ್ಟಡ ನಿರ್ಮಾಣ ಪರಿಹಾರಗಳಲ್ಲಿ ಮುಂಚೂಣಿಯ ಹೆಸರಾದ ಸೊಮಾನಿ ಸೆರಾಮಿಕ್ಸ್ ಲಿ. ಹೊಸ ಬ್ರಾಂಡ್ ಗುರುತನ್ನು ಅನಾವರಣಗೊಳಿಸಿದ್ದು ಗೃಹ ಮತ್ತು ಕಟ್ಟಡ ಪರಿಹಾರಗಳಿಗೆ ಒನ್-ಸ್ಟಾಪ್ ತಾಣವಾಗಿ ಅದರ ವಿಕಾಸದಲ್ಲಿ ಪ್ರಮುಖ ಮೈಲಿಗಲ್ಲಾಗಿದೆ.




ಈ ಪರಿಷ್ಕರಿಸಿದ ಗುರುತು ಐದು ದಶಕಗಳಲ್ಲಿ ಟೈಲ್ ಉತ್ಪಾದಕರಿಂದ ಸಮಕಾಲೀನ ವಾಸದ ಪರಿಸರಗಳನ್ನು ರೂಪಿಸುವವರೆಗೆ ಸೊಮಾನಿಯ ಪರಿವರ್ತನೆಯನ್ನು ಬಿಂಬಿಸುತ್ತದೆ. ಈ ಹೊಸ ಲೊಗೊ ಕಂಪನಿಯ ವಿಸ್ತರಿಸುತ್ತಿರುವ ಪೋರ್ಟ್‌ಫೊಲಿಯೊಗೆ ಪೂರಕವಾಗಿದ್ದು ಸಂಪೂರ್ಣ ಗೃಹ ಪರಿಹಾರಗಳ ಪೂರೈಕೆದಾರನಾಗಿ ಅದರ ಪಾತ್ರವನ್ನು ಮರು ದೃಢೀಕರಿಸಿದೆ.

ಈ ಬಿಡುಗಡೆ ಕುರಿತು ಸೊಮಾನಿ ಸೆರಾಮಿಕ್ಸ್ ಎಂ.ಡಿ. ಮತ್ತು ಸಿಇಒ ಅಭಿಷೇಕ್ ಸೊಮಾನಿ, "ಈ ಹೊಸ ಗುರುತು ನಮ್ಮ 55 ವರ್ಷಗಳ ಪ್ರಯಾಣದಲ್ಲಿ ಪ್ರಮುಖ ಕ್ಷಣವಾಗಿದೆ. ಇದು ಆವಿಷ್ಕಾರ, ಸುಸ್ಥಿರತೆ ಮತ್ತು ಗ್ರಾಹಕ-ಕೇಂದ್ರಿತತೆಗೆ ನಮ್ಮ ಬದ್ಧತೆಯನ್ನು ತೋರುತ್ತದೆ. ಇದು ನಂಬಿಕೆ, ಶಕ್ತಿ ಮತ್ತು ಹಲವು ಕಾಲದಿಂದ ನಾವು ನಿರ್ಮಿಸಿರುವ ವ್ಯಾಪ್ತಿಯನ್ನು ಮುಂದಕ್ಕೆ ಕೊಂಡೊಯ್ಯುವ ಮೂಲಕ ಭವಿಷ್ಯಕ್ಕೆ ನಮ್ಮ ದಿಕ್ಕನ್ನು ತೀಕ್ಷ್ಣಗೊಳಿಸುತ್ತಿದ್ದು ಮುಂದಿನ ತಲೆಮಾರಿನ ನಾಯಕತ್ವವು ಕಂಪನಿಯನ್ನು ಮುನ್ನಡೆಸಲು ಹೆಜ್ಜೆ ಇರಿಸುತ್ತಿದೆ" ಎಂದರು.

ತನ್ನ ಕೇಂದ್ರದಲ್ಲಿ ಹೊಸ ಗುರುತು ಮೃದುವಾದ, ಉದ್ದೇಶಪೂರ್ವಕ ತಿರುವುಗಳನ್ನು ಹೊಂದಿದ್ದು ಅದು ಆಧುನಿಕ ಸ್ಥಳಗಳ ದ್ರವತೆಯನ್ನು ತೋರುತ್ತದೆ. ಲೊಗೊ ಬಿಗಿತದಿಂದ ದೂರವಾಗಿ ಹೆಚ್ಚು ತಡೆರಹಿತ, ವಾಸ್ತುಶಿಲ್ಪೀಯ ಮಾದರಿ ತೆಗೆದುಕೊಂಡಿದ್ದು ತನ್ನ ಪರಂಪರೆಯೊಂದಿಗೆ ಮುಂದುವರಿಕೆಯ ಭಾವನೆ ಉಳಿಸಿಕೊಳ್ಳುತ್ತದೆ.

# ಮಹಿಳಾ ಮೀಸಲಾತಿ ಮಸೂದೆಗೆ ಕಾಂಗ್ರೆಸ್ ವಿರೋಧ ಖಂಡಿಸಿ ಜೆಡಿಎಸ್ ಪ್ರತಿಭಟನೆ

ದೊಡ್ಡಬಳ್ಳಾಪುರ

ದೇಶದ ರಾಜಕೀಯದಲ್ಲಿ ಮಹಿಳೆಯರಿಗೆ ಸಮಾನ ಅವಕಾಶ ಕಲ್ಪಿಸುವ 'ಮಹಿಳಾ ಮೀಸಲಾತಿ ಮಸೂದೆ' ಜಾರಿಗೆ ಅಡ್ಡಗಾಲು ಹಾಕುತ್ತಿರುವ ಕಾಂಗ್ರೆಸ್ ಪಕ್ಷವು ಮಹಿಳಾ ವಿರೋಧಿ ಎಂಬುದು ಸಾಬೀತಾಗಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಮಂಜುನಾಥ್ ಆರೋಪಿಸಿದರು.

ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳು ಸಹಕಾರ ನೀಡದ ಹಿನ್ನೆಲೆಯಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಹಾಗೂ ತಾಲೂಕು ಜೆಡಿಎಸ್ ವತಿಯಿಂದ ಬುಧವಾರ ನಗರದ ತಾಲೂಕು ಕಚೇರಿ ವೃತ್ತದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಮಂಜುನಾಥ್, "ಕೇಂದ್ರದ ಎನ್‌ಡಿಎ ಸರ್ಕಾರವು ಮಹಿಳಾ ಸಬಲೀಕರಣಕ್ಕಾಗಿ ಈ ಐತಿಹಾಸಿಕ ಮಸೂದೆಯನ್ನು ತಂದಿದೆ. ಆದರೆ, ಸಂಸತ್ತಿನಲ್ಲಿ ಬಹುಮತ ಸಿಗದಂತೆ ಕುತಂತ್ರ ಮಾಡುತ್ತಿರುವ ಕಾಂಗ್ರೆಸ್ ನಡೆ ದೇಶದ ಕೋಟ್ಯಂತರ ಮಹಿಳೆಯರಿಗೆ ಮಾಡಿದ ಅವಮಾನ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜೆಡಿಎಸ್ ಮುಖಂಡ ಡಾ. ವಿಜಯ್ ಕುಮಾರ್ ಮಾತನಾಡಿ, "ಕಳೆದ ಮೂರು ದಶಕಗಳಿಂದ ನೆನೆಗುದಿಗೆ ಬಿದ್ದಿದ್ದ ಮಸೂದೆಯನ್ನು ಜಾರಿ ಮಾಡಲು ಎನ್‌ಡಿಎ ಸರ್ಕಾರ ದಿಟ್ಟ ಹೆಜ್ಜೆ ಇಟ್ಟಿದೆ. ಈ ಸಮಯದಲ್ಲಿ ಪಕ್ಷಾತೀತ ಬೆಂಬಲ ನೀಡಬೇಕಿದ್ದ ಕಾಂಗ್ರೆಸ್, ಮಹಿಳೆಯರ ಹಕ್ಕನ್ನು



ಕಸಿದುಕೊಳ್ಳುವ ಪ್ರಯತ್ನ ಮಾಡುತ್ತಿದೆ" ಎಂದರು. ಮುಖಂಡ ಹರೀಶ್ ಗೌಡ ಮಾತನಾಡಿ, ಕೇವಲ ಮತಕ್ಕಾಗಿ ಮಹಿಳೆಯರ ಪರ ಎಂದು ಹೇಳಿಕೊಳ್ಳುವ ಕಾಂಗ್ರೆಸ್‌ನ ಅಸಲಿ ಮುಖ ಈಗ ಬಯಲಾಗಿದೆ ಎಂದು ಲೇವಡಿ ಮಾಡಿದರು.

ಪ್ರತಿಭಟನೆಗೂ ಮುನ್ನ ಜೆಡಿಎಸ್ ಕಾರ್ಯಕರ್ತರು ತಾಲೂಕು ಕಚೇರಿ ವೃತ್ತದಲ್ಲಿ ಬೃಹತ್ ಮಾನವ ಸರಪಳಿ ನಿರ್ಮಿಸಿ ಕಾಂಗ್ರೆಸ್ ವಿರುದ್ಧ ಘೋಷಣೆಗಳನ್ನು ಕೂಗಿದರು. ನಂತರ ಕಾಲ್ನಡಿಗೆಯ ಮೂಲಕ ತಾಲೂಕು ಕಚೇರಿಗೆ ತೆರಳಿ ತಹಶೀಲ್ದಾರರ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ಮಹಿಳಾ ಮುಖಂಡರು, ವಕೀಲ ಅಂಜನ್ ಗೌಡ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

# ಸುಸ್ಥಿರ ಛಾವಣಿ ತಂತ್ರಜ್ಞಾನಗಳ ಅನಾವರಣ

ಬೆಂಗಳೂರು

ಏಷ್ಯಾದ ಅತ್ಯಂತ ಪ್ರಮುಖ ಛಾವಣಿ ಮತ್ತು ಸಂಬಂಧಿತ ಉತ್ಪನ್ನಗಳ ಪ್ರದರ್ಶನವಾದ 'ರೂಫ್ ಇಂಡಿಯಾ'ದ 23ನೇ ಆವೃತ್ತಿಗೆ ಬೆಂಗಳೂರು ಅಂತಾರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ (ಬಿಐಇಸಿ) ಇಂದು ಅದ್ದೂರಿ ಚಾಲನೆ ದೊರೆಯಿತು. ಸುಸ್ಥಿರ ನಿರ್ಮಾಣ ಮತ್ತು ಇಂಧನ ಉಳಿತಾಯದ ಪರಿಕಲ್ಪನೆಯಡಿ ಆಯೋಜಿಸಲಾದ ಈ ಮೇಳದಲ್ಲಿ 150ಕ್ಕೂ ಹೆಚ್ಚು ಅಂತಾರಾಷ್ಟ್ರೀಯ ಬ್ರ್ಯಾಂಡ್ ಗಳು ಭಾಗವಹಿಸಿದ್ದು, ನಿರ್ಮಾಣ ಕ್ಷೇತ್ರದ ಅತ್ಯಾಧುನಿಕ ಆವಿಷ್ಕಾರಗಳು ಇಲ್ಲಿ




ಅನಾವರಣಗೊಂಡಿವೆ.

ಮೊದಲ ದಿನವೇ ಆರ್ಕಿಟೆಕ್ಟ್ ಗಳು ಮತ್ತು ಬಿಲ್ಡರ್ ಗಳಿಂದ ಭಾರಿ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಒಟ್ಟು 8,000ಕ್ಕೂ ಹೆಚ್ಚು ಮಂದಿ ಭೇಟಿ ನೀಡುವ ನಿರೀಕ್ಷೆಯಿದೆ. ಇನ್ಫಾರ್ಮಾ ಮಾರ್ಕೆಟ್ಸ್ ಇಂಡಿಯಾ ಆಯೋಜಿಸಿರುವ ಈ ಮೂರು ದಿನಗಳ ಪ್ರದರ್ಶನದಲ್ಲಿ ಭಾರತ ಸೇರಿದಂತೆ ಚೀನಾ, ಮಲೇಷ್ಯಾ, ಸೌದಿ ಅರೇಬಿಯಾ ಮತ್ತು ಟರ್ಕಿ ದೇಶಗಳ ಪ್ರಮುಖ ಕಂಪನಿಗಳು ಭಾಗವಹಿಸಿವೆ.

ಕಾರ್ಯಕ್ರಮದ ಕುರಿತು ಮಾತನಾಡಿದ ಇನ್ಫಾರ್ಮಾ ಮಾರ್ಕೆಟ್ಸ್ ಇನ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕರಾದ ಯೋಗೇಶ್ ಮುದ್ರಾಸ್ ಅವರು, "ಭಾರತದ ಕಟ್ಟಡ ಸಾಮಾಗ್ರಿಗಳ ಮಾರುಕಟ್ಟೆಯು 2030ರ ವೇಳೆಗೆ 1 ಟ್ರಿಲಿಯನ್ ಡಾಲರ್ ಮೀರಲಿದ್ದು, ಛಾವಣಿ ವಲಯವು ಇಲ್ಲಿ ಪ್ರಮುಖ ಪಾತ್ರ ವಹಿಸಲಿದೆ.

# ಲೀಪ್‌ಫ್ರಾಗ್ ವಿಸ್ತರಣೆಗೆ ಹೊಸ ಹೆಜ್ಜೆ

ಬೆಂಗಳೂರು

ಲೀಪ್‌ಫ್ರಾಗ್ ಇಂಜಿನಿಯರಿಂಗ್ ಸೇವೆಗಳು ಲಿಮಿಟೆಡ್ ತನ್ನ ಬೆಳವಣಿಗೆಯನ್ನು ಮತ್ತಷ್ಟು ವೇಗಗೊಳಿಸುವ ಉದ್ದೇಶದಿಂದ ಸಾರ್ವಜನಿಕ ಹಂಚಿಕೆ ಪ್ರಕಟಣೆಯನ್ನು ಘೋಷಿಸಿದೆ. ಕಂಪನಿಯ ಭವಿಷ್ಯದ ವಿಸ್ತರಣಾ ಯೋಜನೆಗಳಲ್ಲಿ ಇದು ಪ್ರಮುಖ ಹೆಜ್ಜೆಯಾಗಿ ಪರಿಗಣಿಸಲಾಗಿದೆ.

ಈ ಸಾರ್ವಜನಿಕ ಹಂಚಿಕೆಯ ಒಟ್ಟು ಮೌಲ್ಯ ರೂ.88.51 ಕೋಟಿ ಆಗಿದ್ದು, ಹೊಸ ಹಂಚಿಕೆಗಳ ಜೊತೆಗೆ ಹಳೆಯ ಹಂಚಿಕೆಗಳ ಮಾರಾಟವೂ ಇದರೊಳಗೆ ಸೇರಿದೆ. ಹೊಸ ಹಂಚಿಕೆಗಳ ಮೂಲಕ ರೂ.79.60 ಕೋಟಿ ಸಂಗ್ರಹಿಸುವ ನಿರೀಕ್ಷೆಯಿದ್ದು, ಉಳಿದ ರೂ.8.91 ಕೋಟಿ ಹಳೆಯ ಹಂಚಿಕೆಗಳ ಮಾರಾಟದಿಂದ ಲಭ್ಯವಾಗಲಿದೆ.

ಹಂಚಿಕೆ ಪ್ರಕ್ರಿಯೆ ಏಪ್ರಿಲ್ 23ರಿಂದ ಆರಂಭವಾಗಿ ಏಪ್ರಿಲ್




27ರವರೆಗೆ ಸಾರ್ವಜನಿಕರಿಗೆ ತೆರೆದಿರುತ್ತದೆ. ಹಂಚಿಕೆಗಳು ಏಪ್ರಿಲ್ 30ರಂದು ಮಾರುಕಟ್ಟೆಯಲ್ಲಿ ಪಟ್ಟಿಗೊಳ್ಳುವ ಸಾಧ್ಯತೆ ಇದೆ. ಪ್ರತಿ ಹಂಚಿಕೆಯ ಬೆಲೆ ರೂ.21ರಿಂದ ರೂ.23ರೊಳಗೆ ನಿಗದಿಯಾಗಿದ್ದು, ಸಣ್ಣ ಹೂಡಿಕೆದಾರರಿಗೆ ಕನಿಷ್ಠ ರೂ.1,38,000 ಹಾಗೂ ದೊಡ್ಡ ಹೂಡಿಕೆದಾರರಿಗೆ ಕನಿಷ್ಠ ರೂ.4,14,000 ಹೂಡಿಕೆ ಅಗತ್ಯವಿದೆ.

2005ರಲ್ಲಿ ಸ್ಥಾಪಿತವಾದ ಈ ಸಂಸ್ಥೆ ಇಂಜಿನಿಯರಿಂಗ್ ಮತ್ತು ಮೂಲಸೌಕರ್ಯ ಸೇವೆಗಳ ಕ್ಷೇತ್ರದಲ್ಲಿ ತನ್ನದೇ ಆದ ಸ್ಥಾನವನ್ನು ನಿರ್ಮಿಸಿಕೊಂಡಿದೆ. ವಿದ್ಯುತ್ ಕಾಮಗಾರಿಗಳು, ಸ್ವಯಂಚಾಲಿತ ವ್ಯವಸ್ಥೆಗಳು, ಅಗ್ನಿ ರಕ್ಷಣಾ ವ್ಯವಸ್ಥೆಗಳು ಮತ್ತು ಉಪಕೇಂದ್ರ ನಿರ್ಮಾಣ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕಂಪನಿ ಸೇವೆಗಳನ್ನು ಒದಗಿಸುತ್ತಿದೆ.

ತೈಲ ಮತ್ತು ಅನಿಲ, ಔಷಧಿ, ಆಹಾರ ಸಂಸ್ಕರಣೆ ಹಾಗೂ ಮೂಲಸೌಕರ್ಯ ಕ್ಷೇತ್ರಗಳಲ್ಲಿ ಹಲವು ಯೋಜನೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿರುವ ಕಂಪನಿಗೆ ಗ್ರಾಹಕರ ವಿಶ್ವಾಸ ಹೆಚ್ಚಾಗಿದೆ. ಆರಂಭದಿಂದ ಅಂತ್ಯವರೆಗೆ ಯೋಜನೆಗಳನ್ನು ನಿರ್ವಹಿಸುವ ಸಾಮರ್ಥ್ಯವು ಕಂಪನಿಗೆ ನಿರಂತರ ಕೆಲಸಗಳನ್ನು ತರಲು ಸಹಾಯ ಮಾಡುತ್ತಿದೆ.

# ಆಸಸ್‌ನಿಂದ ಅತ್ಯುನ್ನತ ಲ್ಯಾಪ್‌ಟಾಪ್ ಸರಣಿ ಬಿಡುಗಡೆ




ನವದೆಹಲಿ

ಜಾಗತಿಕ ತಂತ್ರಜ್ಞಾನ ಕ್ಷೇತ್ರದ ಪ್ರಮುಖ ಸಂಸ್ಥೆಯಾಗಿರುವ ಆಸಸ್, ಕೃತಕ ಬುದ್ಧಿಮತ್ತೆ ಆಧಾರಿತ ತನ್ನ ಹೊಸ ವ್ಯಾಪಾರ ಬಳಕೆಯ ಲ್ಯಾಪ್‌ಟಾಪ್ ಸರಣಿಯನ್ನು ಬಿಡುಗಡೆ ಮಾಡಿದೆ. ಇದರ ಭಾಗವಾಗಿ ಅತ್ಯಾಧುನಿಕ ವೈಶಿಷ್ಟ್ಯಗಳನ್ನು ಒಳಗೊಂಡ 'ಎಕ್ಸ್‌ಪರ್ಟ್ ಬುಕ್ ಅಲ್ಟ್ರಾ' ಹಾಗೂ ವಿಸ್ತರಿತ 'ಎಕ್ಸ್‌ಪರ್ಟ್‌ಬುಕ್ ಪಿ ಸರಣಿ'ಯನ್ನು ಅನಾವರಣ ಗೊಳಿಸಲಾಗಿದೆ.

ವ್ಯಾಪಾರ ನಾಯಕರು ಮತ್ತು ಉನ್ನತಾಧಿಕಾರಿಗಳನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸಗೊಳಿಸಲಾದ ಎಕ್ಸ್‌ಪರ್ಟ್‌ಬುಕ್ ಅಲ್ಟ್ರಾ, ಅತ್ಯಂತ ಹಗುರ ವಿನ್ಯಾಸ, ದಿನಪೂರ್ತಿ ಬ್ಯಾಟರಿ ಸಾಮರ್ಥ್ಯ, ಅತ್ಯುನ್ನತ ಕಾರ್ಯಕ್ಷಮತೆ ಮತ್ತು ಆಕರ್ಷಕ ಪ್ರದರ್ಶನವನ್ನು ಒದಗಿಸುತ್ತದೆ. ಇದರಲ್ಲಿ ಉತ್ತಮ ಧ್ವನಿ ಅನುಭವ, ಸುಗಮ ಟೈಪಿಂಗ್ ವ್ಯವಸ್ಥೆ, ಬಲಿಷ್ಠ ದೈಹಿಕ ವಿನ್ಯಾಸ ಮತ್ತು ಉನ್ನತ ಮಟ್ಟದ ಭದ್ರತಾ ವ್ಯವಸ್ಥೆಗಳು ಕೂಡ ಒಳಗೊಂಡಿವೆ.

ಇದರ ಜೊತೆಗೆ, ಎಕ್ಸ್‌ಪರ್ಟ್‌ಬುಕ್ ಪಿ ಸರಣಿಯನ್ನು ಪಿ-3 ಮತ್ತು ಪಿ-5 ಮಾದರಿಗಳ ಮೂಲಕ ವಿಸ್ತರಿಸಲಾಗಿದ್ದು, ಸಣ್ಣ ಮತ್ತು ಮಧ್ಯಮ ಮಟ್ಟದ ಉದ್ಯಮಗಳಿಗೆ ಹೆಚ್ಚು ಕಾರ್ಯಕ್ಷಮತೆ ಮತ್ತು ಭವಿಷ್ಯಮುಖಿ ತಂತ್ರಜ್ಞಾನವನ್ನು ಒದಗಿಸುವ ಗುರಿ ಹೊಂದಿದೆ. ಈ ಹೊಸ ಲ್ಯಾಪ್‌ಟಾಪ್ ಸರಣಿಗಳು 'ಚಿಂತೆಯಿಲ್ಲದ ವ್ಯಾಪಾರ' ಎಂಬ ತತ್ವದಡಿ ರೂಪುಗೊಂಡಿದ್ದು, ಕಾರ್ಯಕ್ಷಮತೆ, ಭದ್ರತೆ, ದೀರ್ಘಾಯುಷ್ಯ ಮತ್ತು ಚಲನೆಯ ಸುಗಮತೆಯನ್ನು ಒಟ್ಟುಗೂಡಿಸುವ ಮೂಲಕ ಸಮಗ್ರ ಸೇವಾ ಅನುಭವವನ್ನು ಒದಗಿಸುತ್ತವೆ.

ಬಿಡುಗಡೆ ಕುರಿತು ಮಾತನಾಡಿದ ಸಂಸ್ಥೆಯ ಜಾಗತಿಕ ಸಹ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, "ನಮ್ಮ ವಿನ್ಯಾಸ ಚಿಂತನೆ ಮಾನವ ಸಾಮರ್ಥ್ಯವನ್ನು ಅರ್ಥಮಾಡಿಕೊಳ್ಳುವುದರ ಮೇಲೆ ಆಧಾರಿತವಾಗಿದೆ. ಇಂದಿನ ದಿನಗಳಲ್ಲಿ ವ್ಯವಹಾರ ನಡೆಸುವ ವಿಧಾನದಲ್ಲಿ ಮಹತ್ತರ ಬದಲಾವಣೆ ಕಂಡುಬರುತ್ತಿದ್ದು, ಭಾರತದಲ್ಲಿ ಈ ಕೃತಕ ಬುದ್ಧಿಮತ್ತೆ ಆಧಾರಿತ ಕ್ರಾಂತಿಗೆ ಮುನ್ನಡೆಸುವುದರಲ್ಲಿ ನಾವು ಹೆಮ್ಮೆಪಡುತ್ತೇವೆ" ಎಂದು ಹೇಳಿದರು. ಈ ಬಿಡುಗಡೆ ಕಾರ್ಯಕ್ರಮದಲ್ಲಿ ಆಸಸ್ ಸಹ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ಯಾಮ್ಸನ್ ಹು ಹಾಗೂ ಆಸಸ್, ಇಂಟೆಲ್ ಮತ್ತು ಫ್ಲಿಪ್‌ಕಾರ್ಟ್ ಸಂಸ್ಥೆಗಳ ನಾಯಕತ್ವ ತಂಡದ ಸದಸ್ಯರು ಉಪಸ್ಥಿತರಿದ್ದರು. ಖ್ಯಾತ ವಕ್ತಾರ ಮತ್ತು ಉದ್ಯಮಿ ರಾಜ್ ಶಾಮನಿ ಕೂಡ ಕಾರ್ಯಕ್ರಮದಲ್ಲಿ ಭಾಗವಹಿಸಿ ಹೊಸ ತಂತ್ರಜ್ಞಾನಗಳ ಮಹತ್ವವನ್ನು ವಿವರಿಸಿದರು.

# ನಥಿಂಗ್‌ನ ಬೆಂಗಳೂರು ಮಳಿಗೆಗೆ ಆರ್‌ಸಿಬಿ ಆಟಗಾರರ ಭೇಟಿ

ಬೆಂಗಳೂರು

ಪ್ರಸಕ್ತ 2026ರ ಟಿ20 ಕ್ರಿಕೆಟ್ ಸರಣಿಗೆ ಆರ್‌ಸಿಬಿ ತಂಡದ ಟೈಟಲ್ ಸ್ಪಾನ್ಸರ್ ಆಗಿರುವ ಲಂಡನ್ ಮೂಲದ ತಂತ್ರಜ್ಞಾನ ಸಂಸ್ಥೆ ನಥಿಂಗ್ ನ ಬೆಂಗಳೂರು ಮಳಿಗೆಗೆ ಈ ಪಾಲುದಾರಿಕೆಯ ಭಾಗವಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ತಂಡದ ಪ್ರಮುಖ ಆಟಗಾರರು ಭೇಟಿ ನೀಡಿದರು.




ತಂಡದ ವೇಗಿಗಳಾದ ಭುವನೇಶ್ವರ್ ಕುಮಾರ್, ಜೋಶ್ ಹೇಜಲ್‌ವುಡ್ ಹಾಗೂ ರೊಮಾರಿಯೋ ಶೆಫರ್ಡ್ ಮತ್ತು ಜೇಕಬ್ ಬೆಥೆಲ್ ಮಳಿಗೆಗೆ ಆಗಮಿಸಿದ್ದು, ಆ ಸಂದರ್ಭದಲ್ಲಿ ಅಭಿಮಾನಿಗಳ ಹರ್ಷೋದ್ಗಾರ ಮುಗಿಲು ಮುಟ್ಟಿತ್ತು.

ಆಟಗಾರರು ಮಳಿಗೆಯಲ್ಲಿದ್ದ ಗ್ಯಾಜೆಟ್ ಗಳನ್ನು ವೀಕ್ಷಿಸಿದರಲ್ಲದೆ, ಗ್ರಾಹಕರೊಂದಿಗೆ ಕೆಲಕಾಲ ಮಾತುಕತೆ ನಡೆಸಿದರು.

ಭೇಟಿಯ ನೆನಪಿಗಾಗಿ ಮಳಿಗೆಯ ಗಾಜಿನ ಕಿಟಕಿಯ ಮೇಲೆ ಗ್ರಾಫಿಟಿ ಶೈಲಿಯಲ್ಲಿ "RCB was here" ಎಂದು ಬರೆಯುವ ಮೂಲಕ ತಂಡದ ಉಪಸ್ಥಿತಿಯನ್ನು ದಾಖಲಿಸಿದರು.

# ಅತ್ಯಾಧುನಿಕ ಲೀನ್ ಮ್ಯಾನುಫ್ಯಾಕ್ಚರಿಂಗ್ ಘಟಕ ಉದ್ಘಾಟನೆ

ಬೆಂಗಳೂರು

ನಿಖರ ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಆಜಾದ್ ಇಂಜಿನಿಯರಿಂಗ್ ಕಂಪನಿಯು, ಹೈದರಾಬಾದ್ನ ತುನಿಕಿಬೊಲ್ಲಾರಂನಲ್ಲಿರುವ ತನ್ನ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ 7,600 ಚದರ ಮೀಟರ್ ವಿಸ್ತೀರ್ಣದ ಮುಂದಿನ ಪೀಳಿಗೆಯ 'ಲೀನ್ ಮ್ಯಾನುಫ್ಯಾಕ್ಚರಿಂಗ್' ಘಟಕವನ್ನು ಉದ್ಘಾಟಿಸುವ ಮೂಲಕ ಮತ್ತೊಂದು ಮೈಲಿಗಲ್ಲು ಸ್ಥಾಪಿಸಿದೆ.

ಜಾಗತಿಕ ಇಂಧನ ತಂತ್ರಜ್ಞಾನ ಸಂಸ್ಥೆಯಾದ ಬೇಕರ್ ಹ್ಯೂಸ್ ಜೊತೆಗಿನ ಹೆಚ್ಚುತ್ತಿರುವ ವಾಣಿಜ್ಯ ಬದ್ಧತೆಗಳನ್ನು ಪೂರೈಸಲು ಈ ಘಟಕವನ್ನು ಜಾಗತಿಕ ಉತ್ಪಾದನಾ ಮಾನದಂಡಗಳಿಗೆ ಅನುಗುಣವಾಗಿ ನಿರ್ಮಿಸಲಾಗಿದೆ.




# ಮಹಿಳೆಯರ ಸಬಲೀಕರಣಕ್ಕೆ ಕ್ರೀಡೆ ಶಕ್ತಿಯುತ ಸಾಧನ: ಬ್ಲಾಂಕಾ ವ್ಲಾಸಿಕ್

ಬೆಂಗಳೂರು

ವಿಶ್ವ ಅಥ್ಲೆಟಿಕ್ಸ್ ಗೋಲ್ಡ್ ಲೇಬಲ್ ರೇಸ್‌ನ 18ನೇ ಆವೃತ್ತಿಗೆ ಮುನ್ನ ಬೆಂಗಳೂರಿನಲ್ಲಿ ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದ ಡಬಲ್ ಒಲಿಂಪಿಕ್ ಪದಕ ವಿಜೇತೆ ಮತ್ತು ಟಿಸಿಎಸ್ ವರ್ಲ್ಡ್ 10ಕೆ ಬೆಂಗಳೂರು 2026 ರ ಅಂತಾರಾಷ್ಟ್ರೀಯ ಕೂಟದ ರಾಯಭಾರಿಯಾಗಿರುವ ಬ್ಲಾಂಕಾ ವ್ಲಾಸಿಕ್ ಅವರು ಮಹಿಳೆಯರನ್ನು ಸಬಲೀಕರಣಗೊಳಿಸುವಲ್ಲಿ ಕ್ರೀಡೆಯ ಪಾತ್ರವನ್ನು ಬಿಂಬಿಸಿದರು.

42 ವರ್ಷದ ಕ್ರೊಯೇಷಿಯನ್ ಮತ್ತು ದಂತಕಥೆ ಹೈ-ಜಂಪರ್ ಓಟದೊಂದಿಗೆ ತಮ್ಮದೇ ಆದ ಪ್ರಯಾಣ, ಭಾರತದ ಬೆಳೆಯುತ್ತಿರುವ ಕ್ರೀಡಾ ಪರಿಸರ ವ್ಯವಸ್ಥೆ ಮತ್ತು ರೇಸ್ ಡೇಗೆ ಮುಂಚಿತವಾಗಿ ಭಾಗವಹಿಸುವವರಿಗೆ ನೀಡಿದ ಸಂದೇಶದ ಬಗ್ಗೆ ಪ್ರತಿಬಿಂಬಿಸಿದರು.

ಈ ಭಾನುವಾರ 36,000 ಭಾಗವಹಿಸುವವರು ಮತ್ತು




9000 ಕ್ಕೂ ಹೆಚ್ಚು ಮಹಿಳೆಯರು ಭಾಗವಹಿಸಲು ಸಜ್ಜಾಗಿದ್ದಾರೆ. ವ್ಲಾಸಿಕ್ ಕ್ರೀಡೆಯ ಪರಿವರ್ತಕ ಪರಿಣಾಮದ ಬಗ್ಗೆ ಮಾತನಾಡಿದರು. ವಿಶೇಷವಾಗಿ ಮಹಿಳೆಯರಿಗೆ. ಆತ್ಮವಿಶ್ವಾಸ ಮತ್ತು ಆತ್ಮವಿಶ್ವಾಸವನ್ನು ಬೆಳೆಸುವಲ್ಲಿ ಅನುವಾಗಲಿದೆ. ಅದು ವಹಿಸುವ ಪಾತ್ರವನ್ನು ವ್ಲಾಸಿಕ್ ಒತ್ತಿ ಹೇಳಿದರು.


"ಕ್ರೀಡೆ ನನಗೆ ದೈನಂದಿನ ಜೀವನದ ಬೇರ್ಪಡಿಸಲಾಗದ ಭಾಗವಾಗಿದೆ. ಇದು ನಿಮ್ಮ ದೈಹಿಕ ಆರೋಗ್ಯದ ಮೇಲೆ ಮಾತ್ರವಲ್ಲ, ನಿಮ್ಮ ಮಾನಸಿಕ ಆರೋಗ್ಯ ಮತ್ತು ಒಟ್ಟಾರೆ ಆತ್ಮವಿಶ್ವಾಸದ ಮೇಲೂ ಪರಿಣಾಮ ಬೀರುತ್ತದೆ. ವಿಶೇಷವಾಗಿ ಮಹಿಳೆಯರಿಗೆ, ನಿಮ್ಮಲ್ಲಿ ನಂಬಿಕೆಯನ್ನು ಬೆಳೆಸುವ ಏನನ್ನಾದರೂ ಹೊಂದಿರುವುದು ತುಂಬಾ ಮುಖ್ಯ, ನೀವು ಒಂದು ಗುರಿಯನ್ನು ಸಾಧಿಸಿದಾಗ, ಇತರ ಗುರಿಗಳು ಸಹ ಸಾಧ್ಯ ಎಂದು ನೀವು ಅರಿತುಕೊಳ್ಳುತ್ತೀರಿ.ಭಾರತದಲ್ಲಿ ಹೆಚ್ಚು ಹೆಚ್ಚು ಮಹಿಳೆಯರು ಓಟವನ್ನು ತೆಗೆದುಕೊಳ್ಳುವುದನ್ನು ನೋಡುವುದು ಅದ್ಭುತವಾಗಿದೆ" ಎಂದು ವ್ಲಾಸಿಕ್ ಹೇಳಿದರು. ನಿವೃತ್ತಿಯ ನಂತರ ತನ್ನದೇ ಆದ ಪರಿವರ್ತನೆಯ ಬಗ್ಗೆ ಮಾತನಾಡುತ್ತಾ, ವ್ಲಾಸಿಕ್ ಸಕ್ರಿಯವಾಗಿರಲು ಒಂದು ಮಾರ್ಗವಾಗಿ ಓಡುವ ಸರಳತೆ ಮತ್ತು ಪ್ರವೇಶವನ್ನು ಬಿಂಬಿಸಿದರು.

# ಔಷಧಿಗಳನ್ನು ಹೊರಗೆ ಬರೆದುಕೊಟ್ಟರೆ ವೈದ್ಯರ ವಿರುದ್ಧ ಕ್ರಮ: ಜಿಲ್ಲಾಧಿಕಾರಿ ಜಿ. ಪ್ರಭು

ಚಿಕ್ಕಬಳ್ಳಾಪುರ

ಸರ್ಕಾರಿ ಆಸ್ಪತ್ರೆಗಳಿಗೆ ಚಿಕಿತ್ಸೆಗಾಗಿ ಬರುವ ರೋಗಿಗಳಿಗೆ ಔಷಧಿಗಳನ್ನು ಹೊರಗಡೆ ಖರೀದಿಸಲು ಚೀಟಿ ನೀಡಬಾರದು. ಒಂದು ವೇಳೆ ವೈದ್ಯಾಧಿಕಾರಿಗಳು ನಿಯಮ ಮೀರಿ ಹೊರಗಿನ ಔಷಧಿಗೆ ಸೂಚಿಸಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗೌರಿಬಿದನೂರು ತಾಲೂಕಿನ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಬುಧವಾರ ದಿಢೀರ್ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಆಸ್ಪತ್ರೆಯ ವ್ಯವಸ್ಥೆಗಳನ್ನು ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು.



"ಜಿಲ್ಲೆಯಲ್ಲಿ ಹಾವು ಕಡಿತ, ನಾಯಿ ಕಡಿತ ಸೇರಿದಂತೆ ಅಗತ್ಯವಿರುವ ಎಲ್ಲಾ ಔಷಧಿಗಳ ದಾಸ್ತಾನು ಹೇರಳವಾಗಿದೆ. ಸರ್ಕಾರದಿಂದ ಜನರಿಗೆ ಸಿಗಬೇಕಾದ ತಪಾಸಣೆ, ಚಿಕಿತ್ಸೆ ಹಾಗೂ ಔಷಧಿಗಳು ಸಂಪೂರ್ಣ ಉಚಿತವಾಗಿ, ಸಕಾಲದಲ್ಲಿ ದೊರೆಯಬೇಕು. ಈ ನಿಟ್ಟಿನಲ್ಲಿ ನಿರಂತರ ನಿಗಾ ವಹಿಸುವಂತೆ ಜಿಲ್ಲಾ ಆರೋಗ್ಯ ಅಧಿಕಾರಿಗಳಿಗೆ (DHO) ಸೂಚಿಸಲಾಗಿದೆ" ಎಂದು ತಿಳಿಸಿದರು. ಗೌರಿಬಿದನೂರು ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಪ್ರತಿ ತಿಂಗಳು ಸುಮಾರು 15,000 ಹೊರರೋಗಿಗಳು ಹಾಗೂ 500 ಒಳರೋಗಿಗಳು ಚಿಕಿತ್ಸೆ ಪಡೆಯುತ್ತಿರುವುದನ್ನು ಅವರು ಈ ವೇಳೆ ಗಮನಿಸಿದರು.

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಹಾಗೂ ಸರ್ಕಾರಿ ಸ್ಕ್ಯಾನಿಂಗ್ ಸೆಂಟರ್‌ಗಳು ಕಾನೂನು ರೀತ್ಯ ನಡೆಯಬೇಕು. ಭ್ರೂಣ ಲಿಂಗ ಪತ್ತೆ ಮಾಡುವಂತಹ ಅಕ್ರಮ ಚಟುವಟಿಕೆಗಳು ನಡೆದರೆ ಪರವಾನಗಿ ರದ್ದುಪಡಿಸಲಾಗುವುದು. ಅಕ್ರಮ ತಡೆಗೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಕಟ್ಟುನಿಟ್ಟಿನ ಕಣ್ಗಾವಲು ಇಡಲಾಗಿದೆ ಎಂದು ಎಚ್ಚರಿಸಿದರು.

ಜಿಲ್ಲಾ ಆಸ್ಪತ್ರೆಗೆ ಹೈಟೆಕ್ ಸ್ಪರ್ಶ

ಹೊಸ ಯಂತ್ರೋಪಕರಣ: ಜಿಲ್ಲಾ ಆಸ್ಪತ್ರೆಗೆ ಬೇಕಿರುವ ಒಖಖ ಮತ್ತು ಅಖ ಸ್ಕ್ಯಾನಿಂಗ್ ಯಂತ್ರಗಳ ಖರೀದಿಗೆ ಈಗಾಗಲೇ ಆದೇಶ ನೀಡಲಾಗಿದೆ.

ಸೂಪರ್ ಸ್ಪೆಷಾಲಿಟಿ ಸೇವೆ: ಕಿಡ್ನಿ, ಹೃದಯ, ಮೆದುಳು ಹಾಗೂ ಬೆನ್ನುಮೂಳೆಗೆ ಸಂಬಂಧಿಸಿದ ಕಾಯಿಲೆಗಳಿಗೆ ಜಿಲ್ಲಾ ವೈದ್ಯಕೀಯ ಕಾಲೇಜಿನಲ್ಲಿ ಶೀಘ್ರದಲ್ಲೇ ಉಚಿತವಾಗಿ ಸೂಪರ್ ಸ್ಪೆಷಾಲಿಟಿ ಸೇವೆ ಒದಗಿಸಲು ಕ್ರಮ ಕೈಗೊಳ್ಳಲಾಗಿದೆ.

ಮನೆಮನೆ ತಪಾಸಣೆ: 30 ವರ್ಷ ಮೇಲ್ಪಟ್ಟವರಿಗೆ 10 ಪ್ರಮುಖ ಕಾಯಿಲೆಗಳ ತಪಾಸಣೆ ಮಾಡಲು ಶೀಘ್ರದಲ್ಲೇ ಜಿಲ್ಲಾದ್ಯಂತ ಮನೆಮನೆ ಆರೋಗ್ಯ ಅಭಿಯಾನ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಸೇರಿದಂತೆ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಇಂದಿನಿಂದ ಸಿಇಟಿ ಪರೀಕ್ಷೆ ಆರಂಭ

ತಿಪಟೂರು

ಇಂಜಿನಿಯರಿಂಗ್, ವೆಟರ್ನರಿ, ಫಾರ್ಮಸಿ ಹಾಗೂ ಕೃಷಿ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕಾಗಿ ನಡೆಯುವ ಸಾಮಾನ್ಯ ಪ್ರವೇಶ ಪರೀಕ್ಷೆ (CET–2026) ನಗರದ ಮೂರು ಕೇಂದ್ರಗಳಲ್ಲಿ ನಡೆಯಲಿದೆ ಎಂದು ಪ್ರಾಂಶುಪಾಲ ಹಾಗೂ ನೋಡಲ್ ಅಧಿಕಾರಿ ಎಂ.ಡಿ. ಶಿವಕುಮಾರ್ ತಿಳಿಸಿದ್ದಾರೆ.

ಈ ಬಾರಿ ತಾಲೂಕಿನಲ್ಲಿ ಒಟ್ಟು 2,166 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದು, ಸುಸೂತ್ರವಾಗಿ ಪರೀಕ್ಷೆ ನಡೆಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ.

ಪರೀಕ್ಷಾ ಕೇಂದ್ರಗಳ ವಿವರ:

ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು– 798 ವಿದ್ಯಾರ್ಥಿಗಳು.

ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು– 768 ವಿದ್ಯಾರ್ಥಿಗಳು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು– 600 ವಿದ್ಯಾರ್ಥಿಗಳು.

ಪರೀಕ್ಷಾ ವೇಳಾಪಟ್ಟಿ:

ಏಪ್ರಿಲ್ 23: ಭೌತಶಾಸ್ತ್ರ (Physics) ಮತ್ತು ರಾಸಾಯನಶಾಸ್ತ್ರ (Chemistry).

ಏಪ್ರಿಲ್ 24: ಗಣಿತಶಾಸ್ತ್ರ (Mathematics) ಮತ್ತು ಜೀವಶಾಸ್ತ್ರ (Biology).

ಕಟ್ಟುನಿಟ್ಟಿನ ವಸ್ತ್ರ ಸಂಹಿತೆ ಮತ್ತು ನಿಷೇಧಿತ ವಸ್ತುಗಳು:

ಪರೀಕ್ಷಾ ಅಕ್ರಮ ತಡೆಯಲು ಕೆಇಎ (KEA) ಸೂಚನೆಯಂತೆ ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೊಳಿಸಲಾಗಿದೆ:

ನಿಷೇಧಿತ ಸಾಧನಗಳು: ಮೊಬೈಲ್, ಕ್ಯಾಲ್ಕುಲೇಟರ್, ಬ್ಲೂಟೂತ್, ಪೆನ್ ಡ್ರೈವ್, ಇಯರ್ ಫೋನ್, ಮೈಕ್ರೋಫೋನ್, ಸ್ಕ್ಯಾನರ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಸಂವಹನ ಸಾಧನಗಳು ಮತ್ತು ಕೈಗಡಿಯಾರಗಳನ್ನು ಪರೀಕ್ಷಾ ಕೇಂದ್ರದೊಳಗೆ ಕೊಂಡೊಯ್ಯುವಂತಿಲ್ಲ.

ವಸ್ತ್ರ ಸಂಹಿತೆ: ತುಂಬು ತೋಳಿನ ಶರ್ಟ್ (Full sleeve shirts) ಧರಿಸುವುದನ್ನು ನಿಷೇಧಿಸಲಾಗಿದೆ. ಕಿವಿಯನ್ನು ಮುಚ್ಚುವಂತಹ ಉಡುಪುಗಳನ್ನು ಧರಿಸುವಂತಿಲ್ಲ.

ಆಭರಣಗಳು: ಮಂಗಳಸೂತ್ರವನ್ನು ಹೊರತುಪಡಿಸಿ ಇತರೆ ಯಾವುದೇ ಲೋಹದ ಆಭರಣಗಳು ಅಥವಾ ವಸ್ತುಗಳನ್ನು ಧರಿಸಲು ಅನುಮತಿಯಿಲ್ಲ.

ನಿಯಮ ಉಲ್ಲಂಘಿಸುವ ಅಭ್ಯರ್ಥಿಗಳಿಗೆ ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರದೊಳಗೆ ಪ್ರವೇಶ ನೀಡಲಾಗುವುದಿಲ್ಲ ಎಂದು ನೋಡಲ್ ಅಧಿಕಾರಿಗಳು ಎಚ್ಚರಿಸಿದ್ದಾರೆ.

# ಸಾರ್ವಜನಿಕರ ದೂರಿಗೆ ಕಂಟ್ರೋಲ್ ರೂಂ ಸ್ಥಾಪನೆ

ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ಬಿಸಿಲಿನ ತಾಪ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಉದ್ಭವಿಸಬಹುದಾದ ಕುಡಿಯುವ ನೀರಿನ ಸಮಸ್ಯೆ ಹಾಗೂ ಕೃಷಿ ಚಟುವಟಿಕೆಗಳಿಗೆ ಪೂರಕವಾದ ಬಿತ್ತನೆ ಬೀಜ, ಮೇವು ಮತ್ತು ರಸಗೊಬ್ಬರದ ಕೊರತೆ ನೀಗಿಸಲು ಜಿಲ್ಲಾಡಳಿತವು ವಿಶೇಷ ಕಂಟ್ರೋಲ್ ರೂಂಗಳನ್ನು ಸ್ಥಾಪಿಸಿದೆ.

ಸಾರ್ವಜನಿಕರು ಯಾವುದೇ ಸಮಸ್ಯೆಗಳಿದ್ದಲ್ಲಿ ಆಯಾ ತಾಲ್ಲೂಕಿನ ತಹಶೀಲ್ದಾರ್ ಕಚೇರಿ ಅಥವಾ ಜಿಲ್ಲಾಧಿಕಾರಿಗಳ ಕಚೇರಿಯ ಸಹಾಯವಾಣಿಗೆ ಕರೆ ಮಾಡಬಹುದು ಎಂದು ಡಿಸಿ ಜಿ. ಪ್ರಭು ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರ– 08156–272564 ಶಿಡ್ಲಘಟ್ಟ 08158–256764 ಚಿಂತಾಮಣಿ– 08154–252164 ಗೌರಿಬಿದನೂರು– 08155–200369

ಬಾಗೇಪಲ್ಲಿ– 08150–200127 ಗುಡಿಬಂಡೆ– 08156–271250 ಚೇಳೂರು– 08150–200072 (ಮೊಬೈಲ್) ಜಿಲ್ಲಾಧಿಕಾರಿಗಳ ಕಚೇರಿಯ ಸಹಾಯ ವಾಣಿ ಸಂಖ್ಯೆ 08156–277002 ಗೂ ಕರೆ ಮಾಡಿ ಸಾರ್ವಜನಿಕರು ತಮ್ಮ ದೂರುಗಳನ್ನು ದಾಖಲಿಸಿ ಪರಿಹಾರ ಕಂಡುಕೊಳ್ಳಬಹುದು ಎಂದು ಕೋರಲಾಗಿದೆ.

# ಆರ್ಥಿಕ ಅಭಿವೃದ್ಧಿಗೆ ಹಣಕಾಸು ಸಂಸ್ಥೆಗಳ ಪಾತ್ರ ಹಿರಿದು: ಸಿದ್ದಬಸವ ಸ್ವಾಮೀಜಿ ಅಭಿಮತ

ತಿಪಟೂರು

ದೇಶದ ಆರ್ಥಿಕ ಪ್ರಗತಿಯಲ್ಲಿ ರಾಷ್ಟ್ರೀಕೃತ ಬ್ಯಾಂಕ್‌ಗಳಷ್ಟೇ ಖಾಸಗಿ ಹಣಕಾಸು ಸಂಸ್ಥೆಗಳ ಸೇವೆಯೂ ಅನನ್ಯವಾಗಿದೆ. ಗ್ರಾಹಕರಿಗೆ ಉತ್ತಮ ಸೇವೆ ನೀಡುವುದರ ಮೂಲಕ ಆರ್ಥಿಕ ವಹಿವಾಟನ್ನು ವಿಸ್ತರಿಸಬೇಕು ಎಂದು ಬೂದಾಳು ವಿರಕ್ತಮಠದ ಪೀಠಾಧ್ಯಕ್ಷರಾದ ಶ್ರೀ ಶಶಿಶೇಖರ ಸಿದ್ದಬಸವ ಸ್ವಾಮೀಜಿ ತಿಳಿಸಿದರು.

ನಗರದ ಹಾಲ್ಕುರಿಕೆ ರಸ್ತೆ ಗೋವಿನಪುರ ಸರ್ಕಲ್ ಬಳಿಯ ಪ್ರದ್ಯುತ್ ಆರ್ಕೇಡ್‌ನಲ್ಲಿ ಕೇಂದ್ರ ಸರ್ಕಾರದ ಸಹಕಾರ ಇಲಾಖೆಯ ಮಾನ್ಯತೆ ಪಡೆದ ಮಂಗಳೂರು ಮೂಲದ 'ಸಮರ್ಥ ನಿಧಿ ಲಿಮಿಟೆಡ್' ನ ನೂತನ ಶಾಖೆಯನ್ನು ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

"ಹಣಕಾಸು ಸಂಸ್ಥೆಗಳು ಬೆಳೆಯಲು ಗ್ರಾಹಕರೊಂದಿಗೆ ನಂಬಿಕೆ ಹಾಗೂ ಸೌಜನ್ಯಯುತ ಬಾಂಧವ್ಯ ಬಹಳ ಮುಖ್ಯ. ಬಸವ ಜಯಂತಿಯ ಶುಭ ದಿನದಂದೇ ಈ ಸಂಸ್ಥೆ ಕಾರ್ಯಾರಂಭ ಮಾಡುತ್ತಿರುವುದು ಸಂತಸದ ವಿಷಯ. ತಾಲೂಕಿನ ಕಟ್ಟಕಡೆಯ ಬಡ ಕುಟುಂಬದವರಿಗೂ ಈ ಸಂಸ್ಥೆಯ ಸೌಲಭ್ಯಗಳು ದೊರೆಯುವಂತಾಗಲಿ" ಎಂದು ಶ್ರೀಗಳು ಶುಭ ಹಾರೈಸಿದರು.

ಶಾಖಾ ಕಚೇರಿಯನ್ನು ಉದ್ಘಾಟಿಸಿ ಮಾತನಾಡಿದ ಶಾಸಕ ಕೆ. ಷಡಕ್ಷರಿ, "ಬಡವರಿಗೆ ಅನುಕೂಲವಾಗುವ ದೃಷ್ಟಿಯಿಂದ ಹಣಕಾಸು ಸಂಸ್ಥೆಗಳು



ಕಾರ್ಯನಿರ್ವಹಿಸಬೇಕು. ಗ್ರಾಹಕರಲ್ಲಿ ಆತ್ಮವಿಶ್ವಾಸ ಮೂಡಿಸಿದಾಗ ಸಂಸ್ಥೆಗಳು ಸುಸ್ಥಿರವಾಗಿ ಬೆಳೆಯಲು ಸಾಧ್ಯ" ಎಂದರು. ನಿವೃತ್ತ ಎಸಿಪಿ ಹಾಗೂ ಬಿಜೆಪಿ ಮುಖಂಡ ಲೋಕೇಶ್ವರ್ ಮಾತನಾಡಿ, ಗ್ರಾಹಕರು ಕೂಡ ಸಂಸ್ಥೆಯ ನಿಯಮದಂತೆ ನಿಗದಿತ ಅವಧಿಯಲ್ಲಿ ಸಾಲ ಮರುಪಾವತಿ ಮಾಡುವ ಮೂಲಕ ಪ್ರಾಮಾಣಿಕತೆ ಮೆರೆಯಬೇಕು ಎಂದರು.

ಸಮರ್ಥ ನಿಧಿ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ಕೆ. ನವೀನ್ ಕುಮಾರ್ ಮಾತನಾಡಿ, "ಮಂಗಳೂರು ಮೂಲದ ಅನೇಕ ಬ್ಯಾಂಕ್‌ಗಳು ದೇಶದ ಪ್ರಗತಿಗೆ ದೊಡ್ಡ ಕೊಡುಗೆ ನೀಡಿವೆ. ಅದೇ ಹಾದಿಯಲ್ಲಿ ನಮ್ಮ ಸಂಸ್ಥೆಯು ಕಲ್ಪತರು ನಾಡಿನಲ್ಲಿ ಉತ್ತಮ ಹಣಕಾಸು ಸೇವೆಯೊಂದಿಗೆ ಸಾಮಾಜಿಕ ಸೇವೆಗೂ ಮುಂದಾಗಲಿದೆ" ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಟೈಮ್ಸ್ ಕಾಲೇಜಿನ ವಿದ್ಯಾರ್ಥಿನಿ ಕೆ.ಎಸ್. ರಶ್ಮಿ ಹಾಗೂ ಪ್ರಾಂಶುಪಾಲ ಬಿ. ಪ್ರದೀಪ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಕೆಪಿಸಿಸಿ ಸದಸ್ಯ ವಿ. ಯೋಗೇಶ್, ಶಾಖಾ ವ್ಯವಸ್ಥಾಪಕ ಬಿ. ಸಿದ್ದೇಶ್ ಹಾಗೂ ಸಂಸ್ಥೆಯ ನಿರ್ದೇಶಕರು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.


# ಭೂಮಾಪಕರ ಮುಷ್ಕರಕ್ಕೆ ಕೃಷಿಕರು ಕಂಗಾಲು; 1,000ಕ್ಕೂ ಹೆಚ್ಚು ಅರ್ಜಿಗಳು ಬಾಕಿ

ಬಂಗಾರಪೇಟೆ

ತಾಲ್ಲೂಕಿನಲ್ಲಿ ಪರವಾನಗಿ ಪಡೆದ ಭೂಮಾಪಕರು ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಅನಿರ್ದಿಷ್ಟಾವಧಿ ಹೋರಾಟ ನಡೆಸುತ್ತಿರುವ ಹಿನ್ನೆಲೆಯಲ್ಲಿ, ಭೂಮಾಪನ ಇಲಾಖೆಯ ಸೇವೆಗಳು ಕಳೆದ ಹಲವು ತಿಂಗಳಿಂದ ಸ್ಥಗಿತಗೊಂಡಿದ್ದು, ಸಾರ್ವಜನಿಕರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ.

ತಾಲ್ಲೂಕಿನ ಒಟ್ಟು 15 ಮಂದಿ ಭೂಮಾಪಕರು ಕರ್ತವ್ಯಕ್ಕೆ ಗೈರು ಹಾಜರಾಗಿರುವುದರಿಂದ 11ಇ ಸ್ಕೆಚ್, ತತ್ಕಾಲ್ ಪೋಡಿ, ಹದ್ದುಬಸ್ತು ಹಾಗೂ ದರಖಾಸ್ತು ಸೇರಿದಂತೆ ವಿವಿಧ ವಿಭಾಗಗಳ ಸಾವಿರಕ್ಕೂ ಹೆಚ್ಚು ಅರ್ಜಿಗಳು ವಿಲೇವಾರಿಯಾಗದೆ ಕಚೇರಿಯಲ್ಲೇ ಧೂಳು ಹಿಡಿಯುತ್ತಿವೆ.

ಭೂ ಖರೀದಿ ಮತ್ತು ಮಾರಾಟ ಪ್ರಕ್ರಿಯೆಗೆ ಅಗತ್ಯವಾದ ನಕ್ಷೆ ಹಾಗೂ ಸರ್ವೆ



ಕಾರ್ಯಗಳು ಸ್ಥಗಿತಗೊಂಡಿರುವುದರಿಂದ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ನೋಂದಣಿ ಪ್ರಕ್ರಿಯೆ ಕುಂಠಿತಗೊಂಡಿದೆ. ಆಸ್ತಿ ಹಂಚಿಕೆ ಮಾಡಲಾಗದೆ ಬ್ಯಾಂಕ್ ಸಾಲ ಪಡೆಯಲು ಬಯಸುವವರು ಹಾಗೂ ತುರ್ತು ಹಣಕಾಸಿನ ಅಗತ್ಯವಿರುವ ಬಡ ರೈತರು ದಿಕ್ಕು ತೋಚದಂತಾಗಿದ್ದಾರೆ.

ಮುಂಗಾರು ಹಂಗಾಮು ಆರಂಭವಾಗುವ ಮುನ್ನ ಕೃಷಿ ಚಟುವಟಿಕೆಗಳಿಗೆ ಹಣದ ಅಗತ್ಯವಿರುವ ರೈತರು, ಜಮೀನಿನ ದಾಖಲೆಗಳಿಲ್ಲದೆ ಬ್ಯಾಂಕ್ ಸಾಲದಿಂದ ವಂಚಿತರಾಗುತ್ತಿದ್ದಾರೆ.

ಮದುವೆ, ಆರೋಗ್ಯ ಚಿಕಿತ್ಸೆಯಂತಹ ತುರ್ತು ಸಂದರ್ಭಗಳಲ್ಲಿ ಜಮೀನು ಮಾರಾಟ ಮಾಡಲು ಸಾಧ್ಯವಾಗದೆ ವ್ಯವಹಾರಗಳು ಸ್ಥಗಿತಗೊಂಡಿವೆ. ಗ್ರಾಮೀಣ ಭಾಗದಿಂದ ಪ್ರತಿದಿನ ಕಚೇರಿಗೆ ಅಲೆಯುತ್ತಿರುವ ಜನರು ಬರಿಗೈಲಿ ವಾಪಸ್ಸಾಗುತ್ತಿದ್ದು, ಸರ್ಕಾರದ ಮಧ್ಯಸ್ಥಿಕೆಗೆ ಒತ್ತಾಯಿಸಿದ್ದಾರೆ.

> "ಸರ್ವೇಯರ್‌ಗಳ ಮುಷ್ಕರದಿಂದಾಗಿ ಭೂಮಾಪನ ಇಲಾಖೆಯ ಎಲ್ಲ ಸೇವೆಗಳು ಸಂಪೂರ್ಣವಾಗಿ ಸ್ಥಗಿತಗೊಂಡಿವೆ. 11ಇ ಸ್ಕೆಚ್ ಹಾಗೂ ಹದ್ದುಬಸ್ತಿನಂತಹ ತುರ್ತು ಅರ್ಜಿಗಳು ಬಾಕಿ ಉಳಿದಿದ್ದು, ಸಾರ್ವಜನಿಕರಿಗೆ ತೊಂದರೆಯಾಗಿರುವುದು ನಿಜ."
> - ಮೇಲ್ವಿಚಾರಕರು, ಭೂಮಾಪನ ಇಲಾಖೆ, ಬಂಗಾರಪೇಟೆ.



> "ಮಳೆಗಾಲಕ್ಕೂ ಮುನ್ನ ಕೃಷಿಗೆ ಹಣದ ಅಗತ್ಯವಿದೆ. ಜಮೀನು ಅಡಮಾನವಿಟ್ಟು ಸಾಲ ಪಡೆಯಲು 11ಇ ಸ್ಕೆಚ್ ಇಲ್ಲದೆ ಬ್ಯಾಂಕ್‌ನವರು ಸಾಲ ನೀಡುತ್ತಿಲ್ಲ. ಎರಡು ತಿಂಗಳಿನಿಂದ ಅರ್ಜಿ ಹಾಕಿ ಕಾಯುತ್ತಿದ್ದರೂ ಮುಷ್ಕರದಿಂದಾಗಿ ನಮ್ಮ ಜೀವನ ಕಷ್ಟಕರವಾಗಿದೆ."
> - ಕಣಂಬೆಲೆ ಚಿನ್ನಪ್ಪ, ರೈತರು, ಬಂಗಾರಪೇಟೆ.

# ನಾಗರಘಟ್ಟ ಗ್ರಾ.ಪಂ.: ಮಹಿಳಾ ಗ್ರಾಮ ಸಭೆ

ತಿಪಟೂರು

ತಾಲೂಕಿನ ನೊಣವಿನಕೆರೆ ಹೋಬಳಿಯ ನಾಗರಘಟ್ಟ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ವಿಶೇಷ ಮಹಿಳಾ ಗ್ರಾಮ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು. ಮಹಿಳಾ ಸ್ವಸಹಾಯ ಸಂಘದ ವಿನೋದಮ್ಮ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಸಭೆಯಲ್ಲಿ ಮಹಿಳೆಯರ ಆರೋಗ್ಯ, ಕಾನೂನು ಹಕ್ಕುಗಳು ಮತ್ತು ಆರ್ಥಿಕ ಸ್ವಾವಲಂಬನೆ ಕುರಿತು ವಿಸ್ತೃತ ಮಾಹಿತಿ ನೀಡಲಾಯಿತು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಮತಾ ಮಾತನಾಡಿ, "ವೇದಗಳ ಕಾಲದಲ್ಲಿ ಮಹಿಳೆಯರಿಗೆ ಇದ್ದ ಸಮಾನತೆ ಮತ್ತು ಮಾನ್ಯತೆ ಇಂದಿನ ಕಾಲಕ್ಕೂ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ರೂಪಿಸಲಾಗಿರುವ ಕಾನೂನುಗಳು ಮಹಿಳೆಯರ ಸಬಲೀಕರಣಕ್ಕೆ ಪೂರಕವಾಗಿವೆ" ಎಂದು ತಿಳಿಸಿದರು.

ಆರ್ಥಿಕ ಸಾಕ್ಷರತಾ ಕೇಂದ್ರದ ಸಮಾಲೋಚಕಿ ರೇಖಾ ಅವರು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು. "ಉದ್ಯೋಗಿನಿ, ಸ್ಟ್ಯಾಂಡ್ ಅಪ್ ಇಂಡಿಯಾ, ಉನ್ನತಿ ಯೋಜನೆ, ಮುದ್ರಾ ಯೋಜನೆ ಹಾಗೂ ಸ್ವಸಹಾಯ ಸಂಘಗಳಿಗೆ ಸಿಗುವ ಕಿಸಾನ್ ಕ್ರೆಡಿಟ್ ಕಾರ್ಡ್‌ಗಳ ಸದುಪಯೋಗವನ್ನು ಮಹಿಳೆಯರು ಪಡೆದುಕೊಳ್ಳಬೇಕು. ಸಂಪಾದಿಸಿದ ಹಣವನ್ನು ಉಳಿತಾಯ ಮಾಡುವ ಮೂಲಕ ಕುಟುಂಬವನ್ನು ಆರ್ಥಿಕವಾಗಿ ಸುಭದ್ರಗೊಳಿಸಬೇಕು" ಎಂದು ಸಲಹೆ ನೀಡಿದರು.

ಕೆ.ಎಲ್.ಇ. ಕಾನೂನು ಕಾಲೇಜಿನ ಪ್ರಾಂಶುಪಾಲ ಪ್ರಸನ್ನ ಮಾತನಾಡಿ, ಸಂವಿಧಾನದಲ್ಲಿ ಮಹಿಳೆಯರಿಗಿರುವ ಹಕ್ಕುಗಳು, ಹಿಂದೂ ವಿವಾಹ ಕಾಯ್ದೆ, ಬಾಲ್ಯ ವಿವಾಹ ನಿರ್ಮೂಲನಾ ಕಾಯ್ದೆ ಹಾಗೂ ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆಗಳ ಕುರಿತು ಅರಿವು ಮೂಡಿಸಿದರು. ಭಾರತೀಯ ನಾಗರಿಕ ಸಂಹಿತೆ ಅಡಿಯಲ್ಲಿ ಮಹಿಳೆಯರಿಗೆ ಇರುವ 'ಶೂನ್ಯ ಎಫ್.ಐ.ಆರ್' ಸೌಲಭ್ಯದ ಬಗ್ಗೆಯೂ ವಿವರಿಸಿದರು.

ಆರೋಗ್ಯ ಇಲಾಖೆಯ ರಮಾ ಅವರು ಮಾತನಾಡಿ, ಮಹಿಳೆಯರಲ್ಲಿ ಕಂಡುಬರುವ ಅಪೌಷ್ಟಿಕತೆ ಮತ್ತು ರಕ್ತಹೀನತೆ ತಡೆಗಟ್ಟುವ ಕ್ರಮಗಳ ಬಗ್ಗೆ ತಿಳಿಸಿದರು. ಅಲ್ಲದೆ, 14 ರಿಂದ 15 ವರ್ಷದ ಹೆಣ್ಣುಮಕ್ಕಳು ಕ್ಯಾನ್ಸರ್ ವಿರುದ್ಧದ ಲಸಿಕೆಯನ್ನು ಪಡೆಯುವ ಅಗತ್ಯತೆಯನ್ನು ಒತ್ತಿ ಹೇಳಿದರು.

ಸಭೆಯಲ್ಲಿ ಎಂಬಿಕೆ ಅಶ್ವಿನಿ, ಮಹಾದೇವಮ್ಮ, ಅರ್ಪಿತಾ ಸೇರಿದಂತೆ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು, ಸ್ವಸಹಾಯ ಸಂಘಗಳ ಪದಾಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ಉಪಸ್ಥಿತರಿದ್ದರು. ತಾಲೂಕಿನ ನೊಣವಿನಕೆರೆ ಹೋಬಳಿಯ ನಾಗರಘಟ್ಟ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ವಿಶೇಷ ಮಹಿಳಾ ಗ್ರಾಮ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು. ಮಹಿಳಾ ಸ್ವಸಹಾಯ ಸಂಘದ ವಿನೋದಮ್ಮ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಸಭೆಯಲ್ಲಿ ಮಹಿಳೆಯರ ಆರೋಗ್ಯ, ಕಾನೂನು ಹಕ್ಕುಗಳು ಮತ್ತು ಆರ್ಥಿಕ ಸ್ವಾವಲಂಬನೆ ಕುರಿತು ವಿಸ್ತೃತ ಮಾಹಿತಿ ನೀಡಲಾಯಿತು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಮತಾ ಮಾತನಾಡಿ, "ವೇದಗಳ ಕಾಲದಲ್ಲಿ ಮಹಿಳೆಯರಿಗೆ ಇದ್ದ ಸಮಾನತೆ ಮತ್ತು ಮಾನ್ಯತೆ ಇಂದಿನ ಕಾಲಕ್ಕೂ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ರೂಪಿಸಲಾಗಿರುವ ಕಾನೂನುಗಳು ಮಹಿಳೆಯರ ಸಬಲೀಕರಣಕ್ಕೆ ಪೂರಕವಾಗಿವೆ" ಎಂದು ತಿಳಿಸಿದರು.

ಆರ್ಥಿಕ ಸಾಕ್ಷರತಾ ಕೇಂದ್ರದ ಸಮಾಲೋಚಕಿ ರೇಖಾ ಅವರು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು. "ಉದ್ಯೋಗಿನಿ, ಸ್ಟ್ಯಾಂಡ್ ಅಪ್ ಇಂಡಿಯಾ, ಉನ್ನತಿ ಯೋಜನೆ, ಮುದ್ರಾ ಯೋಜನೆ ಹಾಗೂ ಸ್ವಸಹಾಯ ಸಂಘಗಳಿಗೆ ಸಿಗುವ ಕಿಸಾನ್ ಕ್ರೆಡಿಟ್ ಕಾರ್ಡ್‌ಗಳ ಸದುಪಯೋಗವನ್ನು ಮಹಿಳೆಯರು ಪಡೆದುಕೊಳ್ಳಬೇಕು. ಸಂಪಾದಿಸಿದ ಹಣವನ್ನು ಉಳಿತಾಯ ಮಾಡುವ ಮೂಲಕ ಕುಟುಂಬವನ್ನು ಆರ್ಥಿಕವಾಗಿ ಸುಭದ್ರಗೊಳಿಸಬೇಕು" ಎಂದು ಸಲಹೆ ನೀಡಿದರು. ಕೆ.ಎಲ್.ಇ. ಕಾನೂನು ಕಾಲೇಜಿನ ಪ್ರಾಂಶುಪಾಲ ಪ್ರಸನ್ನ ಮಾತನಾಡಿ, ಸಂವಿಧಾನದಲ್ಲಿ ಮಹಿಳೆಯರಿಗಿರುವ ಹಕ್ಕುಗಳು, ಹಿಂದೂ ವಿವಾಹ ಕಾಯ್ದೆ, ಬಾಲ್ಯ ವಿವಾಹ ನಿರ್ಮೂಲನಾ ಕಾಯ್ದೆ ಹಾಗೂ ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆಗಳ ಕುರಿತು ಅರಿವು ಮೂಡಿಸಿದರು. ಭಾರತೀಯ ನಾಗರಿಕ ಸಂಹಿತೆ ಅಡಿಯಲ್ಲಿ ಮಹಿಳೆಯರಿಗೆ ಇರುವ 'ಶೂನ್ಯ ಎಫ್.ಐ.ಆರ್' ಸೌಲಭ್ಯದ ಬಗ್ಗೆಯೂ ವಿವರಿಸಿದರು.

# ಜಯಂತಿ ಆಚರಣೆಗೆ ಗೈರಾದವರಿಗೆ ನೋಟಿಸ್ ಬಿಸಿ!

ಕನಕಪುರ

ತಾಲ್ಲೂಕು ಅಧಿಕಾರಿಗಳ ಗೈರು ಹಾಜರಿಯಿಂದಾಗಿ ಮುಂದೂಡಲ್ಪಟ್ಟಿದ್ದ ಬಸವ ಜಯಂತಿ ಕಾರ್ಯಕ್ರಮವು ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಜರುಗಿತು. ಕಾರ್ಯಕ್ರಮಕ್ಕೆ ಗೈರಾದ 14 ಇಲಾಖೆಗಳ ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ತಹಶೀಲ್ದಾರ್ ಸಂಜಯ್, ಅವರಿಗೆ ನೋಟಿಸ್ ನೀಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ತಹಶೀಲ್ದಾರ್ ಸಂಜಯ್ ಅವರು, "ಯಾವುದೇ ಮಹನೀಯರ ಜಯಂತಿ ಕಾರ್ಯಕ್ರಮಗಳಿಗೆ ತಾಲ್ಲೂಕಿನ ಸರ್ಕಾರಿ ಅಧಿಕಾರಿಗಳು ಗೈರುಹಾಜರಾಗುತ್ತಿರುವುದು ವಿಷಾದನೀಯ. ಇಂತಹ ವರ್ತನೆಗಳನ್ನು ಸಹಿಸುವುದಿಲ್ಲ. ಮುಂದಿನ ದಿನಗಳಲ್ಲಿ ಸರ್ಕಾರದ ಎಲ್ಲಾ ಕಾರ್ಯಕ್ರಮಗಳಿಗೆ ಹಾಜರಾಗಿ ಮಹನೀಯರಿಗೆ ಗೌರವ ಸೂಚಿಸಬೇಕು," ಎಂದು ಎಚ್ಚರಿಕೆ ನೀಡಿದರು.ಬುಧವಾರ ನಡೆದ ಕಾರ್ಯಕ್ರಮಕ್ಕೂ ಸುಮಾರು 14 ಇಲಾಖೆಗಳ ಅಧಿಕಾರಿಗಳು ಗೈರುಹಾಜರಾಗಿದ್ದರು. ಈ ಬಗ್ಗೆ ಗಂಭೀರವಾಗಿ ಪರಿಗಣಿಸಿದ ತಹಶೀಲ್ದಾರ್, ಅಂತಹ ಅಧಿಕಾರಿಗಳ ಪಟ್ಟಿ ಸಿದ್ಧಪಡಿಸಿ ಕಾರಣ ಕೇಳಿ ನೋಟಿಸ್ ನೀಡಲು ಅಧಿಕಾರಿಗಳಿಗೆ ಆದೇಶಿಸಿದ್ದಾರೆ.

# 'ಕಾಂಗ್ರೆಸ್‌ಗೆ ದೇಶದ ಮಹಿಳೆಯರ ಶಾಪ ತಟ್ಟುತ್ತದೆ'

ತುಮಕೂರು

ಮಹಿಳೆಯರಿಗೆ ಲೋಕಸಭೆ, ಶಾಸನಸಭೆಯಲ್ಲಿ ಶೇಕಡ 33ರಷ್ಟು ಮೀಸಲಾತಿ ನೀಡುವ ಆಶಯದ ಮಹಿಳಾ ಮೀಸಲಾತಿ ಮಸೂದೆಯನ್ನು ತಿರಸ್ಕರಿಸಿ, ಮಹಿಳೆಯರ ರಾಜಕೀಯ ಅಧಿಕಾರದ ಅವಕಾಶ ಕಸಿದ ಕಾಂಗ್ರೆಸ್ ಪಕ್ಷಕ್ಕೆ ಇಡೀ ದೇಶದ ಮಹಿಳೆಯರ ಶಾಪ ತಟ್ಟುತ್ತದೆ. ಕಾಂಗ್ರೆಸ್ ಹಾಗೂ ಅದರ ಮಿತ್ರ ಪಕ್ಷಗಳ ನಾಯಕರು ದೇಶದ ಶೇಕಡ 50ರಷ್ಟಿರುವ ಮಹಿಳೆಯರಿಗೆ ಅಪಮಾನ ಮಾಡಿದ್ದಾರೆ ಅಲ್ಲದೆ, ಮಹಿಳೆಯರ ಶಕ್ತಿ ಕುಗ್ಗಿಸುವ ಪ್ರಯತ್ನ ಮಾಡಿದ್ದಾರೆ ಎಂದು ಶಾಸಕ ಜಿ.ಬಿ. ಜ್ಯೋತಿಗಣೇಶ್ ಆರೋಪಿಸಿದರು.

ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಿಳೆಯರಿಗೆ ರಾಜಕೀಯ ಪ್ರಾತಿನಿಧ್ಯ ನೀಡುವುದು ನಿಜವಾದ ಮಹಿಳಾ ಸಬಲೀಕರಣ ಎಂದು ಪ್ರಧಾನಿ ನರೇಂದ್ರ ಮೋದಿಯವರು ಲೋಕಸಭೆಯಲ್ಲಿ ಮಂಡನೆ ಮಾಡಿದ್ದ ನಾರಿಶಕ್ತಿ ವಂದನ್ ಮಿಸಲಾತಿ ಮಸೂದೆಯನ್ನು ಕಾಂಗ್ರೆಸ್ ನೇತೃತ್ವದ ಇಂಡಿ ಒಕ್ಕೂಟ ತಿರಸ್ಕಾರ ಮಾಡಿ ಜಾರಿಯಾಗದಂತೆ ಮಾಡಿದ್ದು ದೇಶದ ಮಹಿಳೆಯರಿಗೆ ಮಾಡಿದ ದ್ರೋಹ ಎಂದರು.

ಮಹಿಳಾ ಮೀಸಲಾತಿಯಿಂದ ಬಿಜೆಪಿ ಮಾತ್ರವಲ್ಲ, ಎಲ್ಲಾ ಪಕ್ಷಗಳ ಮಹಿಳೆಯರಿಗೂ ರಾಜಕೀಯ ಅಧಿಕಾರ ದೊರೆಯುತ್ತದೆ. ರಾಹುಲ್ ಗಾಂಧಿ ನೇತೃತ್ವದ ಕಾಂಗ್ರೆಸ್ ನಾಯಕರು ಇಲ್ಲದ ಸಬೂಬು ಹೇಳಿಕೊಂಡು ಮಹಿಳೆಯರಿಗೆ ಅಧಿಕಾರ ಕೊಡಲೇಬಾರದು ಕೇವಲ ವೋಟ್ ಬ್ಯಾಂಕ್ ಆಗಿ ಉಳಿಸಿಕೊಳ್ಳಬೇಕು ಎಂಬ ಧೋರಣೆಯನ್ನು ದೇಶ ಮಹಿಳೆಯರು ಖಂಡಿಸುತ್ತಾರೆ. ಬಿಜೆಪಿಯ ಕಾರ್ಯಗಳನ್ನು ವಿರೋಧಿಸುವುದನ್ನೇ ಕಾಂಗ್ರೆಸ್‌ನವರ ಚಾಳಿಯಾಗಿದೆ. ಬ್ರಿಟೀಷರ ಕಾಲದ ಸಂಸತ್



ಭವನ ದಾಸ್ಯದ ಸಂಕೇತವೆಂದು ಹೊಸ ಸಂಸತ್ ಭವನ ಕಟ್ಟಿದಾಗಲೂ ಕಾಂಗ್ರೆಸ್‌ನವರು ವಿರೋಧ ಮಾಡಿದರು. ಆರ್ಟಿಕಲ್ 370 ರದ್ದು ಮಾಡಿದಾಗ ವಿರೋಧಿಸಿದ್ದರು. ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರ ನಿರ್ಮಿಸಿದಾಗಲೂ ವಿರೋಧ ಮಾಡಿದ್ದರು. ಸಿಎಎ ಅನುಷ್ಠಾನ, ತ್ರಿವಳಿ ತಲಾಖ್, ಜಿಎಸ್‌ಟಿ ಜಾರಿಯನ್ನೂ ವಿರೋಧಿಸಿದ್ದರು. ಅಮಾಯಕ ಹಿಂದೂಗಳು ಭಯೋತ್ಪಾದಕರಿಗೆ ಬಲಿಯಾದ ನಂತರದ ನಡೆಸಿದ ಆಪರೇಷನ್ ಸಿಂಧೂರ, ಸರ್ಜಿಕಲ್ ಸ್ಟ್ರೈಕ್‌ಗೂ ಆಕ್ಷೇಪ ಮಾಡಿದರು. ಕಾಂಗ್ರೆಸ್‌ನವರು ತಮ್ಮ ಸ್ವಾರ್ಥ ರಾಜಕಾರಣಕ್ಕಾಗಿ ದೇಶದ ರಕ್ಷಣಾ ವ್ಯವಸ್ಥೆಯನ್ನು ಕುಗ್ಗಿಸಲೂ ಹಿಂಜರಿಯುವುದಿಲ್ಲ ಎಂದು ಜ್ಯೋತಿಗಣೇಶ್ ಟೀಕಿಸಿದರು. ಮೂರು ಮಸೂದೆಗಳ ಉದ್ದೇಶ ಮಹಿಳಾ ಸಬಲೀಕರಣ. ಒಬ್ಬ ಸಂಸದ ಒಂದೇ ಕ್ಷೇತ್ರದಲ್ಲಿ 49 ಲಕ್ಷ ಮತದಾರರನ್ನು ಹೇಗೆ ಪ್ರತಿನಿಧಿಸಬಹುದು. ಪ್ರತಿಪಕ್ಷಗಳು ಮಹಿಳಾ ಮೀಸಲಾತಿ ಮಸೂದೆಯ ಕಾರ್ಯನಿಧಾನಕ್ಕಿಂಥಾ ಹೆಚ್ಚಾಗಿ ಅದರ ವಿಷಯವನ್ನು ವಿರೋಧಿಸಿವೆ. ಮಹಿಳಾ ಮೀಸಲಾತಿ ಪರ ಇದ್ದೇವೆ ಎನ್ನುತ್ತಿದ್ದ ವಿಪಕ್ಷಗಳು ಸಂಸತ್ತಿನಲ್ಲಿ ತಮ್ಮ ಅಸಲಿ ಚಿಂತನೆ ಏನೆಂಬುದನ್ನು ತೋರಿಸಿಕೊಟ್ಟಿವೆ. ಮಹಿಳಾ ಸಶಕ್ತೀಕರಣಕ್ಕಾಗಿ ಪ್ರಧಾನಿ ಮೋದಿ ಸರ್ಕಾರ ಜಲಜೀವನ್ ಮಿಷನ್ ಕಾರ್ಯಕ್ರಮದಡಿ 15 ಕೋಟಿ ಮನೆಗಳಿಗೆ ನಲ್ಲಿ ಮೂಲಕ ನೀರು, 10 ಕೋಟಿ ಮನೆಗಳಿಗೆ ಉಜ್ವಲ್ ಯೋಜನೆಯಡಿ ಸಿಲಿಂಡರ್ ನೀಡಿಕೆ, 12 ಕೋಟಿ ಶೌಚಾಲಯ ನಿರ್ಮಾಣ, 4 ಕೋಟಿಗೂ ಹೆಚ್ಚು ಮಹಿಳೆಯರ ಹೆಸರಿನಲ್ಲಿ ಮನೆ ನಿರ್ಮಿಸಿಕೊಡಲಾಗಿದೆ ಎಂದು ಹೇಳಿದರು.

ಬಿಜೆಪಿ ನಗರ ಅಧ್ಯಕ್ಷೆ ವಸಂತ ಸುದರ್ಶನ್ ಮಾತನಾಡಿ, ಮಹಿಳೆಯರ ರಾಜಕೀಯ ಅಧಿಕಾರ ಪಡೆಯಲು ಅವಕಾಶವಿದ್ದ ಮಹಿಳಾ ಮೀಸಲಾತಿ ಮಸೂದೆ ತಿರಸ್ಕರಿಸಿದ ಕಾಂಗ್ರೆಸ್ ಪಕ್ಷವನ್ನು ಮುಂದಿನ ಚುನಾವಣೆಗಳಲ್ಲಿ ಮಹಿಳೆಯರು ತಿರಸ್ಕಾರ ಮಾಡಲು ಸಂಕಲ್ಪ ಮಾಡಬೇಕು. ತಮ್ಮ ರಾಜಕೀಯ ಹಕ್ಕಿಗಾಗಿ ಹೋರಾಟ ಮಾಡಬೇಕು ಎಂದು ಮನವಿ ಮಾಡಿದರು. ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್. ರವಿಶಂಕರ್ ಹೆಬ್ಬಾಕ, ಜಿಲ್ಲಾ ವಕ್ತಾರ ಟಿ.ಆರ್. ಸದಾಶಿವಯ್ಯ, ಜಿಲ್ಲಾ ಕಾರ್ಯದರ್ಶಿ ಜ್ಯೋತಿ ತಿಪ್ಪೇಸ್ವಾಮಿ, ನಗರ ಅಧ್ಯಕ್ಷ ಟಿ.ಕೆ. ಧನುಷ್, ಮುಖಂಡರಾದ ಜೆ. ಜಗದೀಶ್, ಲತಾ ಬಾಬು, ಮರಿತಿಮ್ಮಯ್ಯ ಹಾಜರಿದ್ದರು.

# ಬಸವೇಶ್ವರ ಪುತ್ಥಳಿ ನಿರ್ಮಾಣಕ್ಕೆ ಶಾಸಕರ ಮೀನಾಮೇಷ: ಜೆಡಿಎಸ್ ಮುಖಂಡ ಕೆ.ಟಿ. ಶಾಂತಕುಮಾರ್ ವಾಗ್ದಾಳಿ

ತಿಪಟೂರು

ಬಸವಣ್ಣನವರು 12ನೇ ಶತಮಾನದಲ್ಲೇ ಅಸಮಾನತೆ, ಶೋಷಣೆ ಮತ್ತು ಅಸ್ಪೃಶ್ಯತೆಯ ವಿರುದ್ಧ ಹೋರಾಡಿ ಮಹಿಳೆಯರಿಗೆ ಸಮಾನತೆ ನೀಡಿದ್ದರು. ಆದರೆ ಇಂದು ಕಾಂಗ್ರೆಸ್ ಒಕ್ಕೂಟವು ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ಅಡ್ಡಿಪಡಿಸುವ ಮೂಲಕ ಬಸವ ತತ್ವಕ್ಕೆ ದ್ರೋಹ ಬಗೆಯುತ್ತಿದೆ ಎಂದು ಜೆಡಿಎಸ್ ಮುಖಂಡ ಕೆ.ಟಿ. ಶಾಂತಕುಮಾರ್ ಆರೋಪಿಸಿದರು.

ನಗರದ ತಮ್ಮ ಗೃಹ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಬಸವೇಶ್ವರರ



ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

"2047ರ ವೇಳೆಗೆ ಭಾರತವನ್ನು ವಿಶ್ವಗುರು ಮಾಡುವ ಪ್ರಧಾನಿ ನರೇಂದ್ರ ಮೋದಿಯವರ ಕನಸಿಗೆ ಪೂರಕವಾದ ಮಹಿಳಾ ಮೀಸಲಾತಿ ಮಸೂದೆಯನ್ನು ಕಾಂಗ್ರೆಸ್ ವಿಫಲಗೊಳಿಸಿದೆ. 1996ರಲ್ಲೇ ಎಚ್.ಡಿ. ದೇವೇಗೌಡರು ಮಹಿಳೆಯರಿಗೆ ಮೀಸಲಾತಿ ನೀಡಲು ಶ್ರಮಿಸಿದ್ದರು. ಅಂದು ಮತ್ತು ಇಂದು ಎರಡೂ ಬಾರಿ ಕಾಂಗ್ರೆಸ್ ಮಹಿಳೆಯರ ಹಕ್ಕನ್ನು ಕಸಿದುಕೊಂಡಿದೆ" ಎಂದು ಅವರು ಟೀಕಿಸಿದರು. ಲಂಡನ್‌ನಲ್ಲಿ ಬಸವಣ್ಣನವರ ಮೂರ್ತಿ ಪ್ರತಿಷ್ಠಾಪನೆಯಾಗಿದ್ದರೂ, ತಿಪಟೂರಿನಲ್ಲಿ ಬಸವೇಶ್ವರ ಪುತ್ಥಳಿ ನಿರ್ಮಿಸಲು ಶಾಸಕರು ಮೀನಾಮೇಷ ಎಣಿಸುತ್ತಿದ್ದಾರೆ ಎಂದು ದೂರಿದರು.

ಸಮರ್ಪಕ ನೀರು ಪೂರೈಕೆಯಿಲ್ಲ: ನಗರದಲ್ಲಿ 61 ಹೊಸ ಕೊಳವೆಬಾವಿಗಳನ್ನು ಕೊರೆಸಿದ್ದರೂ ಸಹ ಸಾರ್ವಜನಿಕರಿಗೆ ಸಮರ್ಪಕವಾಗಿ ನೀರು ಒದಗಿಸಲು ಶಾಸಕರು ವಿಫಲರಾಗಿದ್ದಾರೆ.

ಕೆರೆಗಳಿಗೆ ನೀರಿಲ್ಲ: ಯುಜಿಡಿ ನೀರು ಕಲುಷಿತಗೊಂಡಿದೆ ಎಂಬ ನೆಪವೊಡ್ಡಿ ಈಚನೂರು ಕೆರೆಗೆ ನೀರು ತುಂಬಿಸಲಿಲ್ಲ. ಅಮಾನಿಕೆರೆ ಏರಿ ದುರಸ್ತಿಯ ನೆಪ ಹೇಳಿ ಅಲ್ಲಿಯೂ ನೀರು ತುಂಬಿಸುವ ಕೆಲಸ ಮಾಡಿಲ್ಲ.

ಕಾರ್ಯಕ್ರಮದಲ್ಲಿ ನಗರ ಜೆಡಿಎಸ್ ಅಧ್ಯಕ್ಷ ರಾಜು ಕಂಚಾಘಟ್ಟ, ಮುಖಂಡರಾದ ಶಿವಸ್ವಾಮಿ, ವಿ.ಎಸ್.ಎಸ್.ಎನ್ ನಿರ್ದೇಶಕ ಸುದರ್ಶನ್, ನಟರಾಜ್, ಶಿವಕುಮಾರ್ ಸೇರಿದಂತೆ ಅನೇಕ ಜೆಡಿಎಸ್ ಕಾರ್ಯಕರ್ತರು ಭಾಗವಹಿಸಿದ್ದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
24/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಸಮಾಜಮುಖಿ ಕಾರ್ಯಕ್ಕೆ ಅಭಿನಂದನೆ



ಚಿಂತಾಮಣಿ

ಪತ್ರಿಕೋದ್ಯಮ ಹಾಗೂ ರೆಡ್‌ಕ್ರಾಸ್ ಸಂಸ್ಥೆಯ ಮೂಲಕ ಸಮಾಜಕ್ಕೆ ಗಣನೀಯ ಸೇವೆ ಸಲ್ಲಿಸಿರುವ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ನಿಕಟಪೂರ್ವ ಜಿಲ್ಲಾಧ್ಯಕ್ಷ ಜಯರಾಂ ಅವರ ಸೇವೆಯನ್ನು ನಿವೃತ್ತ ಸೇನಾಧಿಕಾರಿ ಹಾಗೂ ಲೇಖಕ ಎಸ್.ವಿ. ಅಯ್ಯರ್ ಮುಕ್ತಕಂಠದಿಂದ ಶ್ಲಾಘಿಸಿದರು.

ಇತ್ತೀಚೆಗೆ ಜಯರಾಂ ಅವರ ನಿವಾಸಕ್ಕೆ ಭೇಟಿ ನೀಡಿದ ಎಸ್.ವಿ. ಅಯ್ಯರ್ ಅವರು, ಜಯರಾಂ ಅವರ ಸಮಾಜಮುಖಿ ಕಾರ್ಯಗಳನ್ನು ಗುರುತಿಸಿ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು.

ಸಾಮಾಜಿಕ ಚಟುವಟಿಕೆಯಲ್ಲಿ ಸಕ್ರಿಯ ಬಳಿಕ ಮಾತನಾಡಿದ ಅಯ್ಯರ್ ಅವರು, "ಜಯರಾಂ ಅವರು ಕೇವಲ ಪತ್ರಿಕೋದ್ಯಮಕ್ಕೆ ಸೀಮಿತವಾಗದೆ, ರೆಡ್ ಕ್ರಾಸ್ ಸಂಸ್ಥೆಯಂತಹ ಘನವೆತ್ತ ಸಂಸ್ಥೆಗಳ ಮೂಲಕ ಅನೇಕ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಅವರ ಈ ಸೇವಾ ಮನೋಭಾವ ಇತರರಿಗೆ ಮಾದರಿಯಾಗಿದೆ" ಎಂದು ಹರ್ಷ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಜಯರಾಂ ಅವರಿಗೆ ಶಾಲು ಹೊದಿಸಿ, ಫಲಪುಷ್ಪ ನೀಡಿ ಸನ್ಮಾನಿಸಲಾಯಿತು. ಈ ಸುಸಂದರ್ಭದಲ್ಲಿ ಜಯರಾಂ ಅವರ ಕುಟುಂಬ ಸದಸ್ಯರು ಉಪಸ್ಥಿತರಿದ್ದು, ಅಯ್ಯರ್ ಅವರ ಅಭಿಮಾನಕ್ಕೆ ಕೃತಜ್ಞತೆ ಸಲ್ಲಿಸಿದರು.

ಸಾಮಾಜಿಕ ಚಟುವಟಿಕೆಯಲ್ಲಿ ಸಕ್ರಿಯ ಬಳಿಕ ಮಾತನಾಡಿದ ಅಯ್ಯರ್ ಅವರು, "ಜಯರಾಂ ಅವರು ಕೇವಲ ಪತ್ರಿಕೋದ್ಯಮಕ್ಕೆ ಸೀಮಿತವಾಗದೆ, ರೆಡ್ ಕ್ರಾಸ್ ಸಂಸ್ಥೆಯಂತಹ ಘನವೆತ್ತ ಸಂಸ್ಥೆಗಳ ಮೂಲಕ ಅನೇಕ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಅವರ ಈ ಸೇವಾ ಮನೋಭಾವ ಇತರರಿಗೆ ಮಾದರಿಯಾಗಿದೆ" ಎಂದು ಹರ್ಷ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಜಯರಾಂ ಅವರಿಗೆ ಶಾಲು ಹೊದಿಸಿ, ಫಲಪುಷ್ಪ ನೀಡಿ ಸನ್ಮಾನಿಸಲಾಯಿತು. ಈ ಸುಸಂದರ್ಭದಲ್ಲಿ ಜಯರಾಂ ಅವರ ಕುಟುಂಬ ಸದಸ್ಯರು ಉಪಸ್ಥಿತರಿದ್ದು, ಅಯ್ಯರ್ ಅವರ ಅಭಿಮಾನಕ್ಕೆ ಕೃತಜ್ಞತೆ ಸಲ್ಲಿಸಿದರು.

# ಇತಿಹಾಸ ಉಳಿಸುವುದು ನಮ್ಮ ಕರ್ತವ್ಯ: ಜಿಲ್ಲಾಧಿಕಾರಿ ರವಿ

ಬೂದಿಕೋಟೆ

ಐತಿಹಾಸಿಕ ಹಿನ್ನೆಲೆಯುಳ್ಳ ಬೂದಿಕೋಟೆಯ ಕೋಟೆ ಹಾಗೂ ಮಾರ್ಕಂಡೇಯ ಜಲಾಶಯವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ಸಂಬಂಧಪಟ್ಟ ಇಲಾಖೆಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಭರವಸೆ ನೀಡಿದರು.

ತಾಲೂಕಿನ ಬೂದಿಕೋಟೆ ಗ್ರಾಮದ ಕೋಟೆ ಮತ್ತು ಮಾರ್ಕಂಡೇಯ ಡ್ಯಾಮ್‌ಗೆ ಅಧಿಕಾರಿಗಳ ತಂಡದೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಸ್ಥಳೀಯ ಸಮಸ್ಯೆಗಳ ಕುರಿತು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಬೂದಿಕೋಟೆಯ ಇತಿಹಾಸವನ್ನು ಸ್ಮರಿಸಿದ ಜಿಲ್ಲಾಧಿಕಾರಿಗಳು, "ನಮ್ಮ ಜಿಲ್ಲೆಯಲ್ಲಿ ಇಂತಹ ಐತಿಹಾಸಿಕ ಸ್ಥಳಗಳಿರುವುದು ನಮ್ಮ ಅದೃಷ್ಟ. ಇವುಗಳನ್ನು ಸಂರಕ್ಷಿಸಿ ಮುಂದಿನ



ಪೀಳಿಗೆಗೆ ಉಳಿಸುವುದು ನಮ್ಮೆಲ್ಲರ ಜವಾಬ್ದಾರಿ. ಈ ನಿಟ್ಟಿನಲ್ಲಿ ಪ್ರವಾಸೋದ್ಯಮ ಮತ್ತು ಪುರಾತತ್ವ ಇಲಾಖೆಯ ಅಧಿಕಾರಿಗಳಿಗೆ ಪತ್ರ ಬರೆದು, ಕೋಟೆ ಹಾಗೂ ಡ್ಯಾಮ್ ಪ್ರದೇಶವನ್ನು ಪ್ರವಾಸಿ ಸ್ನೇಹಿಯಾಗಿ ಅಭಿವೃದ್ಧಿಪಡಿಸಲಾಗುವುದು" ಎಂದರು.

ಮಾರ್ಕಂಡೇಯ ಡ್ಯಾಮ್‌ನಲ್ಲಿ ಸಮೃದ್ಧವಾಗಿ ನೀರಿದ್ದರೂ ಜನರಿಗೆ ತಲುಪದಿರುವ ಬಗ್ಗೆ ಅವರು ಅಸಮಾಧಾನ ವ್ಯಕ್ತಪಡಿಸಿದರು. ಮಾಲೂರು ತಾಲೂಕಿಗೆ ನೀರು ಸರಬರಾಜು ಮಾಡುವ ಪೈಪ್‌ಲೈನ್ ಕಾಮಗಾರಿ ಏಕೆ ಕುಂಠಿತಗೊಂಡಿದೆ ಎಂದು ಪ್ರಶ್ನಿಸಿದಾಗ, ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ಕಾಮಗಾರಿ ಅಪೂರ್ಣಗೊಂಡಿರುವ ಬಗ್ಗೆ ಸಮಜಾಯಿಷಿ ನೀಡಿದರು. ಪ್ರವಾಸಿ ತಾಣದಲ್ಲಿ ಸ್ವಚ್ಛತೆ ಕಾಪಾಡದ ಅಧಿಕಾರಿಗಳ ವಿರುದ್ಧವೂ ಅವರು ಗರಂ ಆದರು.

ಜಾನುವಾರುಗಳ ಕುಡಿಯುವ ನೀರಿನ ತೊಟ್ಟಿಯ ಸ್ಥಿತಿ ಕಂಡು ಜಿಲ್ಲಾಧಿಕಾರಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. "ಇಷ್ಟು ಕೊಳಚೆ ನೀರನ್ನು ನಿಮ್ಮ ಮನೆಯಲ್ಲಿ ಕುಡಿಯುತ್ತೀರಾ? ಜಾನುವಾರುಗಳು ಮಾತ್ರ ಇದನ್ನು ಕುಡಿಯಬೇಕೇ?" ಎಂದು ಜಲಗಾರರನ್ನು ತರಾಟೆಗೆ ತೆಗೆದುಕೊಂಡರಲ್ಲದೆ, ಕೂಡಲೇ ತೊಟ್ಟಿಯನ್ನು ಸ್ವಚ್ಛಗೊಳಿಸುವಂತೆ ತಾಕೀತು ಮಾಡಿದರು.

ಗ್ರಾ.ಪಂ. ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಮುನ್ನೆಚ್ಚರಿಕೆ ವಹಿಸಬೇಕು. ನೀರಿನ ಅಭಾವ ಕಂಡುಬಂದಲ್ಲಿ ಕೂಡಲೇ ಪರ್ಯಾಯ ವ್ಯವಸ್ಥೆ ಮಾಡಬೇಕು ಎಂದು ಪಿಡಿಒ ಕಿಶೋರ್ ಕುಮಾರ್ ಅವರಿಗೆ ನಿರ್ದೇಶನ ನೀಡಿದರು.

ಈ ವೇಳೆ ತಹಸೀಲ್ದಾರ್ ಸುಜಾತ, ತಾ.ಪಂ ಇಒ ರವಿಕುಮಾರ್, ಎಇಇ ಎನ್. ಆನಂದ್ ಕುಮಾರ್, ಇಂಜಿನಿಯರ್ ರಾಜಶೇಖರ್, ಉಪತಹಸಿಲ್ದಾರ್ ಸುರೇಶ್, ಗ್ರಾ.ಪಂ ಮಾಜಿ ಅಧ್ಯಕ್ಷ ಬಿ.ಆರ್. ಮಂಜುನಾಥ್ ಹಾಗೂ ಇತರ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

## 'ಖರ್ಗೆ ತಂದೆ-ಮಗನಿಗೆ ಮಾನಸಿಕ ತಪಾಸಣೆ ಅಗತ್ಯ'



ಕೋಲಾರ

ದೇಶದಲ್ಲಿ ಕಾಂಗ್ರೆಸ್ ಪಕ್ಷ ಶೂನ್ಯದತ್ತ ಸಾಗುತ್ತಿರುವುದರಿಂದ ಹತಾಶೆಗೊಂಡಿರುವ ಮಲ್ಲಿಕಾರ್ಜುನ ಖರ್ಗೆ ಹಾಗೂ ಪ್ರಿಯಾಂಕ್ ಖರ್ಗೆ ಅವರು ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ನಾಲಿಗೆ ಹರಿಬಿಡುತ್ತಿದ್ದಾರೆ. ಇಬ್ಬರಿಗೂ ತುರ್ತಾಗಿ ಮಾನಸಿಕ ಆರೋಗ್ಯ ತಪಾಸಣೆಯ ಅಗತ್ಯವಿದೆ ಎಂದು ಮಾಜಿ ಸಂಸದ ಎಸ್. ಮುನಿಸ್ವಾಮಿ ಲೇವಡಿ ಮಾಡಿದರು.

ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಾಂಗ್ರೆಸ್ ನಾಯಕರ ಕೀಳುಮಟ್ಟದ ಸಂಸ್ಕೃತಿ ಹಾಗೂ ಅಂಬೇಡ್ಕರ್ ವಿಚಾರದಲ್ಲಿ ಅವರ ಇತಿಹಾಸವನ್ನು ಎಳೆಎಳೆಯಾಗಿ ಬಿಚ್ಚಿಟ್ಟರು.

"ವಿಶ್ವನಾಯಕರಾಗಿ ಗುರುತಿಸಿಕೊಂಡಿರುವ ಪ್ರಧಾನಿ ಮೋದಿಯವರನ್ನು ಉಗ್ರರಿಗೆ ಹೋಲಿಸುವ ಮೂಲಕ ಖರ್ಗೆ ಕುಟುಂಬ ಸಮುದಾಯದ ಗೌರವವನ್ನೇ ಹಾಳು ಮಾಡುತ್ತಿದೆ. ವಿರೋಧ ಪಕ್ಷದ ನಾಯಕರಾಗಿ ಜವಾಬ್ದಾರಿಯುತವಾಗಿ ನಡೆದುಕೊಳ್ಳುವ ಬದಲು, ದೇಶದ ಪ್ರಧಾನಿಗೆ ನೀಡಬೇಕಾದ ಸಾಮಾನ್ಯ ಗೌರವವನ್ನೂ ಇವರು ಮರೆತಿದ್ದಾರೆ. ಈ ಕೂಡಲೇ ಖರ್ಗೆ ಅವರು ಬಹಿರಂಗ ಕ್ಷಮೆಯಾಚಿಸಬೇಕು" ಎಂದು ಆಗ್ರಹಿಸಿದರು.

ಸಂವಿಧಾನದ ಜಪ ಮಾಡುವ ಕಾಂಗ್ರೆಸ್ಸಿಗರಿಗೆ ಅಂಬೇಡ್ಕರ್ ಹೆಸರೆತ್ತಲು ನೈತಿಕತೆ ಇಲ್ಲ ಎಂದು ಕಿಡಿಕಾರಿದ ಮುನಿಸ್ವಾಮಿ, "ಅಂಬೇಡ್ಕರ್ ಅವರನ್ನು ಚುನಾವಣೆಯಲ್ಲಿ ಸೋಲಿಸಿದವರು ಇದೇ ನಕಲಿ ಗಾಂಧಿಗಳು. ಅಂಬೇಡ್ಕರ್ ನಿಧನರಾದಾಗ ದೆಹಲಿಯಲ್ಲಿ ಅಂತ್ಯಸಂಸ್ಕಾರಕ್ಕೆ ಜಾಗ ನೀಡದೆ, ಅವರ ಮೃತದೇಹವನ್ನು ಸಾಗಿಸಲು ಏರ್ ಅಂಬ್ಯುಲೆನ್ಸ್ ನೆರವು ನೀಡದ ಕಾಂಗ್ರೆಸ್ ನಾಯಕರು, ಈಗ ಅಂಬೇಡ್ಕರ್ ಜಪ ಮಾಡುತ್ತಿರುವುದು ಕೇವಲ ಅಧಿಕಾರಕ್ಕಾಗಿ" ಎಂದು ಟೀಕಿಸಿದರು.

"ರಾಜ್ಯದಲ್ಲಿ ದಲಿತರ ಎಸ್.ಸಿ.ಪಿ, ಟಿ.ಎಸ್.ಪಿ ಯೋಜನೆಯ 42 ಸಾವಿರ ಕೋಟಿ ರೂ. ಅನುದಾನ ದುರ್ಬಳಕೆಯಾದಾಗ ಈ ಖರ್ಗೆ ಕುಟುಂಬ ತುಟಿ ಬಿಚ್ಚಲಿಲ್ಲ. ದಲಿತರ ಹೆಸರು ಹೇಳಿಕೊಂಡು ಮೇಲೆ ಬಂದ ಇವರು, ಜನಾಂಗಕ್ಕೆ ಮೋಸವಾದಾಗ ವಂಚನೆ ಸರಿಪಡಿಸುವ ಪ್ರಯತ್ನ ಮಾಡಲಿಲ್ಲ. ಆದರೆ ಮೋದಿ ಸರ್ಕಾರ ಅಂಬೇಡ್ಕರ್ ಹೆಸರಿನಲ್ಲಿ ಪಂಚತೀರ್ಥಗಳನ್ನು ಅಭಿವೃದ್ಧಿಪಡಿಸಿ ನಿಜವಾದ ಗೌರವ ನೀಡಿದೆ" ಎಂದು ಅವರು ವಿವರಿಸಿದರು.


# ಜಯಂತಿಗಳ ಯಶಸ್ವಿಗೆ ಅಧಿಕಾರಿಗಳ ಸನ್ನದ್ಧತೆ: ಪೂರ್ವಭಾವಿ ಸಭೆ

ತುಮಕೂರು

ಜಿಲ್ಲಾಡಳಿತ ವತಿಯಿಂದ ಮೇ 1ರಂದು ಶ್ರೀ ಭಗವಾನ್ ಬುದ್ಧ ಜಯಂತಿ ಹಾಗೂ ಮೇ 10ರಂದು ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ ಸಂಬಂಧ ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್.ತಿಪ್ಪೇಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಮೇ 1ರಂದು ಶ್ರೀ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀ ಭಗವಾನ್ ಬುದ್ಧರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ನೆರವೇರಿಸಲು ಸಭೆಯಲ್ಲಿ ನಿರ್ಧರಿಸಲಾಯಿತು. ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ನಿರ್ದೇಶನ ನೀಡಿದರು.

ಮೇ 10ರಂದು ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮವನ್ನು ನಗರದ ಡಾ. ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ನಡೆಸಲು ತೀರ್ಮಾನಿಸಲಾಯಿತು. ಜಯಂತಿ ಕಾರ್ಯಕ್ರಮಕ್ಕೆ ಅಗತ್ಯ ವ್ಯವಸ್ಥೆಗಳನ್ನು ಕನ್ನಡ



ಮತ್ತು ಸಂಸ್ಕೃತಿ ಇಲಾಖೆ ಮಾಡುವಂತೆ ತಿಳಿಸಿದರು. ಸಭೆಯಲ್ಲಿದ್ದ ಜಿಲ್ಲಾ ರೆಡ್ಡಿಜನ ಸಂಘದವರು ಕಾರ್ಯಕ್ರಮಕ್ಕೆ ಆಗಮಿಸುವ ಪ್ರೇಕ್ಷಕರಿಗೆ ಊಟ, ಲಘು ಉಪಹಾರದ ವ್ಯವಸ್ಥೆಯನ್ನು ಮಾಡುವಂತೆ ತಿಳಿಸಿದರು.

ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಹಾಗೂ ರೆಡ್ಡಿ ಸಮುದಾಯದ ಪ್ರತಿಭಾವಂತ ಶಾಲಾ, ಕಾಲೇಜು ಮಕ್ಕಳಿಗೆ ಸನ್ಮಾನ ಕಾರ್ಯಕ್ರಮವನ್ನು ಏರ್ಪಡಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಈ ಎರಡೂ ಜಯಂತಿಗಳ ಆಚರಣೆ ಸಂಬಂಧ ಸಕಲ ಸಿದ್ಧತೆ ಕೈಗೊಳ್ಳಬೇಕು ಹಾಗೂ ಗಣ್ಯರು, ಸಮುದಾಯದ ಮುಖಂಡರು, ಸಾಹಿತಿಗಳು, ಲೇಖಕರು, ವಿಚಾರ ವಾದಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಅಗತ್ಯ ಪ್ರಚಾರ ಕ್ರಮ ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸುರೇಶ್ ಕುಮಾರ್ ಸೇರಿದಂತೆ ಸಮುದಾಯದ ಮುಖಂಡರು ಹಾಜರಿದ್ದರು.

## ಪೆಹಲ್ಗಾಂ ಹತ್ಯೆ ಸಂತ್ರಸ್ತರಿಗೆ ಶ್ರೀರಾಮ ಸೇನೆಯಿಂದ ಶ್ರದ್ಧಾಂಜಲಿ

ಕನಕಪುರ

ಕಾಶ್ಮೀರದ ಪೆಹಲ್ಗಾಂನಲ್ಲಿ ಭಯೋತ್ಪಾದಕರಿಂದ ಹತ್ಯೆಗೊಳಗಾದ ಅಮಾಯಕರ ಸ್ಮರಣಾರ್ಥ ನಗರದ ಚನ್ನಬಸಪ್ಪ ವೃತ್ತದಲ್ಲಿ ಶ್ರೀರಾಮ ಸೇನಾ ವತಿಯಿಂದ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಕಾರ್ಯಕ್ರಮದಲ್ಲಿ ಮೃತರ ಆತ್ಮಕ್ಕೆ ಶಾಂತಿ ಕೋರಿ ಮೌನ ಆಚರಿಸಿದ ಬಳಿಕ, ಸಂಘಟನೆಯ ಪದಾಧಿಕಾರಿಗಳು ದೇಶದ ಭದ್ರತೆ ಮತ್ತು ಹಿಂದೂಗಳ ಜಾಗೃತಿ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀರಾಮ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗರ್ಜುನ ಗೌಡ, "ಪೆಹಲ್ಗಾಂನಲ್ಲಿ ಕಳೆದ ವರ್ಷ ಅಮಾಯಕರನ್ನು ಧರ್ಮ ಕೇಳಿ ಹತ್ಯೆ ಮಾಡಿದ್ದು ಹಿಂದೂಗಳಿಗೆ ದೊಡ್ಡ ಎಚ್ಚರಿಕೆ ಗಂಟೆಯಾಗಿದೆ. ನಾವು ಈಗಲೇ ಎಚ್ಚೆತ್ತುಕೊಳ್ಳದಿದ್ದರೆ ಅಪಾಯ ನಮ್ಮ ಮನೆ ಬಾಗಿಲಿಗೆ ಬರಲಿದೆ. ಹಿಂದೂಗಳು ಜಾತಿ ಭೇದ ಮರೆತು ಒಗ್ಗಟ್ಟಾಗಬೇಕು," ಎಂದು ಕರೆ ನೀಡಿದರು.

"ಆರ್ಥಿಕವಾಗಿ ಬಲಗೊಳ್ಳಲು 'ನಮ್ಮ ವ್ಯಾಪಾರ ನಮ್ಮಲ್ಲೇ ಇರಲಿ' ಎಂಬ ಮನೋಭಾವ ಇಂದಿನ ಕಾಲಕ್ಕೆ ಅತ್ಯಗತ್ಯ. ರಾಜಕೀಯವಾಗಿ ಮತ್ತು ಸಾಮಾಜಿಕವಾಗಿ ಹಿಂದೂಗಳು ದುರ್ಬಲರಾದರೆ ದೇಶದ ದಿಕ್ಕೇ ಬದಲಾಗುವ ಅಪಾಯವಿದೆ," ಎಂದು ಅವರು ಎಚ್ಚರಿಸಿದರು.

ಕಾರ್ಯಕ್ರಮದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಪರಮೇಶ್ ಗೌಡ, ಮಂಡ್ಯ ವಿಭಾಗೀಯ ಅಧ್ಯಕ್ಷ ರಾಜೇಶ್, ಪ್ರಧಾನ ಕಾರ್ಯದರ್ಶಿ ನವೀನ್, ಜಿಲ್ಲಾ ಪದಾಧಿಕಾರಿಗಳಾದ ಸಾಗರ್, ರಾಜಗೋಪಾಲ್, ಕುಮಾರಸ್ವಾಮಿ, ಶ್ರೀನಿವಾಸ್, ಮುಖಂಡ ಜೀವನ್ ಮೂರ್ತಿ ಸೇರಿದಂತೆ ಹಲವಾರು ಕಾರ್ಯಕರ್ತರು ಭಾಗವಹಿಸಿದ್ದರು. ಕಾಶ್ಮೀರದ ಪೆಹಲ್ಗಾಂನಲ್ಲಿ ಭಯೋತ್ಪಾದಕರಿಂದ ಹತ್ಯೆಗೊಳಗಾದ ಅಮಾಯಕರ ಸ್ಮರಣಾರ್ಥ ನಗರದ ಚನ್ನಬಸಪ್ಪ ವೃತ್ತದಲ್ಲಿ ಶ್ರೀರಾಮ ಸೇನಾ ವತಿಯಿಂದ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಕಾರ್ಯಕ್ರಮದಲ್ಲಿ ಮೃತರ ಆತ್ಮಕ್ಕೆ ಶಾಂತಿ ಕೋರಿ ಮೌನ ಆಚರಿಸಿದ ಬಳಿಕ, ಸಂಘಟನೆಯ ಪದಾಧಿಕಾರಿಗಳು ದೇಶದ ಭದ್ರತೆ ಮತ್ತು ಹಿಂದೂಗಳ ಜಾಗೃತಿ ಕುರಿತು ಮಾತನಾಡಿದರು. ಕಾಶ್ಮೀರದ ಪೆಹಲ್ಗಾಂನಲ್ಲಿ ಭಯೋತ್ಪಾದಕರಿಂದ ಹತ್ಯೆಗೊಳಗಾದ ಅಮಾಯಕರ ಸ್ಮರಣಾರ್ಥ ನಗರದ ಚನ್ನಬಸಪ್ಪ ವೃತ್ತದಲ್ಲಿ ಶ್ರೀರಾಮ ಸೇನಾ ವತಿಯಿಂದ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಕಾರ್ಯಕ್ರಮದಲ್ಲಿ ಮೃತರ ಆತ್ಮಕ್ಕೆ ಶಾಂತಿ ಕೋರಿ ಮೌನ ಆಚರಿಸಿದ ಬಳಿಕ, ಸಂಘಟನೆಯ ಪದಾಧಿಕಾರಿಗಳು ದೇಶದ ಭದ್ರತೆ ಮತ್ತು ಹಿಂದೂಗಳ ಜಾಗೃತಿ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀರಾಮ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗರ್ಜುನ ಗೌಡ, "ಪೆಹಲ್ಗಾಂನಲ್ಲಿ ಕಳೆದ ವರ್ಷ ಅಮಾಯಕರನ್ನು ಧರ್ಮ ಕೇಳಿ ಹತ್ಯೆ ಮಾಡಿದ್ದು ಹಿಂದೂಗಳಿಗೆ ದೊಡ್ಡ ಎಚ್ಚರಿಕೆ ಗಂಟೆಯಾಗಿದೆ. ನಾವು ಈಗಲೇ ಎಚ್ಚೆತ್ತುಕೊಳ್ಳದಿದ್ದರೆ ಅಪಾಯ ನಮ್ಮ ಮನೆ ಬಾಗಿಲಿಗೆ ಬರಲಿದೆ. ಹಿಂದೂಗಳು ಜಾತಿ ಭೇದ ಮರೆತು ಒಗ್ಗಟ್ಟಾಗಬೇಕು," ಎಂದು ಕರೆ ನೀಡಿದರು.

"ಆರ್ಥಿಕವಾಗಿ ಬಲಗೊಳ್ಳಲು 'ನಮ್ಮ ವ್ಯಾಪಾರ ನಮ್ಮಲ್ಲೇ ಇರಲಿ' ಎಂಬ ಮನೋಭಾವ ಇಂದಿನ ಕಾಲಕ್ಕೆ ಅತ್ಯಗತ್ಯ. ರಾಜಕೀಯವಾಗಿ ಮತ್ತು ಸಾಮಾಜಿಕವಾಗಿ ಹಿಂದೂಗಳು ದುರ್ಬಲರಾದರೆ ದೇಶದ ದಿಕ್ಕೇ ಬದಲಾಗುವ ಅಪಾಯವಿದೆ," ಎಂದು ಅವರು ಎಚ್ಚರಿಸಿದರು.

ಕಾರ್ಯಕ್ರಮದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಪರಮೇಶ್ ಗೌಡ, ಮಂಡ್ಯ ವಿಭಾಗೀಯ ಅಧ್ಯಕ್ಷ ರಾಜೇಶ್, ಪ್ರಧಾನ ಕಾರ್ಯದರ್ಶಿ ನವೀನ್, ಜಿಲ್ಲಾ ಪದಾಧಿಕಾರಿಗಳಾದ ಸಾಗರ್, ರಾಜಗೋಪಾಲ್, ಕುಮಾರಸ್ವಾಮಿ, ಶ್ರೀನಿವಾಸ್, ಮುಖಂಡ ಜೀವನ್ ಮೂರ್ತಿ ಸೇರಿದಂತೆ ಹಲವಾರು ಕಾರ್ಯಕರ್ತರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀರಾಮ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗರ್ಜುನ ಗೌಡ, "ಪೆಹಲ್ಗಾಂನಲ್ಲಿ ಕಳೆದ ವರ್ಷ ಅಮಾಯಕರನ್ನು ಧರ್ಮ ಕೇಳಿ ಹತ್ಯೆ ಮಾಡಿದ್ದು ಹಿಂದೂಗಳಿಗೆ ದೊಡ್ಡ ಎಚ್ಚರಿಕೆ ಗಂಟೆಯಾಗಿದೆ. ನಾವು ಈಗಲೇ ಎಚ್ಚೆತ್ತುಕೊಳ್ಳದಿದ್ದರೆ ಅಪಾಯ ನಮ್ಮ ಮನೆ ಬಾಗಿಲಿಗೆ ಬರಲಿದೆ. ಹಿಂದೂಗಳು ಜಾತಿ ಭೇದ ಮರೆತು ಒಗ್ಗಟ್ಟಾಗಬೇಕು," ಎಂದು ಕರೆ ನೀಡಿದರು.

# 24ರಿಂದ ರಾಷ್ಟ್ರೀಯ ಜೂನಿಯರ್ ಅಥ್ಲೆಟಿಕ್ಸ್ ಕ್ರೀಡಾಕೂಟ ಡಾ. ಜಿ. ಪರಮೇಶ್ವರ್

ತುಮಕೂರು

ಇದೇ 24ರಿಂದ 3 ದಿನಗಳ ಕಾಲ ತುಮಕೂರಿನಲ್ಲಿ 20 ವರ್ಷದೊಳಗಿನವರ 24ನೇ ರಾಷ್ಟ್ರೀಯ ಜೂನಿಯರ್ ಅಥ್ಲೆಟಿಕ್ ಸ್ಪರ್ಧೆಗಳು ನಡೆಯಲಿವೆ ಎಂದು ಕರ್ನಾಟಕ ಅಥ್ಲೆಟಿಕ್ಸ್ ಅಸೋಸಿಯೇಷನ್‌ನ ಅಧ್ಯಕ್ಷರೂ ಆದ ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಕ್ರೀಡಾಕೂಟ ಕುರಿತು ಬುಧವಾರ ತುಮಕೂರಿನ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಕರ್ನಾಟಕದಲ್ಲಿ ಅದರಲ್ಲೂ ತುಮಕೂರಿನಲ್ಲಿ ಇದೇ ಮೊದಲ ಬಾರಿಗೆ ರಾಷ್ಟ್ರೀಯ ಜೂನಿಯರ್ ಅಥ್ಲೆಟಿಕ್ ಕ್ರೀಡಾಕೂಟ ನಡೆಯುತ್ತಿದ್ದು, ಇದು ಜಿಲ್ಲೆಗೆ ಹೆಮ್ಮೆಯ ವಿಷಯ ಎಂದು ಹೇಳಿದರು.

ಹೊಸದಾಗಿ ಅಭಿವೃದ್ಧಿಪಡಿಸಿರುವ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ




ವಿಶ್ವದರ್ಜೆಯ ಸಿಂಥೆಟಿಕ್ ಟ್ರ್ಯಾಕ್ ಮತ್ತು ಅಂತರಾಷ್ಟ್ರೀಯ ಗುಣಮಟ್ಟದ ವ್ಯವಸ್ಥೆಗಳನ್ನು ಅಭಿವೃದ್ಧಿಪಡಿಸಿದ್ದು, ರಾಷ್ಟ್ರೀಯ ಮಟ್ಟದ ಇಂತಹ ಚಾಂಪಿಯನ್ ಶಿಪ್ ಕ್ರೀಡಾಕೂಟ ನಡೆಯುತ್ತಿದ್ದು, ತುಮಕೂರು ಈಗ ವಿಶ್ವದ ಗಮನ ಸೆಳೆಯುತ್ತಿದೆ ಎಂದರು.

ರಾಷ್ಟ್ರದ ಮೂಲೆ ಮೂಲೆಯಿಂದ 28 ರಾಜ್ಯಗಳಿಂದಲೂ ಬಾಲಕ/ಬಾಲಕಿಯರು ಸೇರಿ ಸುಮಾರು 1500 ಕ್ರೀಡಾಪಟುಗಳು ತಮ್ಮ ರಾಜ್ಯವನ್ನು ಪ್ರತಿನಿಧಿಸಿ 40 ಸ್ಪರ್ಧೆಗಳಲ್ಲಿ ಭಾಗವಹಿಸಲಿದ್ದಾರೆ. ಅಲ್ಲದೆ, ಜೆಎಸ್‌ಡಬ್ಲ್ಯೂ ಸ್ಪೋರ್ಟ್ಸ್ ಮತ್ತು ರಿಲೆಯನ್ಸ್ ಫೌಂಡೇಶನ್ ತಂಡಗಳು ಕರ್ನಾಟಕದ ಬಲಿಷ್ಠ ತಂಡಗಳಾಗಿ ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಪ್ರತ್ಯೇಕವಾಗಿ ಪ್ರತಿನಿಧಿಸುತ್ತಿದ್ದು, ಆಗಸ್ಟ್ 5 ರಿಂದ 9ರವರೆಗೆ ಅಮೆರಿಕಾದ ಒರೆಗಾನ್ ಸ್ಟೇಟ್‌ನಲ್ಲಿ ನಡೆಯುವ ವಿಶ್ವ ಚಾಂಪಿಯನ್ ಶಿಪ್ ಅಥ್ಲೆಟಿಕ್ ಕ್ರೀಡಾಕೂಟಕ್ಕೆ ಭಾರತ ಪ್ರತಿನಿಧಿಸುವ ಕ್ರೀಡಾಪಟುಗಳನ್ನು ಈ ಕ್ರೀಡಾಕೂಟದಲ್ಲಿ ಆಯ್ಕೆ ಮಾಡುವ ಅತ್ಯಂತ ಪ್ರಮುಖ ಕ್ರೀಡಾಕೂಟ ಇದಾಗಿದೆ ಎಂದು ಅವರು ತಿಳಿಸಿದರು.

ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಮುಂಜಾನೆಯಿಂದ ಬೆಳಿಗ್ಗೆ 10 ಗಂಟೆಯವರೆಗೆ ಹಾಗೂ ಸಂಜೆ ಹೊನಲು ಬೆಳಕಿನಲ್ಲಿ ಕ್ರೀಡಾ ಸ್ಪರ್ಧೆಗಳು ನಡೆಯಲಿವೆ ಎಂದ ಅವರು ಮಧ್ಯಾಹ್ನ ತೀವ್ರ ಬಿಸಿಲಿನ ಬೇಗೆ ಇರುವ ಕಾರಣ ಈ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಅಲ್ಲದೆ, ಅಂತಾರಾಷ್ಟ್ರೀಯ ಕ್ರೀಡಾಕೂಟಕ್ಕೆ ಭಾರತದ ಪ್ರತಿನಿಧಿಗಳನ್ನು ಆಯ್ಕೆ ಮಾಡುವುದರಿಂದ ಸರಿಯಾದ ತೀರ್ಪುಗಳನ್ನು ನೀಡಲು ಅಥ್ಲೆಟಿಕ್ ಫೆಡರೇಷನ್ ಆಫ್ ಇಂಡಿಯಾದ ಅಧಿಕಾರಿಗಳು ಹಾಗೂ ತಾಂತ್ರಿಕ ವರ್ಗದವರು ಕ್ರೀಡಾಕೂಟಕ್ಕೆ ಆಗಮಿಸಲಿದ್ದು, ಫೋಟೋ ಫಿನೀಷ್ ರೀತಿಯ ತಾಂತ್ರಿಕ ಉಪಕರಣಗಳನ್ನು ಬಳಸಲಾಗುತ್ತಿದೆ ಎಂದು ಅವರು ವಿವರಿಸಿದರು.

ಅಥ್ಲೆಟಿಕ್ ಕೂಟದಲ್ಲಿ ಯಾವುದೇ ತೊಂದರೆ ಅಥವಾ ಅನುಮಾನಗಳಿಲ್ಲದಂತೆ ನಡೆಸುವ ಎಲ್ಲಾ ವ್ಯವಸ್ಥೆಗಳನ್ನು ಮಾಡಲಾಗಿದೆ. ಉದ್ದೀಪನ ಪರೀಕ್ಷೆಗೊಳಪಡಿಸುವ ಡೋಪ್ ಟೆಸ್ಟ್ ಕೂಡ ವ್ಯವಸ್ಥೆ ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

24ನೇ ರಾಷ್ಟ್ರೀಯ ಜೂನಿಯರ್ ಅಥ್ಲೆಟಿಕ್ಸ್ ಪ್ರತಿಷ್ಠಿತ ಕ್ರೀಡಾಕೂಟವನ್ನು ತುಮಕೂರಿನಲ್ಲಿ ನಡೆಸಲು ಅವಕಾಶ ಕಲ್ಪಿಸಿದ ಅಥ್ಲೆಟಿಕ್ ಫೆಡರೇಷನ್ ಆಫ್ ಇಂಡಿಯಾದ ಮುಖ್ಯಸ್ಥರಿಗೆ ಧನ್ಯವಾದ ಅರ್ಪಿಸಿದ ಅವರು, ತುಮಕೂರಿನಲ್ಲಿ ಇಂತಹ ಪ್ರತಿಷ್ಠಿತ ಕ್ರೀಡಾಕೂಟ ನಡೆಯುತ್ತಿರುವುದು ಹೆಮ್ಮೆಯ ವಿಷಯವಾಗಿದ್ದು, ಜಿಲ್ಲೆಯ ಯುವ ಪ್ರತಿಭೆಗಳಿಗೆ ಇದೊಂದು ಸುವರ್ಣಾವಕಾಶವಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ಅಧೀಕ್ಷಕ ಕೆ.ವಿ. ಅಶೋಕ್, ಕರ್ನಾಟಕ ಅಥ್ಲೆಟಿಕ್ ಅಸೋಸಿಯೇಷನ್ ಕಾರ್ಯದರ್ಶಿ ಸತ್ಯನಾರಾಯಣ್ ಹಾಗೂ ಸಂಸ್ಥೆಯ ಪ್ರತಿನಿಧಿ ರಾಜು ಉಪಸ್ಥಿತರಿದ್ದರು.

## ಇಂದು ಗೃಹ ಸಚಿವರಿಂದ ಉಚಿತ ಆಂಬ್ಯುಲೆನ್ಸ್ ಲೋಕಾರ್ಪಣೆ

ಕೊರಟಗೆರೆ

ತಾಲೂಕಿನ ಸಾರ್ವಜನಿಕರ ತುರ್ತು ಚಿಕಿತ್ಸಾ ನೆರವಿಗಾಗಿ ಫ್ರೆಂಡ್ಸ್ ಗ್ರೂಪ್ ಸೇವಾ ಸಂಸ್ಥೆ ಹಾಗೂ ನಟ ಜಗ್ಗೇಶ್ ಅಭಿಮಾನಿಗಳ ಸಂಘದ ವತಿಯಿಂದ ನೀಡಲಾಗಿರುವ ನೂತನ ಉಚಿತ ಆಂಬ್ಯುಲೆನ್ಸ್ ಸೇವೆಯು ಇದೇ 23ರಂದು ಆರಂಭವಾಗಲಿದೆ.

ಪಟ್ಟಣದ ಪುರಸಭಾ ಕಾರ್ಯಾಲಯದ ಮುಂಭಾಗ ಸಂಜೆ 5ಗಂಟೆಗೆ ನಡೆಯಲಿರುವ ಸಮಾರಂಭದಲ್ಲಿ ರಾಜ್ಯದ ಗೃಹ ಸಚಿವರು ಹಾಗೂ ಕ್ಷೇತ್ರದ ಶಾಸಕರಾದ ಡಾ. ಜಿ. ಪರಮೇಶ್ವರ್ ಅವರು ನೂತನ ತುರ್ತುವಾಹನವನ್ನು ಲೋಕಾರ್ಪಣೆ ಮಾಡಲಿದ್ದಾರೆ.

<u>ತ್ರಿವಿಧ ಕಾರ್ಯಕ್ರಮಗಳ ಸಂಗಮ:</u> ಆಂಬ್ಯುಲೆನ್ಸ್ ಲೋಕಾರ್ಪಣೆಯೊಂದಿಗೆ ಅಂದು ಸಂಜೆ ಎರಡು ಪ್ರಮುಖ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

<u>ಗುರುವಂದನೆ:</u> ನಿವೃತ್ತ ಶಿಕ್ಷಕರಿಗೆ ಗೌರವ ಸಮರ್ಪಣೆ.

<u>ಪ್ರತಿಭಾ ಪುರಸ್ಕಾರ:</u> 2025–26ನೇ ಸಾಲಿನ ಪಿಯು ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ತಾಲೂಕಿನ ವಿದ್ಯಾರ್ಥಿಗಳಿಗೆ ಸನ್ಮಾನ.

<u>ಮನೋರಂಜನೆ:</u> ಕಾರ್ಯಕ್ರಮದ ಅಂಗವಾಗಿ ಚಿತ್ರರಂಗದ ಹಾಸ್ಯ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಚಿತ್ರನಟ ಹಾಗೂ ರಾಜ್ಯಸಭಾ ಸದಸ್ಯ ಜಗ್ಗೇಶ್ ಕಾರ್ಯಕ್ರಮದ ಅಧ್ಯಕ್ಷತೆವಹಿಸಲಿದ್ದಾರೆ. ಕೇಂದ್ರ ಸಚಿವ ವಿ. ಸೋಮಣ್ಣ ಅವರು ನಿವೃತ್ತ ಶಿಕ್ಷಕರಿಗೆ ಗುರುವಂದನೆ ಸಲ್ಲಿಸಲಿದ್ದು, ಮಾಜಿ ಸಚಿವ ಕೆ.ಎನ್. ರಾಜಣ್ಣ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪುರಸ್ಕರಿಸಲಿದ್ದಾರೆ.

ಸಿದ್ದರಬೆಟ್ಟದ ಶ್ರೀ ವೀರಭದ್ರಶಿವಾಚಾರ್ಯ ಸ್ವಾಮೀಜಿ ಹಾಗೂ ಎಲೆರಾಂಪುರದ ಡಾ. ಶ್ರೀ ಹನುಮಂತನಾಥ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ ಎಂದು ಸಂಘಟನೆಯ ಪ್ರಮುಖರಾದ ರವಿಕುಮಾರ್ ಹಾಗೂ ಮಲ್ಲಣ್ಣ ತಿಳಿಸಿದ್ದಾರೆ.




ತುಮಕೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅವರು ಜಿಲ್ಲೆಯ ಪತ್ರಕರ್ತರ ಪ್ರವಾಸದ ನೂತನ ವಾಹನಕ್ಕೆ ಬುಧವಾರ ಶ್ರೀ ಶಿವಕುಮಾರ ಸ್ವಾಮೀಜಿ ವೃತ್ತದಲ್ಲಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ಅಧೀಕ್ಷಕ ಕೆ.ವಿ. ಅಶೋಕ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಹಿಮಂತರಾಜು ಜಿ. ಹಾಜರಿದ್ದರು.

## 276 ಮಾಜಿ ಸೈನಿಕರಿಗೆ ಆರು ತಿಂಗಳಲ್ಲಿ ಸೈಟ್ ವಿತರಣೆ: ಎಸ್ಸೆನ್

ಬೂದಿಕೋಟೆ

ತಾಲ್ಲೂಕಿನ 276 ಮಂದಿ ಮಾಜಿ ಸೈನಿಕರಿಗೆ ನಗರದ 3 ಕಿ.ಮೀ ವ್ಯಾಪ್ತಿಯೊಳಗೆ ಇನ್ನು ಆರು ತಿಂಗಳ ಅವಧಿಯಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು ಎಂದು ಶಾಸಕ ಎಸ್.ಎನ್. ನಾರಾಯಣಸ್ವಾಮಿ ಭರವಸೆ ನೀಡಿದರು.

ನಗರಸಭೆ ಕಚೇರಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಯುದ್ಧ ಸ್ಮಾರಕ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.



ದೇಶದ ರಕ್ಷಣೆಗಾಗಿ ಹೋರಾಡಿದ ಯೋಧರ ಸ್ಮರಣಾರ್ಥ ನಿರ್ಮಾಣವಾಗುತ್ತಿರುವ ಈ ಸ್ಮಾರಕಕ್ಕೆ ಎಷ್ಟು ವೆಚ್ಚವಾದರೂ ಅದನ್ನು ಸರ್ಕಾರದಿಂದ ಪಡೆಯದೆ, ತಮ್ಮ ಸ್ವಂತ ಖರ್ಚಿನಲ್ಲಿ ಭರಿಸುವುದಾಗಿ ಶಾಸಕರು ಘೋಷಿಸಿದರು. "ಯೋಧರ ಸಮಯ ಪ್ರಜ್ಞೆ, ಶಿಸ್ತು ಮತ್ತು ಸಂಯಮ ಪ್ರತಿಯೊಬ್ಬರಿಗೂ ಮಾದರಿಯಾಗಬೇಕು" ಎಂದು ಅವರು ಆಶಯ ವ್ಯಕ್ತಪಡಿಸಿದರು. "ದೇಶದಲ್ಲಿ 140 ಕೋಟಿ ಜನಸಂಖ್ಯೆ ಸುರಕ್ಷಿತವಾಗಿರಲು ಯೋಧರ ಶ್ರಮವೇ ಕಾರಣ. ನಾವು ಹಬ್ಬ–ಹರಿದಿನಗಳನ್ನು ಸಂಭ್ರಮದಿಂದ ಆಚರಿಸುತ್ತೇವೆ, ಆದರೆ ಯೋಧರಿಗೆ ದೇಶ ಕಾಯುವುದೇ ಸಂಭ್ರಮವಾಗಿದೆ. ಚಳಿ, ಮಳೆ, ಗಾಳಿ ಎನ್ನದೆ ಕುಟುಂಬವನ್ನು ಬಿಟ್ಟು ಗಡಿಯಲ್ಲಿ ನಿಲ್ಲುವ ಯೋಧರ ತ್ಯಾಗಕ್ಕೆ ನನ್ನ ಪ್ರಣಾಮಗಳು" ಎಂದು ಅವರು ಬಣ್ಣಿಸಿದರು. ಕಾರ್ಯಕ್ರಮದ ವೇದಿಕೆಯಲ್ಲಿ ಮಾಜಿ ಯೋಧರ ಟ್ರಸ್ಟ್‌ನ ಜಿಲ್ಲಾಧ್ಯಕ್ಷ ಜನಾರ್ದನ್, ಕಾರ್ಯದರ್ಶಿ ಗೋಪಿನಾಥ್, ತಾಲ್ಲೂಕು ಅಧ್ಯಕ್ಷ ರಾಮಕೃಷ್ಣಪ್ಪ ಹಾಗೂ ವೀರ ನಾರಿಯರಾದ ಪ್ರಭಾವತಿ, ಮುರುಗಮಲ್ಲು, ಚಂದ್ರಮ್ಮ ಹಾಗೂ ಮುಖಂಡರು ಉಪಸ್ಥಿತರಿದ್ದರು.

# 'ಕಾಯಕ-ದಾಸೋಹದಿಂದ ಮನುಷ್ಯನೂ ಮಹಾದೇವನಾಗಬಲ್ಲ'

ತಿಪಟೂರು

ಹನ್ನೆರಡನೇ ಶತಮಾನದಲ್ಲೇ ಜಾತಿ, ಮತ ಹಾಗೂ ಲಿಂಗಭೇದಗಳನ್ನು ನಿರಾಕರಿಸಿ, ಸತ್ಯ ಶುದ್ಧ ಕಾಯಕ ಮತ್ತು ದಾಸೋಹದ ಮೂಲಕ ಸಾಮಾನ್ಯ ಮನುಷ್ಯನೂ ದೈವತ್ವಕ್ಕೇರಬಲ್ಲ ಎಂದು ಜಗತ್ತಿಗೆ ಸಾರಿದ ಮಹಾನ್ ಮಾನವತಾವಾದಿ ಬಸವಣ್ಣ ಎಂದು ಸಿಡ್ಲೇಹಳ್ಳಿ ಮಹಾಸಂಸ್ಥಾನ ಮಠದ ಸದ್ಗುರು ಇಮ್ಮಡಿ ಕರಿಬಸವ ದೇಶಿಕೇಂದ್ರ ಸ್ವಾಮೀಜಿ ಬಣ್ಣಿಸಿದರು.

ತಾಲೂಕಿನ ಶ್ರೀ ಗುರುಕುಲಾನಂದಾಶ್ರಮದಲ್ಲಿ ಹಮ್ಮಿಕೊಳ್ಳಲಾಗಿದ್ದ ಬಸವ ಜಯಂತಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ, ಜ್ಯೋತಿ ಬೆಳಗಿಸುವ ಮೂಲಕ ಅವರು ಆಶೀರ್ವಚನ ನೀಡಿದರು.

"ಬಸವಣ್ಣನವರು ಅಂದಿನ ಕಾಲದಲ್ಲೇ ಎಲ್ಲಾ ವರ್ಗದ ಶ್ರಮಜೀವಿಗಳನ್ನು ಮತ್ತು ಮಹಿಳೆಯರನ್ನು ಸಂಘಟಿಸಿ, ಕನ್ನಡ ಭಾಷೆಯ ವಚನಗಳ ಮೂಲಕ ಅಭಿವ್ಯಕ್ತಿ ಸ್ವಾತಂತ್ರ್ಯ ನೀಡಿದ್ದರು. 'ಅನುಭವ ಮಂಟಪ'ದ ಮೂಲಕ ಜಗತ್ತಿನಲ್ಲೇ ಪ್ರಥಮ ಬಾರಿಗೆ ಸಮೂಹ ನಾಯಕತ್ವದ ಪರಿಕಲ್ಪನೆಯನ್ನು ಪರಿಚಯಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಶ್ರೇಷ್ಠತೆ ಎಂಬುದು ಹುಟ್ಟಿನಿಂದ ಬರುವುದಿಲ್ಲ, ಅದು ನಾವು ಮಾಡುವ ಕಾಯಕದಲ್ಲಿರುತ್ತದೆ ಎಂಬುದನ್ನು ಅವರು ಸಾಬೀತುಪಡಿಸಿದರು" ಎಂದು ತಿಳಿಸಿದರು.

ಸಮಾಜದ ಸ್ಥಿತಿಗತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ ಶ್ರೀಗಳು, "ನೊಂದವರ ಧ್ವನಿಯಾಗಿ ನಿಂತ ಬಸವಣ್ಣನವರ ತತ್ವಗಳು ಮತ್ತು ಮೂಲ ಆಶಯಗಳಿಗೆ ಧಕ್ಕೆ ತರುವ ಕೆಲಸ ಇಂದಿನ ದಿನಗಳಲ್ಲಿ ನಡೆಯುತ್ತಿದೆ. ಕೆಲವು ಸ್ವಾರ್ಥಿ ಹಾಗೂ ಸಂಕುಚಿತ ಮನೋಭಾವದ ವ್ಯಕ್ತಿಗಳು ಸಮಾಜವನ್ನು ಒಡೆಯಲು ಪ್ರಯತ್ನಿಸುತ್ತಿರುವುದು ದೊಡ್ಡ ವಿಪರ್ಯಾಸ" ಎಂದು ವಿಷಾದಿಸಿದರು.


ಕಾರ್ಯಕ್ರಮದಲ್ಲಿ ಶ್ರೀ ಗುರುಕುಲ ಹಿರಿಯ ವಿದ್ಯಾರ್ಥಿ ಸಂಘದ ಸಂಚಾಲಕ ಎಸ್.ಸಿ. ಚನ್ನಬಸವಣ್ಣ, ಆಡಳಿತಾಧಿಕಾರಿ ವಿ.ಬಿ. ಮಹಾಲಿಂಗಯ್ಯ, ವಕೀಲ ಎಸ್. ಜಯಣ್ಣ, ದೇವಪ್ರಸಾದ್, ವ್ಯವಸ್ಥಾಪಕ ದಕ್ಷಿಣಮೂರ್ತಿ, ವೇ. ರವಿ ಶಂಕರ್, ಪಿಆರ್‌ಒ ಪಟೇಲ್ ತೀರ್ಥ, ಸಂಯೋಜಕ ಡಾ. ಎಲ್.ಎಂ. ವೆಂಕಟೇಶ್ ಸೇರಿದಂತೆ ಮಠದ ಭಕ್ತರು ಉಪಸ್ಥಿತರಿದ್ದರು.

# ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಡಿಸಿ ಗಡುವು; ಕಾಮಗಾರಿ ವಿಳಂಬಕ್ಕೆ ಅಧಿಕಾರಿಗಳ ತರಾಟೆ

ತಿಪಟೂರು

ನಗರದ ಜನತೆಗೆ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಅಗತ್ಯವಿರುವ ವಾರ್ಡ್‌ಗಳಲ್ಲಿ ಕೂಡಲೇ ಕೊಳವೆಬಾವಿ ಕೊರೆಸಿ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಶುಭಕಲ್ಯಾಣ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರಸಭೆ ಕಚೇರಿ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನೊಣವಿನಕೆರೆ ಹೋಬಳಿಯ



ಮಾಟನಹಳ್ಳಿಯಲ್ಲಿ ಸಂಭವಿಸಿದ ಸಿಲಿಂಡರ್ ಸ್ಫೋಟದಿಂದ ಎರಡು ಮನೆಗಳು ಹಾನಿಗೊಳಗಾಗಿರುವ ಕುರಿತು ಚರ್ಚಿಸಿದ ಜಿಲ್ಲಾಧಿಕಾರಿಗಳು, "ತಹಶೀಲ್ದಾರ್ ಮತ್ತು ಅಗ್ನಿಶಾಮಕ ದಳದಿಂದ ವರದಿ ಬಂದ ತಕ್ಷಣ ಸಂಬಂಧಪಟ್ಟ ಗ್ಯಾಸ್ ಏಜೆನ್ಸಿ ಮೂಲಕ ಸಂತ್ರಸ್ತರಿಗೆ ಸೂಕ್ತ ಪರಿಹಾರ ಕೊಡಿಸಲಾಗುವುದು" ಎಂದು ತಿಳಿಸಿದರು.

ಗಾಜಿನ ಮನೆ ನಿರ್ಮಾಣ: ಅಮಾನಿಕೆರೆ ಆವರಣದಲ್ಲಿ ಗಾಜಿನ ಮನೆ ಹಾಗೂ ಎಪಿಎಂಸಿ ಆವರಣದಲ್ಲಿ ಕೋಲ್ಡ್ ಸ್ಟೋರೇಜ್ ನಿರ್ಮಾಣಕ್ಕೆ ಈಗಾಗಲೇ ತೀರ್ಮಾನಿಸಲಾಗಿದೆ.

ಬೆಸ್ಕಾಂ ಕಚೇರಿ: ರಜತಾದ್ರಿಪುರ ಮತ್ತು ಕೊನೆಹಳ್ಳಿ ಭಾಗದಲ್ಲಿ ಬೆಸ್ಕಾಂ ಕಚೇರಿ ನಿರ್ಮಾಣಕ್ಕೆ ಸರ್ಕಾರದಿಂದ ಒಪ್ಪಿಗೆ ದೊರೆತಿದೆ.

ಮುಖ್ಯಮಂತ್ರಿಗಳು ಮಂಜೂರು ಮಾಡಿರುವ ಎಲ್ಲಾ ಕಾರ್ಯಕ್ರಮಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಪೌರಾಯುಕ್ತರಿಗೆ ಸೂಚಿಸಿದರು.

ಇದಕ್ಕೂ ಮುನ್ನ ಕಲ್ಪತರು ಆಡಿಟೋರಿಯಂನಲ್ಲಿ ನಡೆದ ಕಂದಾಯ ಇಲಾಖೆ ಸಭೆಯಲ್ಲಿ, ಬಾಕಿ ಇರುವ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡಲು ಸೂಚಿಸಿದರು. ವಿಶೇಷವಾಗಿ ಇ–ಪೌತಿ ಕೆಲಸಗಳನ್ನು ಶನಿವಾರದೊಳಗೆ ಪೂರ್ಣಗೊಳಿಸುವಂತೆ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿಗಳಿಗೆ ಗಡುವು ನೀಡಿದರು.

ಜಿಲ್ಲಾಧಿಕಾರಿಗಳ ಇಷ್ಟೊಂದು ಪ್ರಮುಖ ಪ್ರವಾಸದ ಬಗ್ಗೆ ಪತ್ರಕರ್ತರಿಗೆ ಹಾಗೂ ಸಾರ್ವಜನಿಕರಿಗೆ ಮುಂಚಿತವಾಗಿ ಮಾಹಿತಿ ನೀಡದ ಇಲಾಖೆಯ ಕ್ರಮಕ್ಕೆ ಸ್ಥಳೀಯ ಪತ್ರಿಕಾ ಪ್ರತಿನಿಧಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಶಾಸಕ ಕೆ. ಷಡಕ್ಷರಿ, ಉಪವಿಭಾಗಾಧಿಕಾರಿ ಬಿ.ಕೆ. ಸಪ್ತಶ್ರೀ, ಪೌರಾಯುಕ್ತ ವಿಶ್ವೇಶ್ವರ ಬದರಗಡೆ, ತಹಶೀಲ್ದಾರ್ ಮೋಹನ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಸಂಪಿನ ಕಾಮಗಾರಿಯ ತನಿಖೆಗೆ ಒತ್ತಾಯಿಸಿ ಮನವಿ



ವಿಜಯಪುರ

ಪಟ್ಟಣದ 11ನೇ ವಾರ್ಡ್‌ನ ಚಂದೇನಹಳ್ಳಿ ಗೇಟ್ ನಲ್ಲಿ, ಸ.ನಂ.69 ರಲ್ಲಿ ನಿರ್ಮಾಣ ಮಾಡುತ್ತಿರುವ ಕುಡಿಯುವ ನೀರಿನ ಸಂಪಿನ ಕಾಮಗಾರಿ ಕಳಪೆಯಾಗಿದ್ದು, ಕೂಡಲೇ ಸೂಕ್ತ ತನಿಖೆ ನಡೆಸುವಂತೆ ಕರ್ನಾಟಕ ದಲಿತ ಜನಸೇನೆಯ ಪದಾಧಿಕಾರಿಗಳು ಪುರಸಭೆ ಮುಖ್ಯಾಧಿಕಾರಿಗೆ ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ಕರ್ನಾಟಕ ದಲಿತ ಜನಸೇನೆಯ ರಾಜ್ಯಾಧ್ಯಕ್ಷ ಟಿ.ಭರತ್ ಮಾತನಾಡಿ, 11 ನೇ ವಾರ್ಡಿನಲ್ಲಿ ನಡೆಯುತ್ತಿರುವ ನೀರಿನ ಸಂಪಿನ ಕಾಮಗಾರಿಗೆ ಬಳಕೆ ಮಾಡುತ್ತಿರುವ ಕಬ್ಬಿಣ, ಸಿಮೆಂಟ್, ಹಾಗೂ ಎಂ.ಸ್ಯಾಂಡ್ ಗುಣಮಟ್ಟದಲ್ಲಿ ಇಲ್ಲ. ನಿಗದಿತ ಪ್ರಮಾಣದಲ್ಲಿ ಕಚ್ಚಾವಸ್ತುಗಳನ್ನು ಬಳಕೆ ಮಾಡಿಲ್ಲ. ಸಂಪಿನ ಸುತ್ತಲೂ, ಕಳಪೆ ಗುಣಮಟ್ಟದ ಮಣ್ಣನ್ನು ತಂದು ಸುರಿದಿದ್ದಾರೆ. ಕೇವಲ ಒಂದು ತಿಂಗಳಿನಲ್ಲಿ ಸಂಪಿನ ಕಾಮಗಾರಿ ಮಾಡಿದ್ದು, ಸರಿಯಾಗಿ ಕ್ಯೂರಿಂಗ್ ಮಾಡಿಲ್ಲ. ಈ ಬಗ್ಗೆ ಸೂಕ್ತ ತನಿಖೆಯಾಗಬೇಕು. ಗುತ್ತಿಗೆದಾರರ ಮೇಲೆ ಕ್ರಮ ಕೈಗೊಳ್ಳಬೇಕು. ಕಳಪೆ ಕಾಮಗಾರಿಯಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದು, ಅವರನ್ನು ಕಪ್ಪು ಪಟ್ಟಿಗೆ ಸೇರಿಸಬೇಕು ಎಂದು ಒತ್ತಾಯಿಸಿದರು.

ಮನವಿ ಪತ್ರವನ್ನು ಸ್ವೀಕರಿಸಿದ ಪುರಸಭೆ ಮುಖ್ಯಾಧಿಕಾರಿ ವೈ. ಎನ್.ಸತ್ಯನಾರಾಯಣ ಮಾತನಾಡಿ, ಸಂಪು ನಿರ್ಮಾಣದ ಕಾಮಗಾರಿಯೂ , ನಗರೋತ್ಥಾನ ಯೋಜನೆಯಡಿ, 4 ನೇ ಹಂತದಲ್ಲಿ, ಜಿಲ್ಲಾಧಿಕಾರಿಗಳ ಹಂತದಲ್ಲೆ ಕ್ರಿಯಾಯೋಜನೆ ತಯಾರಿಸಿ, ಟೆಂಡರ್ ಕರೆದು, ಕಾರ್ಯಾದೇಶ ವಿತರಣೆ ಮಾಡಿರುತ್ತಾರೆ. ಅದರಂತೆ ಗುತ್ತಿಗೆದಾರರು ಕಾಮಗಾರಿ ಮಾಡುತ್ತಿದ್ದಾರೆ. ಮನವಿಯಂತೆ ಪರಿಶೀಲನೆ ನಡೆಸಲು ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರಿಗೆ ರವಾನಿಸಲಾಗುತ್ತದೆ ಅಲ್ಲಿಂದ ವರದಿ ಬಂದ ನಂತರ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ದಲಿತ ಜನಸೇನೆ ಮುಖಂಡರಾದ ಹರೀಶ್, ಪ್ರವೀಣ್ ಕುಮಾರ್, ಕೃಷ್ಣಮೂರ್ತಿ, ಗಂಗಾಧರ್, ಪ್ರಕಾಶ್, ಮೋಹನ್, ಮುಂತಾದವರು ಹಾಜರಿದ್ದರು.

# 'ಭಾರತೀಯ ಸಂಸ್ಕೃತಿಯನ್ನು ಗಟ್ಟಿಗೊಳಿಸಿದ ಶಂಕರಾಚಾರ್ಯರು'



ತುಮಕೂರು

ವೇದ, ಉಪನಿಷತ್ತುಗಳ ಮೇಲಿನ ನಂಬಿಕೆ ಕುಸಿದು, ಭಾರತೀಯ ಸಂಸ್ಕೃತಿ ಮತ್ತು ಪರಂಪರೆ ದಾರಿ ತಪ್ಪುವ ಸಂದರ್ಭದಲ್ಲಿ ತಮ್ಮ ಅದ್ವೈತ ಸಿದ್ಧಾಂತ, ಕರ್ಮಯೋಗದ ಮೂಲಕ ಭಾರತೀಯತೆಯನ್ನು ಸರಿದಾರಿಗೆ ತಂದ ಯುಗ ಪ್ರವರ್ತಕ ಶ್ರೀ ಶಂಕರಾಚಾರ್ಯರು ಎಂದು ನಗರ ಶಾಸಕ ಜಿ.ಬಿ. ಜ್ಯೋತಿಗಣೇಶ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತುಮಕೂರು ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ತುಮಕೂರು ಜಿಲ್ಲಾ ಬ್ರಾಹ್ಮಣ ಸಭಾ ಹಾಗೂ ಶ್ರೀ ಶಂಕರ ಸೇವಾ ಸಮಿತಿ ವತಿಯಿಂದ ಮಂಗಳವಾರ ನಗರದ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ಆಯೋಜಿಸಲಾಗಿದ್ದ "ಶ್ರೀ ಶಂಕರಾಚಾರ್ಯ ಜಯಂತಿ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಂಕರಾಚಾರ್ಯರು ಭಾರತದ ಧಾರ್ಮಿಕ, ಸಾಮಾಜಿಕ, ಆಧ್ಯಾತ್ಮಿಕ, ಸಾಹಿತ್ಯಿಕ ಪರಂಪರೆಯನ್ನು ಸರಿದಾರಿಗೆ ತರಲು ತಮ್ಮ ಜೀವಿತದ ಅವಧಿಯಲ್ಲಿ ಜನಪರ ಆಲೋಚನೆ, ಆಚರಣೆಗಳ ಮೂಲಕ ಧರ್ಮ ಸಂರಕ್ಷಣೆಗೆ ಭದ್ರ ಬುನಾದಿ ಹಾಕಿದ್ದಾರೆ. ಧರ್ಮ ಸಂರಕ್ಷಣೆಗಾಗಿ ಇಡೀ ಭಾರತದ ನಾಲ್ಕು ದಿಕ್ಕುಗಳಲ್ಲಿಯೂ ಮಠಗಳನ್ನು ಸ್ಥಾಪಿಸಿ, ಅವುಗಳ ಮೂಲಕ ಧರ್ಮ ಜಾಗೃತಿಯಲ್ಲಿ ತೊಡಗಿದ್ದರು ಎಂದು ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಕೆ.ಎಸ್.ಸಿದ್ದಲಿಂಗಪ್ಪ ಮಾತನಾಡಿ, ಶಂಕರಾಚಾರ್ಯರು ಅತ್ಯಂತ ಕಡಿಮೆ ವಯಸ್ಸಿನಲ್ಲಿಯೇ ಅಖಂಡ ಪಾಂಡಿತ್ಯದ ಮೂಲಕ ಜ್ಞಾನ ಸಾಧನೆ ಮಾಡಿದ್ದರು.

ಶಂಕರಾಚಾರ್ಯರು ವೈದಿಕ ಪರಂಪರೆಗೆ ನೀಡಿದ ಕೊಡುಗೆ ಅಪಾರ. ಅವರ ಚಿಂತನೆಗಳು ಇಂದಿಗೂ ಪ್ರಸ್ತುತ. ಕಾಯಕದ ಅವಶ್ಯಕತೆಯನ್ನು ಒತ್ತಿ ಹೇಳಿದ ಶಂಕರರು, ಸಂಪಾದನೆ ಸರಿಯಾದ ಮಾರ್ಗದಲ್ಲಿ ಇರಬೇಕು ಎಂಬುದರ ಜೊತೆಗೆ, ನನ್ನ ಜನ್ಮ ಭೂಮಿಗಿಂತ ಮೀಗಿಲಾದುದ್ದು ಮತ್ತೊಂದಿಲ್ಲ ಎಂದು ಹೇಳುವ ರಾಷ್ಟ್ರಪ್ರೇಮವನ್ನು ಜನರಲ್ಲಿ ಬಿತ್ತಿದರು ಎಂದರು.

ತುಮಕೂರು ರಾಮಕೃಷ್ಣ ವಿವೇಕಾನಂದ ಆಶ್ರಮದ ಪರಮಾನಂದಜೀ ಮಹಾರಾಜ್ ಸ್ವಾಮೀಜಿಯವರು ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ವಹಿಸಿ, ಆಶೀರ್ವಚನ ನೀಡಿದರು.

ಕಾರ್ಯಕ್ರಮದ ಪೂರ್ವದಲ್ಲಿ ಶ್ರೀ ಶಂಕರ ಭಜನಾ ಮಂಡಳಿಯ ವತಿಯಿಂದ ಭಜನಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು ಹಾಗೂ ಶ್ರೀ ಶಂಕರಾಚಾರ್ಯರನ್ನು ಕುರಿತಂತೆ ಏರ್ಪಡಿಸಲಾಗಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಕೆ.ಎಸ್.ಸಿದ್ದಲಿಂಗಪ್ಪ ಮಾತನಾಡಿ, ಶಂಕರಾಚಾರ್ಯರು ಅತ್ಯಂತ ಕಡಿಮೆ ವಯಸ್ಸಿನಲ್ಲಿಯೇ ಅಖಂಡ ಪಾಂಡಿತ್ಯದ ಮೂಲಕ ಜ್ಞಾನ ಸಾಧನೆ ಮಾಡಿದ್ದರು.

ಶಂಕರಾಚಾರ್ಯರು ವೈದಿಕ ಪರಂಪರೆಗೆ ನೀಡಿದ ಕೊಡುಗೆ ಅಪಾರ. ಅವರ ಚಿಂತನೆಗಳು ಇಂದಿಗೂ ಪ್ರಸ್ತುತ. ಕಾಯಕದ ಅವಶ್ಯಕತೆಯನ್ನು ಒತ್ತಿ ಹೇಳಿದ ಶಂಕರರು, ಸಂಪಾದನೆ ಸರಿಯಾದ ಮಾರ್ಗದಲ್ಲಿ ಇರಬೇಕು ಎಂಬುದರ ಜೊತೆಗೆ, ನನ್ನ ಜನ್ಮ ಭೂಮಿಗಿಂತ ಮೀಗಿಲಾದುದ್ದು ಮತ್ತೊಂದಿಲ್ಲ ಎಂದು ಹೇಳುವ ರಾಷ್ಟ್ರಪ್ರೇಮವನ್ನು ಜನರಲ್ಲಿ ಬಿತ್ತಿದರು ಎಂದರು.

ತುಮಕೂರು ರಾಮಕೃಷ್ಣ ವಿವೇಕಾನಂದ ಆಶ್ರಮದ ಪರಮಾನಂದಜೀ ಮಹಾರಾಜ್ ಸ್ವಾಮೀಜಿಯವರು ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ವಹಿಸಿ, ಆಶೀರ್ವಚನ ನೀಡಿದರು.

ಕಾರ್ಯಕ್ರಮದ ಪೂರ್ವದಲ್ಲಿ ಶ್ರೀ ಶಂಕರ ಭಜನಾ ಮಂಡಳಿಯ ವತಿಯಿಂದ ಭಜನಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು ಹಾಗೂ ಶ್ರೀ ಶಂಕರಾಚಾರ್ಯರನ್ನು ಕುರಿತಂತೆ ಏರ್ಪಡಿಸಲಾಗಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ತುಮಕೂರು ತಹಶೀಲ್ದಾರ್ ರಾಜೇಶ್ವರಿ, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಭಾರ ಸಹಾಯಕ ನಿರ್ದೇಶಕ ಬಿ. ನೀಲಮ್ಮ ಸೇರಿದಂತೆ ಜಿಲ್ಲಾ ಬ್ರಾಹ್ಮಣ ಸಭಾ ಮತ್ತು ಶ್ರೀ ಶಂಕರ ಸೇವಾ ಸಮಿತಿಯ ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಮಹಿಳಾ ಮೀಸಲಾತಿ ಮಸೂದೆಗೆ ಕಾಂಗ್ರೆಸ್ ವಿರೋಧ ಖಂಡಿಸಿ ಜೆಡಿಎಸ್ ಪ್ರತಿಭಟನೆ

ದೊಡ್ಡಬಳ್ಳಾಪುರ

ದೇಶದ ರಾಜಕೀಯದಲ್ಲಿ ಮಹಿಳೆಯರಿಗೆ ಸಮಾನ ಅವಕಾಶ ಕಲ್ಪಿಸುವ 'ಮಹಿಳಾ ಮೀಸಲಾತಿ ಮಸೂದೆ' ಜಾರಿಗೆ ಅಡ್ಡಗಾಲು ಹಾಕುತ್ತಿರುವ ಕಾಂಗ್ರೆಸ್ ಪಕ್ಷವು ಮಹಿಳಾ ವಿರೋಧಿ ಎಂಬುದು ಸಾಬೀತಾಗಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಮಂಜುನಾಥ್ ಆರೋಪಿಸಿದರು.

ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳು ಸಹಕಾರ ನೀಡದ ಹಿನ್ನೆಲೆಯಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಹಾಗೂ ತಾಲೂಕು ಜೆಡಿಎಸ್ ವತಿಯಿಂದ ಬುಧವಾರ ನಗರದ ತಾಲೂಕು ಕಚೇರಿ ವೃತ್ತದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಮಂಜುನಾಥ್, "ಕೇಂದ್ರದ ಎನ್‌ಡಿಎ ಸರ್ಕಾರವು ಮಹಿಳಾ ಸಬಲೀಕರಣಕ್ಕಾಗಿ ಈ ಐತಿಹಾಸಿಕ ಮಸೂದೆಯನ್ನು ತಂದಿದೆ. ಆದರೆ, ಸಂಸತ್ತಿನಲ್ಲಿ ಬಹುಮತ ಸಿಗದಂತೆ ಕುತಂತ್ರ ಮಾಡುತ್ತಿರುವ ಕಾಂಗ್ರೆಸ್ ನಡೆ ದೇಶದ ಕೋಟ್ಯಂತರ ಮಹಿಳೆಯರಿಗೆ ಮಾಡಿದ ಅವಮಾನ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜೆಡಿಎಸ್ ಮುಖಂಡ ಡಾ. ವಿಜಯ್ ಕುಮಾರ್ ಮಾತನಾಡಿ, "ಕಳೆದ ಮೂರು ದಶಕಗಳಿಂದ ನೆನೆಗುದಿಗೆ ಬಿದ್ದಿದ್ದ ಮಸೂದೆಯನ್ನು ಜಾರಿ ಮಾಡಲು ಎನ್‌ಡಿಎ ಸರ್ಕಾರ ದಿಟ್ಟ ಹೆಜ್ಜೆ ಇಟ್ಟಿದೆ. ಈ ಸಮಯದಲ್ಲಿ ಪಕ್ಷಾತೀತ ಬೆಂಬಲ ನೀಡಬೇಕಿದ್ದ ಕಾಂಗ್ರೆಸ್, ಮಹಿಳೆಯರ ಹಕ್ಕನ್ನು



ಕಸಿದುಕೊಳ್ಳುವ ಪ್ರಯತ್ನ ಮಾಡುತ್ತಿದೆ" ಎಂದರು. ಮುಖಂಡ ಹರೀಶ್ ಗೌಡ ಮಾತನಾಡಿ, ಕೇವಲ ಮತಕ್ಕಾಗಿ ಮಹಿಳೆಯರ ಪರ ಎಂದು ಹೇಳಿಕೊಳ್ಳುವ ಕಾಂಗ್ರೆಸ್‌ನ ಅಸಲಿ ಮುಖ ಈಗ ಬಯಲಾಗಿದೆ ಎಂದು ಲೇವಡಿ ಮಾಡಿದರು.

ಪ್ರತಿಭಟನೆಗೂ ಮುನ್ನ ಜೆಡಿಎಸ್ ಕಾರ್ಯಕರ್ತರು ತಾಲೂಕು ಕಚೇರಿ ವೃತ್ತದಲ್ಲಿ ಬೃಹತ್ ಮಾನವ ಸರಪಳಿ ನಿರ್ಮಿಸಿ ಕಾಂಗ್ರೆಸ್ ವಿರುದ್ಧ ಘೋಷಣೆಗಳನ್ನು ಕೂಗಿದರು. ನಂತರ ಕಾಲ್ನಡಿಗೆಯ ಮೂಲಕ ತಾಲೂಕು ಕಚೇರಿಗೆ ತೆರಳಿ ತಹಶೀಲ್ದಾರರ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ಮಹಿಳಾ ಮುಖಂಡರು, ವಕೀಲ ಅಂಜನ್ ಗೌಡ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

# ಹಳ್ಳಿಗಳ ಸಂಸ್ಕೃತಿ ಉಳಿಸಲು ಯುವ ಪೀಳಿಗೆ ಮುಂದಾಗಲಿ: ಪ್ರೊ. ಮೋಹನ್

ತುಮಕೂರು

ನಮ್ಮ ಹಳ್ಳಿಗಳು ಕೇವಲ ವಾಸಸ್ಥಾನಗಳಲ್ಲ, ಅವು ಭಾರತೀಯ ಸಂಸ್ಕೃತಿಯ ಜೀವನಾಡಿಗಳು. ಆಧುನಿಕತೆಯ ಅಬ್ಬರದಲ್ಲಿ ಮರೆಯಾಗುತ್ತಿರುವ ಗ್ರಾಮೀಣ ಸೊಗಡನ್ನು ಉಳಿಸಿಕೊಳ್ಳುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ತುಮಕೂರು ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವ ಪ್ರೊ. ಮೋಹನ್ ಹೆಚ್. ಎಸ್. ಹೇಳಿದರು.

ತುಮಕೂರು ವಿವಿ ಸ್ನಾತಕೋತ್ತರ ಪತ್ರಿಕೋದ್ಯಮ ವಿಭಾಗ ಹಾಗೂ ಬೆಂಗಳೂರಿನ ಸ್ವಗ್ರಾಮ್ ಫೌಂಡೇಶನ್ ಸಹಯೋಗದಲ್ಲಿ ಬುಧವಾರ (ಏ. 22) ಆಯೋಜಿಸಲಾಗಿದ್ದ "ಮಾಧ್ಯಮದ ನಡಿಗೆ ಹಳ್ಳಿ ಕಡೆಗೆ: ಸ್ಥಳೀಯ ಇತಿಹಾಸದ ಡಿಜಿಟಲ್ ದಾಖಲೀಕರಣ" ಎಂಬ ಕಾರ್ಯಾಗಾರವನ್ನು



ಉದ್ಘಾಟಿಸಿ ಅವರು ಮಾತನಾಡಿದರು.

"ನೈಜ ಭಾರತ ಹಳ್ಳಿಗಳಲ್ಲಿ ವಾಸಿಸುತ್ತದೆ. ಹಳ್ಳಿಗಳಿಗೆ ಮೂಲಸೌಕರ್ಯಗಳನ್ನು ಒದಗಿಸುವಾಗ ಅಲ್ಲಿನ ಮೂಲ ಸಂಸ್ಕೃತಿ ಮತ್ತು ಸಂಸ್ಕಾರಕ್ಕೆ ಧಕ್ಕೆಯಾಗಬಾರದು. ಯುವ ಪೀಳಿಗೆ ತಮ್ಮ ಬೇರುಗಳನ್ನು ಮರೆಯದೆ ಗ್ರಾಮಗಳ ಏಳಿಗೆಗಾಗಿ ಶ್ರಮಿಸಬೇಕು" ಎಂದು ಅವರು ಕರೆ ನೀಡಿದರು.

ವಿಶ್ವವಿದ್ಯಾನಿಲಯ ಕಲಾ ಕಾಲೇಜಿನ ಪ್ರಾಂಶುಪಾಲರಾದ ಡಾ. ಜಿ. ದಾಕ್ಷಾಯಣಿ ಮಾತನಾಡಿ, "ಪತ್ರಿಕೋದ್ಯಮವು ಜನಸಾಮಾನ್ಯರ ಧ್ವನಿಯಾಗಿದೆ. ಪತ್ರಕರ್ತರು ಕೇವಲ ಮೇಲ್ನೋಟದ ಸುದ್ದಿಗಳಿಗಷ್ಟೇ ಸೀಮಿತವಾಗದೆ, ಆಳವಾದ ಸಂಶೋಧನೆಯ ಮೂಲಕ ಮರೆಯಾಗಿರುವ ಸತ್ಯಗಳನ್ನು ಸಮಾಜದ ಮುಂದೆ ತರಬೇಕು" ಎಂದರು.

ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥರಾದ ಡಾ. ಸಿಬಂತಿ ಪದ್ಮನಾಭ ಕೆ.ವಿ. ಮಾತನಾಡಿ, "ಕಣ್ಮರೆಯಾಗುತ್ತಿರುವ ಗ್ರಾಮೀಣ ಆಚರಣೆಗಳನ್ನು ಉಳಿಸಲು ಈ ಕಾರ್ಯಾಗಾರ ಸಹಕಾರಿಯಾಗಿದೆ. ವಿದ್ಯಾರ್ಥಿಗಳು ಆಡಿಯೋ–ವಿಡಿಯೋ ಎಡಿಟಿಂಗ್ ಹಾಗೂ ವರದಿಗಾರಿಕೆಯ ಪ್ರಾಯೋಗಿಕ ಕೌಶಲ್ಯಗಳನ್ನು ಬೆಳೆಸಿಕೊಳ್ಳಲು ಇದು ಉತ್ತಮ ವೇದಿಕೆ" ಎಂದರು.

ಸ್ವಗ್ರಾಮ್ ಫೌಂಡೇಶನ್‌ನ ಸಿಇಒ ಮಹೇಶ್ ಹೆಚ್. ಚಿತ್ರಪ್ಪ ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಗ್ರಾಮೀಣ ವೈಶಿಷ್ಟ್ಯಗಳನ್ನು ಡಿಜಿಟಲೀಕರಣದ ಮೂಲಕ ದಾಖಲಿಸುವ ಅಗತ್ಯವನ್ನು ವಿವರಿಸಿದರು. ಪೂರ್ಣಿಮಾ ಹೆಗಡೆ ಮತ್ತು ಸೋಮಶೇಖರ್ ತೆಂಕಿಲ ಅವರು ನುಡಿಚಿತ್ರ ಹಾಗೂ ಸಾಕ್ಷ್ಯಚಿತ್ರ ನಿರ್ಮಾಣದ ಬಗ್ಗೆ ತರಬೇತಿ ನೀಡಿದರು.

# 'ಕಾಂಗ್ರೆಸ್‌ಗೆ ಮಹಿಳೆಯರ ಮತ ಬೇಕು, ಅಧಿಕಾರ ಬೇಡ'

ತುಮಕೂರು

ಲೋಕಸಭೆ ಹಾಗೂ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ. 33ರಷ್ಟು ಮೀಸಲಾತಿ ಕಲ್ಪಿಸುವ 'ನಾರಿಶಕ್ತಿ ವಂದನ್ ಮಸೂದೆ'ಗೆ ಅಡ್ಡಗಾಲು ಹಾಕಿರುವ ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳ ನಡೆ ಮಹಿಳಾ ವಿರೋಧಿಯಾಗಿದೆ ಎಂದು ಆರೋಪಿಸಿ ಜೆಡಿಎಸ್ ಕಾರ್ಯಕರ್ತರು ನಗರದಲ್ಲಿ ಬುಧವಾರ ಬೃಹತ್ ಪ್ರತಿಭಟನೆ ನಡೆಸಿದರು.

ಜಿಲ್ಲಾ ಜೆಡಿಎಸ್ ಅಧ್ಯಕ್ಷ ಹೆಚ್. ನಿಂಗಪ್ಪ ಅವರ ನೇತೃತ್ವದಲ್ಲಿ ಜೆಡಿಎಸ್ ಕಚೇರಿಯಿಂದ ಬಿಜಿಎಸ್ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ಮುಖಂಡರು, ಕಾಂಗ್ರೆಸ್ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಬಿಜಿಎಸ್ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಮಾತನಾಡಿದ ಹೆಚ್. ನಿಂಗಪ್ಪ, "ಪ್ರಧಾನಿ ನರೇಂದ್ರ ಮೋದಿಯವರು ಮಹಿಳಾ ಸಬಲೀಕರಣಕ್ಕಾಗಿ ತಂದ ಮಸೂದೆಯನ್ನು ಕಾಂಗ್ರೆಸ್ ತಿರಸ್ಕರಿಸಿದೆ. ಮಹಿಳೆಯರನ್ನು ಕೇವಲ ಮತಬ್ಯಾಂಕ್ ಆಗಿ ಬಳಸಿಕೊಳ್ಳುವ ಕಾಂಗ್ರೆಸ್‌ಗೆ ಅವರಿಗೆ ಅಧಿಕಾರ ನೀಡುವುದು ಇಷ್ಟವಿಲ್ಲ. ಇದು ಅಂಬೇಡ್ಕರ್ ಅವರ ಸಂವಿಧಾನದ ಆಶಯಕ್ಕೆ ಹಾಗೂ ಸಾಮಾಜಿಕ ನ್ಯಾಯಕ್ಕೆ ಮಾಡಿದ ದ್ರೋಹ" ಎಂದು



ಕಿಡಿಕಾರಿದರು.

ತುರುವೇಕರೆ ಶಾಸಕ ಎಂ.ಟಿ. ಕೃಷ್ಣಪ್ಪ ಮಾತನಾಡಿ, "ಗ್ಯಾರಂಟಿಗಳ ಆಮಿಷವೊಡ್ಡಿ ಮಹಿಳೆಯರನ್ನು ಮರಳು ಮಾಡಬಹುದು ಎಂಬ ಹುಂಬುತನದಲ್ಲಿ ಕಾಂಗ್ರೆಸ್ ಇದೆ. ಲೋಕಸಭೆಯಲ್ಲಿ ಮಸೂದೆ ಬಿದ್ದಾಗ ಪ್ರಿಯಾಂಕಾ ಗಾಂಧಿ ಅವರು ವಿಕೃತವಾಗಿ ನಗುವ ಮೂಲಕ ದೇಶದ 70 ಕೋಟಿ ಮಹಿಳೆಯರನ್ನು ಅಣಕಿಸಿದ್ದಾರೆ. ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ತಂದವರು ಹೆಚ್.ಡಿ. ದೇವೇಗೌಡರು. ಕಾಂಗ್ರೆಸ್‌ಗೆ ಮಹಿಳೆಯರು ಮುಂದಿನ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ" ಎಂದು ಎಚ್ಚರಿಸಿದರು.

ತಿಪಟೂರಿನ ಮುಖಂಡ ಕೆ.ಟಿ. ಶಾಂತಕುಮಾರ್ ಮಾತನಾಡಿ, 2047ರ ವಿಕಸಿತ ಭಾರತದ ಗುರಿ ತಲುಪಲು ಮಹಿಳಾ ಸಬಲೀಕರಣ ಅತ್ಯಗತ್ಯ. ಆದರೆ ಕಾಂಗ್ರೆಸ್ ಈ ಪ್ರಯತ್ನವನ್ನು ಹಳಿತಪ್ಪಿಸುತ್ತಿದೆ ಎಂದರು. ಮಾಜಿ ಶಾಸಕ ಕೆ.ಎಂ. ತಿಮ್ಮರಾಯಪ್ಪ ಮಾತನಾಡಿ, ಕಾಂಗ್ರೆಸ್‌ನವರಿಗೆ ಮಹಿಳೆಯರ ಬಗ್ಗೆ ಗೌರವವಿಲ್ಲ ಎಂದು ಟೀಕಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಉಪಮೇಯರ್ ಟಿ.ಆರ್. ನಾಗರಾಜು, ಕುಸುಮಾ ಜಗನ್ನಾಥ್, ಸೋಲಾರ್ ಕೃಷ್ಣಮೂರ್ತಿ, ನಾಗವಲ್ಲಿ ರಾಮು ಹಾಗೂ ಜಿಲ್ಲೆಯ ವಿವಿಧ ತಾಲ್ಲೂಕುಗಳ ಜೆಡಿಎಸ್ ಪದಾಧಿಕಾರಿಗಳು, ಮಹಿಳಾ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಕಾನೂನು ವಿರೋಧಿ ತೆರಿಗೆ ಹೆಚ್ಚಳ ರದ್ದುಪಡಿಸಲು ಆಗ್ರಹ

ತುಮಕೂರು

ನಗರಪಾಲಿಕೆಯು 2026–27ನೇ ಸಾಲಿನ ಆಸ್ತಿ ತೆರಿಗೆ ಹಾಗೂ ಮುದ್ರಾಂಕ ಶುಲ್ಕವನ್ನು ಕಾನೂನುಬಾಹಿರವಾಗಿ ದುಪ್ಪಟ್ಟು ಹೆಚ್ಚಳ ಮಾಡಿದೆ. ಹೆಚ್ಚಿಸಿರುವ ತೆರಿಗೆಯನ್ನು ರದ್ದು ಮಾಡಬೇಕು, ಇಲ್ಲವಾದಲ್ಲಿ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿಸಲ್ಲಿಸುವುದಾಗಿ ರಾಷ್ಟ್ರೀಯ ಮಾನವ–ಪರಿಸರ ಸಂರಕ್ಷಣಾ ಪಡೆ ಅಧ್ಯಕ್ಷ ಜಿ.ಎಸ್. ಬಸವರಾಜು ಹೇಳಿದರು.

ಬುಧವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆಸ್ತಿ ತೆರೆಗೆ ಹಾಗೂ ಮುದ್ರಾಂಕ ಶುಲ್ಕವನ್ನು ಕ್ರಯದ ಒಟ್ಟು ಮೊಬಲಗು ಮೊತ್ತದ ಶೇಕಡ 0.2ರಷ್ಟು ಪಾವತಿಸಿಕೊಳ್ಳುವುದು ಅಂತ ಪರಿಷ್ಕರಿಸಲಾಗಿದ್ದು. ಇದರಿಂದ ಸುಮಾರು ಶೇಕಡ 50ರಷ್ಟು ತೆರಿಗೆ ಹೊರೆ ಜನರ ಮೇಲೆ ಬೀಳಲಿದೆ. ಈ ಮೂಲಕ ನಗರಪಾಲಿಗೆ ಹಗಲು ದರೋಡೆಗಿಳಿದಿದೆ ಎಂದು ಟೀಕಿಸಿದರು.

ಮಹಾನಗರ ಪಾಲಿಕೆಯ ಆಯುಕ್ತರ ಕಛೇರಿ ಆದೇಶ ಸಂಖ್ಯೆ: ಆಸ್ತಿ ತೆರಿಗೆ ಪರಿಷ್ಕರಣೆಗೆ 50/4–195/2025–26, 2:23–03–2026003 ಸಂಬಂಧಿಸಿದಂತೆ ಆದೇಶ ಹೊರಡಿಸಿದ್ದು, ಸದರಿ ಆದೇಶದಲ್ಲಿ 2025–26ನೇ ಸಾಲಿಗೆ ಪಾವತಿಸಿಕೊಳ್ಳುತ್ತಿರುವ ಆಸ್ತಿ ತೆರಿಗೆಯನ್ನು, ನೊಂದಣಿ ಮತ್ತು ಮುದ್ರಾಂಕ ಶುಲ್ಕದ ಶೇ 2ರಷ್ಟು ಇದ್ದು, 2026–27ನೇ ಸಾಲಿನ ಶುಲ್ಕವನ್ನು ಕ್ರಯದ ಒಟ್ಟು ಮೊಬಲಗು ಮೊತ್ತದ ಶೇ 0.2ರಷ್ಟು ಪಾವತಿಸಿಕೊಳ್ಳುವುದು ಅಂತ ಪರಿಷ್ಕರಿಸಲಾಗಿದ್ದು, ಉಲ್ಲೇಖ (1) ಮತ್ತು (2)ರ ಪ್ರಕಾರ ಅಂತ ನಮೂದಿಸಿರುತ್ತಾರೆ. ಈ ಪರಿಷ್ಕರಣೆಯು ಹಿಂದಿನ ವರ್ಷಕ್ಕೆ ಹೋಲಿಸಿದರೆ ಸುಮಾರು ಶೇಕಡ 50ರಷ್ಟು ಜಾಸ್ತಿ ಆಗುವುದು ಎಂದು ಹೇಳಿದರು.

2026–27ನೇ ಸಾಲಿಗೆ ಪರಿಷ್ಕರಣೆ ಶುಲ್ಕ ಕ್ರಯದ ಒಟ್ಟು ಮೊಬಲಗು ಮೊತ್ತದ ಶೇಕಡ 0.2ರಷ್ಟು ಪಾವತಿಸಿಕೊಳ್ಳಲು ಸದರಿ ಅಧಿನಿಯಮದಲ್ಲಿ ಯಾವ ಅವಕಾಶವೂ ಇಲ್ಲ. ಸದರಿ ಅಧಿನಿಯಮವು ಇದುವರೆವಿಗೂ ತಿದ್ದುಪಡಿಯೂ ಕೂಡ ಆಗಿರುವುದಿಲ್ಲ. ಆದ್ದರಿಂದ ಸದರಿ ಪರಿಷ್ಕರಣೆ ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ಹಾಗೂ ಕರ್ನಾಟಕ ಸ್ಟಾಂಪ್‌ಗಳ ಅಧಿನಿಯಮ 1957 ಸ್ಪಷ್ಟ ಉಲ್ಲಂಘನೆಯಾಗಿರುತ್ತದೆ. ಆದ್ದರಿಂದ ಸದರಿ ತೆರಿಗೆ ಪರಿಷ್ಕರಣೆಯು ಕಾನೂನುಬಾಹಿರ ಕೃತ್ಯವಾಗಿರುತ್ತದೆ. ಈ ರೀತಿ ಪರಿಷ್ಕರಣೆಗೆ ಆದೇಶವಿಲ್ಲದಿದ್ದಲ್ಲಿ ಸದರಿ ಪರಿಷ್ಕರಣೆಯನ್ನು ಕೂಡಲೇ ತಡೆಹಿಡಿಯಬೇಕೆಂದು ಜಿ.ಎಸ್. ಬಸವರಾಜು ಒತ್ತಾಯಿಸಿದರು.

2025–26ನೇ ಸಾಲಿನ ನೀರಿನ ತೆರಿಗೆ ರೂ. 2400 ಇದ್ದು, 2026–27ನೇ ಸಾಲಿಗೆ ರೂ. 3600 ಎಂದು ಪರಿಷ್ಕರಣೆ ಆಗಿರುತ್ತದೆ. ಅಂದರೆ ಕಳೆದ ವರ್ಷಕ್ಕಿಂತ ಶೇ 50ರಷ್ಟು ಜಾಸ್ತಿಯಾಗಿರುತ್ತದೆ. ಸದರಿ ತೆರಿಗೆ ಕಳೆದ ವರ್ಷಕ್ಕಿಂತ ಶೇ 200ರಷ್ಟು ಹೆಚ್ಚಳವಾಗಿದ್ದು, ಈ ರೀತಿ ಅವೈಜ್ಞಾನಿಕವಾಗಿ ತೆರಿಗೆ ಹೆಚ್ಚಿಸಲು ಸರ್ಕಾರದ ಆದೇಶ ಅಥವಾ ನಿರ್ದೇಶನ ಇಲ್ಲದಿದ್ದಲ್ಲಿ ಈ ಕೂಡಲೇ ತೆರಿಗೆ ಪರಿಷ್ಕರಣೆಯನ್ನು ಸಾರ್ವಜನಿಕ ಹಿತಾಸಕ್ತಿಯಿಂದ ಹಿಂಪಡೆಯಬೇಕು ಎಂದರು. ರಾಷ್ಟ್ರೀಯ ಮಾನವ–ಪರಿಸರ ಸಂರಕ್ಷಣಾ ಪಡೆ ಉಪಾಧ್ಯಕ್ಷ ಜಿ.ಕೆ. ಶ್ರೀನಿವಾಸ್, ವಿಜಯಕುಮಾರ್ ಹಾಜರಿದ್ದರು.


# ಕೈವಾರ ತಾತಯ್ಯನವರ 300ನೇ ಜಯಂತೋತ್ಸವ: ಚಿಕ್ಕಬಳ್ಳಾಪುರ-ಕೋಲಾರ ಜಿಲ್ಲೆಯಾದ್ಯಂತ ವರ್ಷಪೂರ್ತಿ ಸಂಭ್ರಮ

ಚಿಕ್ಕಬಳ್ಳಾಪುರ

ಸದ್ಗುರು ಶ್ರೀ ಯೋಗಿ ನಾರೇಯಣ ತಾತಯ್ಯನವರ 300ನೇ ಜಯಂತೋತ್ಸವದ ಅಂಗವಾಗಿ ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಾದ್ಯಂತ ಒಂದು ವರ್ಷಗಳ ಕಾಲ ನಿರಂತರವಾಗಿ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಕ್ಷೇತ್ರ ಕೈವಾರದ ಸಂಗೀತ ಸಂಚಾಲಕ ಬಾಲಕೃಷ್ಣ ಭಾಗವತರ್ ತಿಳಿಸಿದರು.

ನಗರದ ದೊಡ್ಡಗಣಪತಿ ದೇವಾಲಯದ ಆವರಣದಲ್ಲಿ ನಡೆದ ಜಯಂತೋತ್ಸವದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜಯಂತೋತ್ಸವದ ಅಂಗವಾಗಿ ಚಿಕ್ಕಬಳ್ಳಾಪುರದ ದೊಡ್ಡ ಗಣಪತಿ ದೇವಾಲಯದ ಆವರಣದಲ್ಲಿ ಮೇ 2 ರಿಂದ 8 ರವರೆಗೆ ಪ್ರತಿ ದಿನ ಸಂಜೆ 6:30 ರಿಂದ 8:30 ರವರೆಗೆ ತೆಲುಗು "ಪೋತನ ಭಾಗವತ" ಹಾಗೂ "ಶ್ರೀ



ಅಮರ ನಾರೇಯಣ ಶತಕ"ದ ಪ್ರವಚನ ಸಪ್ತಾಹ ನಡೆಯಲಿದೆ.

ಮೇ 9 ರಂದು ಕೈವಾರದಲ್ಲಿ ನಡೆಯಲಿರುವ ವಿಶೇಷ ಸಮಾರಂಭದಲ್ಲಿ, ತಾತಯ್ಯನವರ ತತ್ವ ಬೋಧನೆಗಳಿಗೆ ಅಪಾರ ಕೊಡುಗೆ ನೀಡಿದ ದಿವಂಗತ ಶ್ರೀ ಕೈಪು ಲಕ್ಷ್ಮೀನರಸಿಂಹ ಶಾಸ್ತ್ರೀಗಳಿಗೆ ಮರಣೋತ್ತರವಾಗಿ 'ನಾರೇಯಣ ಪ್ರಶಸ್ತಿ' ಪ್ರದಾನ ಮಾಡಲಾಗುವುದು. ಶ್ರೀ ಕ್ಷೇತ್ರ ಕೈವಾರದ ಧರ್ಮಾಧಿಕಾರಿ ಡಾ. ಎಂ.ಆರ್. ಜಯರಾಮ್ ಅವರು ಪ್ರಶಸ್ತಿ ಪ್ರದಾನ ಹಾಗೂ 'ಆತ್ಮಬೋಧಾಮೃತ' ಕಾರ್ಯಕ್ರಮ ನಡೆಸಿಕೊಡಲಿದ್ದಾರೆ.

ಮೇ ತಿಂಗಳ ಪ್ರಮುಖ ಕಾರ್ಯಕ್ರಮಗಳು:

ಮೇ 16: ಬೆಳಿಗ್ಗೆ 6 ಗಂಟೆಗೆ ಬಂಡಹಳ್ಳಿ ಶ್ರೀ ಮಲ್ಲೆಮ್ಮ ದೇವಾಲಯದಿಂದ ಮಂಡಿಕಲ್ಲು ಶ್ರೀ ಆಂಜನೇಯಸ್ವಾಮಿ ದೇವಾಲಯದವರೆಗೆ "ಶ್ರೀರಾಮ ದಂಡು ಸಂಕೀರ್ತನ ಪಾದಯಾತ್ರೆ" ನಡೆಯಲಿದೆ.

ಮೇ 31: ಕೈವಾರದ ಯೋಗನರಸಿಂಹಸ್ವಾಮಿ ದೇವಾಲಯದ ವೈಕುಂಠಯಾಗ ಶಾಲೆಯಲ್ಲಿ 24 ಗಂಟೆಗಳ ಕಾಲ ನಿರಂತರ "ಶ್ರೀ ರಾಮಭವತಾರಕಮಂತ್ರ ಕೋಟಿ ಜಪಯಜ್ಞ" ಜರುಗಲಿದೆ. ತಾತಯ್ಯನವರ ವೈಭವವನ್ನು ಸಾರುವ ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಉಭಯ ಜಿಲ್ಲೆಗಳ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಅವರು ಮನವಿ ಮಾಡಿದರು.

ಸಭೆಯಲ್ಲಿ ಕೈವಾರ ಆನಂದ್, ಲಕ್ಷ್ಮೀನಾರಾಯಣ, ಪುರದಗಡ್ಡೆ ಪಿ.ಎನ್. ಕೃಷ್ಣಪ್ಪ, ಸಂಗೀತ ವಿದ್ವಾಂಸ ಚಿಂತಲಪಲ್ಲಿ ಸೋಮಶೇಖರ್ ಸೇರಿದಂತೆ ಅನೇಕ ಮುಖಂಡರು ಹಾಗೂ ಭಕ್ತರು ಉಪಸ್ಥಿತರಿದ್ದರು.

24/04/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಬಕಾರಿ ನಿರೀಕ್ಷಕಿ ರಾಮಾಮಣಿ ಅಮಾನತ್ತಿಗೆ ಒತ್ತಾಯಿಸಿ ಪ್ರತಿಭಟನೆ

ಕೋಲಾರ

ತಾಲೂಕು ಅಬಕಾರಿ ನಿರೀಕ್ಷಕರಾದ ರಾಮಾಮಣಿ ರವರ ಅಮಾನತ್ತಿಗೆ ಒತ್ತಾಯಿಸಿ ಅಂಬೇಡ್ಕರ್ ಸ್ವಾಭಿಮಾನಿ ಬಳಗದ ಸದಸ್ಯರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ಬುಧವಾರದಂದು ಪ್ರತಿಭಟನಾಕಾರರು ನಗರದ ನಚಿಕೇತ ನಿಲಯದ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಚಿಕೇತ ನಿಲಯದಿಂದ

ಅಬಕಾರಿ ಇಲಾಖೆ ಕಛೇರಿವರೆಗೆ ಕಾಲ್ನಾಡಿಗೆ ಜಾತಾ ನಡೆಸಿ ಅಬಕಾರಿ ಇಲಾಖೆ ಕಛೇರಿ ಮುಂದೆ ಬೃಹತ್ ಪ್ರತಿಭಟನೆ ನಡೆಸಿದರು.

ಈ ಸಂಧರ್ಭದಲ್ಲಿ ಅಂಬೇಡ್ಕರ್ ಸ್ವಾಭಿಮಾನಿ ಬಳಗದ ರಾಜ್ಯ ಅಧ್ಯಕ್ಷ ಬಿ. ಮಂಜುನಾಥ್ ಮಾತನಾಡಿ, ಕೆ.ಜಿ.ಎಫ್ ತಾಲ್ಲೂಕು ಉಪ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಪ್ರಸ್ತುತ ಕೋಲಾರ ತಾಲ್ಲೂಕು ಅಬಕಾರಿ ಉಪ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ರಮಾಮಣಿ ಕರ್ತವ್ಯ ಲೋಪ ಎಸಗಿದ್ದು,ಅನೇಕ ಭ್ರಷ್ಟಾಚಾರ ಪ್ರಕಾರಣಗಳಲ್ಲಿ ಭಾಗಿಯಾಗಿತ್ತಾರೆ ಎಂದು ದೂರಿದರು.

ತಮಿಳುನಾಡಿನ ವೇಲೂರು ನಿವಾಸಿಗಳಾದ ದಲಿತ ಜನಾಂಗಕ್ಕೆ ಸೇರಿದ ನಾಗರಾಜ ಹಾಗೂ ಕಿಶೋರ್ ಎಂಬುವರ ಪ್ರಕರಣದಲ್ಲಿ ಕರ್ತವ್ಯ ಲೋಪ ಎಸಗಿದ್ದು,ನ್ಯಾಯಾಲಯಕ್ಕೆ ತಪ್ಪು ಮಾಹಿತಿ ನೀಡಿರುವುದು ಕಂಡು ಬಂದಿರುತ್ತದೆ ಹಾಗೂ ಇಂತಹ ಹಲವಾರು ಪ್ರಕರಣಗಳಲ್ಲಿ ಭಾಗಿ ಆಗಿರುವುದು ಸಹ ಕಂಡು ಬಂದಿರುತ್ತದೆ. ಇವುಗಳ ಬಗ್ಗೆ ಸಮಗ್ರ ತನಿಖೆ ಆಗಬೇಕೆಂದು ಅಂಬೇಡ್ಕರ್ ಸ್ವಾಭಿಮಾನಿ ಬಳಗ ಒತ್ತಾಯಿಸುತ್ತದೆ ಎಂದರು.

ನಮ್ಮ ಸಂಘಟನೆ ನೀಡಿದ ದೂರಿನ ಮೇರೆಗೆ ಕೋಲಾರ ಜಿಲ್ಲಾ ಅಬಕಾರಿ ಉಪ ಆಯುಕ್ತರು ಕೆ.ಜಿ.ಎಫ್ ಉಪ ಅಧೀಕ್ಷಕರಿಗೆ ತನಿಖೆ ನಡೆಸಿ ವರದಿ ನೀಡಲು ಸೂಚಿಸಿದ್ದು, ಕೆ.ಜಿ.ಎಫ್ ಉಪ ಅಧೀಕ್ಷಕರು ನೀಡಿರುವ ವರದಿಯಲ್ಲಿ ಅಂದಿನ ಕೆ.ಜಿ.ಎಫ್ ತಾಲ್ಲೂಕು ಉಪ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀಮತಿ ರಮಾಮಣಿ ರವರು ಪ್ರಕರಣ ದಾಖಲಿಸುವಲ್ಲಿ ಪ್ರಕ್ರಿಯೆಯನ್ನು ಸರಿಯಾಗಿ ನಿರ್ವಹಿಸದೆ ಕರ್ತವ್ಯ ಲೋಪ ಎಸಗಿರುವುದು ಸಾಬೀತಾಗಿದ್ದು,ಅಬಕಾರಿ ಉಪ ಆಯುಕ್ತರು ರಮಾಮಣಿರವರನ್ನು ಅಮಾನತ್ತು ಮಾಡುವ ಅಧಿಕಾರ ಇದ್ದರೂ ಸಹ ಮೇಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಿ,ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಳ್ಳದೆ ಇನಷ್ಟು ಭ್ರಷ್ಟಾಚಾರ ಮಾಡಲು ಕುಮ್ಮಕ್ಕು ನೀಡಿದ್ದಾರೆಂದು ಆರೋಪಿಸಿದರು. ಪ್ರತಿಭಟನೆಯಲ್ಲಿ ನೂರಾರು ಮಹಿಳೆಯರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದು, ಪ್ರತಿಭಟನೆಯ ನೇತೃತ್ವವನ್ನು ಅಂಬೇಡ್ಕರ್ ಸ್ವಾಭಿಮಾನಿ ಬಳಗದ ಕಿಲುಕೋಟೆ ಪರಮೇಶ್, ಖಾದ್ರಿಪುರ ನಾರಾಯಣ್, ಉಮಾರಾಣಿ, ರಮೇಶ್, ಸುಗಟೂರ್ ಮೂರ್ತಿ, ಸುರೇಶ್, ನವೀನ್, ಲಕ್ಷ್ಮೀಪತಿ, ಸಿಮೆಂಟ್ ರಾಜು ವಹಿಸಿದ್ದರು.

# ರಾಮಾನುಜಾಚಾರ್ಯರ ಜಯಂತಿ ಆಚರಣೆ



ತುಮಕೂರು

ವಿಶಿಷ್ಟಾದ್ವೈತ ಸಿದ್ಧಾಂತದ ಪ್ರತಿಪಾದಕ, ಸಮಾಜ ಸುಧಾರಕ ಜಗದ್ಗುರು ರಾಮಾನುಜಾಚಾರ್ಯರ 1009ನೇ ಜಯಂತೋತ್ಸವವನ್ನು ಜಿಲ್ಲಾ ಶ್ರೀವೈಷ್ಣವ ಸಮುದಾಯ ಧಾರ್ಮಿಕ ಸಂಸ್ಥೆ ನೇತೃತ್ವದಲ್ಲಿ ಬುಧವಾರ ನಗರದಲ್ಲಿ ವೈಭವದಿಂದ ನೆರವೇರಿತು.

ಇದರ ಅಂಗವಾಗಿ ನಡೆದ ಉತ್ಸವದಲ್ಲಿ ಶಾಸಕ ಜಿ.ಬಿ. ಜ್ಯೋತಿಗಣೇಶ್ ಅವರು ರಾಮಾನುಜಾಚಾರ್ಯರ ಮೂರ್ತಿಗೆ ಪುಷ್ಪಾರ್ಚನೆ ಮಾಡಿ ಭಕ್ತಿ ಸಮರ್ಪಿಸಿದರು. ಆನೆ ಮೇಲೆ ಅಲಂಕೃತ ಅಂಬಾರಿಯಲ್ಲಿ ಜಗದ್ಗುರು ರಾಮಾನುಜಾಚಾರ್ಯರ ಮೂರ್ತಿಯನ್ನು ಪೂಜಾ ಕೈಂಕರ್ಯಗಳೊಂದಿಗೆ ಪ್ರತಿಷ್ಠಾಪಿಸಿ ಅದ್ದೂರಿಯಾಗಿ ಉತ್ಸವ ಮಾಡಲಾಯಿತು. ಇದಕ್ಕೂ ಮೊದಲು ವಿವಿಧ ಪೂಜಾ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಜಯನಗರ ಪಶ್ಚಿಮ ಬಡಾವಣೆಯ ಪದ್ಮಾವತಿ ವೇಂಕಟೇಶ್ವರ ದೇವಸ್ಥಾನದಿಂದ ಆರಂಭವಾದ ಜಯಂತೋತ್ಸವದಲ್ಲಿ ವೇದಘೋಷಣೆ, ಪೂರ್ಣಕುಂಭ ಕಳಸ, ಮಂಗಳ ವಾದ್ಯ, ಜಾನಪದ ಕಲಾತಂಡಗಳ ಆಕರ್ಷಕ ಪ್ರದರ್ಶನ ಗಮನ ಸೆಳೆಯಿತು.

ದೇವಸ್ಥಾನದಿಂದ ಹೊರಟು ಮುಖ್ಯರಸ್ತೆ, ಶೆಟ್ಟಿಹಳ್ಳಿ ಮುಖ್ಯರಸ್ತೆ ಮಾರ್ಗವಾಗಿ ಮಾರುತಿನಗರ ಹೆಬ್ಬಾಗಿಲು ಮೂಲಕ ಮಾರುತಿ ನಗರ 40 ಅಡಿರಸ್ತೆ ಮಾರ್ಗವಾಗಿ ಸಾಗಿ ಜಿಲ್ಲಾ ವೈಷ್ಣವ ಸಮುದಾಯ ಧಾರ್ಮಿಕ ಸಂಸ್ಥೆಯ ಭವನದವರೆಗೆ ಉತ್ಸವ ನಡೆಯಿತು.

ಜಿಲ್ಲಾ ವೈಷ್ಣವ ಸಮುದಾಯ ಧಾರ್ಮಿಕ ಸಂಸ್ಥೆ ಅಧ್ಯಕ್ಷ, ನಗರಸಭೆ ಮಾಜಿ ಸದಸ್ಯ ಟಿ.ಎಸ್. ಮೋಹನಕುಮಾರ್, ಉಪಾಧ್ಯಕ್ಷ ನವರತ್ನಕುಮಾರ್, ನಗರಪಾಲಿಕೆ ಮಾಜಿ ಸದಸ್ಯ ಸಿ.ಎನ್. ರಮೇಶ್, ಮುಖಂಡ ಎಸ್. ಪುಟ್ಟೀರಪ್ಪ, ನಗರಸಭೆ ಮಾಜಿ ಅಧ್ಯಕ್ಷ ಟಿ.ಹೆಚ್. ಜಯರಾಮ್, ಬ್ರಾಹ್ಮಣ ಮಹಾಸಭಾ ಧ್ಯಕ್ಷ ಚಂದ್ರಶೇಖರ್ ಸೇರಿದಂತೆ ವಿವಿಧ ಮುಖಂಡರು, ಶ್ರೀ ವೈಷ್ಣವ ಸಮಾಜ ಬಾಂಧವರು ಜಯಂತೋತ್ಸವದಲ್ಲಿ ಪಾಲ್ಗೊಂಡಿದ್ದರು.



ಕೋಲಾರ ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಬುಧವಾರದಂದು ಬಂಗಾರಪೇಟೆ ತಾಲ್ಲೂಕಿನ ಹುಲಿಬೆಲೆ ಗ್ರಾಮಕ್ಕೆ ಭೇಟಿ ನೀಡಿ, ಜನಗಣತಿ 2027ರ ಭಾಗವಾಗಿ ನಡೆಯುತ್ತಿರುವ ಮನೆಮನೆ ಸಮೀಕ್ಷೆ ಕುರಿತು ಪರಿಶೀಲನೆ ನಡೆಸಿದರು. ಮನೆಗಣತಿ ಕಾರ್ಯಕ್ಕೆ ಇನ್ನೂ ವೇಗ ನೀಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸಲಹೆ ಸೂಚನೆ ನೀಡಿದರು.

# ಅಮ್ಮೇರಹಳ್ಳಿಯಲ್ಲಿ ಸಂಭ್ರಮದ ಉಚಿತ ಬೇಸಿಗೆ ಶಿಬಿರಕ್ಕೆ ಚಾಲನೆ

ಕೋಲಾರ

ಇಂದಿನ ತಾಂತ್ರಿಕ ಯುಗದಲ್ಲಿ ಮಕ್ಕಳು ಮೊಬೈಲ್ ಮತ್ತು ಅಂತರ್ಜಾಲಕ್ಕೆ ಅಂಟಿಕೊಳ್ಳುತ್ತಿರುವ ಈ ಸಂದರ್ಭದಲ್ಲಿ ನಮ್ಮ ಸಂಸ್ಕೃತಿ ಮತ್ತು ಜಾನಪದ ಕಲೆಗಳನ್ನು ಪರಿಚಯಿಸುತ್ತಿರುವ ಈ ಶಿಬಿರ ನಿಜಕ್ಕೂ ಅಭಿನಂದನೀಯ ಎಂದು ಗಮಕ ಮಹಿಳಾ ಸಮೂಹದ ಶಾಂತಮ್ಮ ತಿಳಿಸಿದರು.

ಜಿಲ್ಲೆಯ ಸಾಂಸ್ಕೃತಿಕ ಸೊಗಡನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಅಮ್ಮೇರಹಳ್ಳಿ ಡೈರಿ ಆವರಣದಲ್ಲಿ ಈ ನೆಲ ಈ ಜಲ ಕಲೆ ಮತ್ತು ಸಾಂಸ್ಕೃತಿಕ ಸಂಸ್ಥೆ' ವತಿಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಸಹಕಾರದಲ್ಲಿ ಆಯೋಜಿಸಿರುವ ವಿಶೇಷ ಉಚಿತ ಬೇಸಿಗೆ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಮಕ್ಕಳು ಕೇವಲ ಪುಸ್ತಕದ ಶಿಕ್ಷಣಕ್ಕೆ ಸೀಮಿತವಾಗದೆ, ನಮ್ಮ ನಾಡಿನ ಕಲೆ, ಸಂಸ್ಕೃತಿ ಮತ್ತು ಮೌಲ್ಯಗಳನ್ನು ಮೈಗೂಡಿಸಿಕೊಳ್ಳಬೇಕು. ಇಂತಹ ಶಿಬಿರಗಳು ಮಕ್ಕಳಲ್ಲಿ ಸೃಜನಾತ್ಮಕತೆಯನ್ನು ಬೆಳೆಸುವುದಲ್ಲದೆ, ಅವರಲ್ಲಿ ಸಾಮಾಜಿಕ ಕಳಕಳಿಯನ್ನು ಮೂಡಿಸುತ್ತವೆ ಎಂದು ವಿದ್ಯಾರ್ಥಿಗಳಿಗೆ ಸ್ಪೂರ್ತಿದಾಯಕ ನುಡಿಗಳನ್ನು ಆಡಿದರು.

ಏಪ್ರಿಲ್ 16 ರಿಂದ 30ರವರೆಗೆ ನಡೆಯಲಿರುವ ಈ ಶಿಬಿರದಲ್ಲಿ ನೂರಾರು ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡಿದ್ದು, ಮೊದಲ ದಿನವೇ ಮಕ್ಕಳ ಕಿಲಕಿಲ ಕಲರವ ಮತ್ತು ಸಾಂಸ್ಕೃತಿಕ ಸಂಭ್ರಮ ಮೇಳೈಸಿತ್ತು. ನುರಿತ ಸಂಪನ್ಮೂಲ ವ್ಯಕ್ತಿಗಳ ಮಾರ್ಗದರ್ಶನದಲ್ಲಿ ಮಕ್ಕಳಿಗೆ ವ್ಯಕ್ತಿತ್ವ ವಿಕಸನದ ಜೊತೆಗೆ ಜಾನಪದ ಗಾಯನ, ಜನಪದ ನೃತ್ಯ, ಕೋಲಾಟ ಹಾಗೂ ಮಣ್ಣಿನ ಬೊಂಬೆ ತಯಾರಿಕೆಯಂತಹ ವೈವಿಧ್ಯಮಯ ಕಲೆಗಳ ತರಬೇತಿ ನೀಡಲಾಗುತ್ತಿದೆ.

ಶಿಬಿರದ ಸಂಘಟಕರು ಹಾಗೂ ಜಾನಪದ ಗಾಯಕ ಬಿ. ವೆಂಕಟಾಚಲಪತಿ ಅವರು ಮಾತನಾಡಿ, ಮುಂದಿನ ಪೀಳಿಗೆಗೆ ನಮ್ಮ ದೇಶೀಯ ಕಲೆಗಳನ್ನು ಪರಿಚಯಿಸುವುದು ಈ ಶಿಬಿರದ ಮುಖ್ಯ ಉದ್ದೇಶವಾಗಿದ್ದು, ಏಪ್ರಿಲ್ ಅಂತ್ಯದವರೆಗೆ ಮಕ್ಕಳಿಗೆ ಕಲಿಕೆಯ ಜೊತೆಗೆ ಸೃಜನಾತ್ಮಕ ವೇದಿಕೆಯನ್ನು ಕಲ್ಪಿಸಲಾಗುವುದು ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ತಬಲಾ ಕಲಾವಿದ ರಾಮಣ್ಣ ಮಾತನಾಡಿ, ಸಂಗೀತ ಮತ್ತು ಕಲೆಗಳು ಕೇವಲ ಮನೋರಂಜನೆಯಲ್ಲ. ಅವು ವ್ಯಕ್ತಿಯ ಶಿಸ್ತು ಮತ್ತು ಏಕಾಗ್ರತೆಯನ್ನು ಹೆಚ್ಚಿಸುವ ಸಾಧನಗಳಾಗಿವೆ. ಇಂದಿನ ಯಾಂತ್ರಿಕ ಯುಗದಲ್ಲಿ ಮಕ್ಕಳು ಮೊಬೈಲ್‌ನಿಂದ ದೂರವಿದ್ದು ಇಂತಹ ದೇಶೀಯ ಕಲೆಗಳನ್ನು ಕಲಿಯುತ್ತಿರುವುದು ಸಂತಸದ ವಿಚಾರ ಎಂದು ಅಭಿಪ್ರಾಯಪಟ್ಟರು.

ಈ ಕಲಿಕಾ ಹಬ್ಬದಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗಿನ ಆಸಕ್ತ ವಿದ್ಯಾರ್ಥಿಗಳು ಭಾಗವಹಿಸುತ್ತಿದ್ದು, ಸ್ಥಳೀಯ ಪೋಷಕರು ಈ ಸಮಾಜಮುಖಿ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಶಿಬಿರದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಶಾಂತಮ್ಮ, ಗಣೇಶಪ್ಪ ಎನ್., ವೆಂಕಟಲಕ್ಷ್ಮಮ್ಮ, ಗ್ರಾಮ ಮುಖಂಡರಾದ ನಾರಾಯಣಪ್ಪ, ಹನುಮಂತಪ್ಪ, ಶಂಕರಪ್ಪ, ವೆಂಕಟಾಚಲಪತಿ, ರಾಮಪ್ಪ ಭಾಗವಹಿಸಿದ್ದರು.




# 24ರಂದು 'ಡಾ. ರಾಜ್‌ಕುಮಾರ್ ಜಯಂತಿ' ಆಚರಣೆ



ಕೋಲಾರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕೋಲಾರ ಇವರ ಸಹಯೋಗದಲ್ಲಿ ನಡೆಯಲಿರುವ ಡಾ. ರಾಜ್‌ಕುಮಾರ್ ಜಯಂತಿ ಹಾಗೂ ಕರ್ನಾಟಕ ರತ್ನ ಡಾ. ರಾಜ್‌ಕುಮಾರ್ ಅವರ ಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮವನ್ನು ಇದೇ 24ರಂದು ಬೆಳಗ್ಗೆ 11 ಗಂಟೆಗೆ ಕೋಲಾರದ ಟಿ. ಚನ್ನಯ್ಯ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಸನ್ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಹಾಗೂ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎಸ್. ಸುರೇಶ್ ಅವರು ನೆರವೇರಿಸುವರು. ಅಧ್ಯಕ್ಷತೆಯನ್ನು ಕೋಲಾರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ. ಕೊತ್ತೂರು ಜಿ.ಮಂಜುನಾಥ್ ಅವರು ವಹಿಸುವರು.

ಮುಖ್ಯ ಅತಿಥಿಗಳಾಗಿ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ಅಧ್ಯಕ್ಷರು ಮತ್ತು ಬಂಗಾರಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಸ್. ಎನ್.ನಾರಾಯಣಸ್ವಾಮಿ ಕೆ.ಎಂ, ಕರಕುಶಲ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷರು ಮತ್ತು ಕೆ.ಜಿ.ಎಫ್ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ. ರೂಪಕಲಾ ಎಂ.ಶಶಿಧರ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಂ.ಮಲ್ಲೇಶ್ ಬಾಬು, ಕೋಚಿಮುಲ್ ಅಧ್ಯಕ್ಷರು ಮತ್ತು ಮಾಲೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ವೈ.ನಂಜೇಗೌಡ, ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಕೆ ವೆಂಕಟಶಿವಾರೆಡ್ಡಿ, ಮುಳಬಾಗಿಲು ವಿಧಾನಸಭಾ ಕ್ಷೇತ್ರದ ಶಾಸಕರಾದ ಸಮೃದ್ಧಿ ಮಂಜುನಾಥ್. ವಿಧಾನ ಪರಿಷತ್ ಶಾಸಕರಾದ ಇಂಚರ ಗೋವಿಂದರಾಜು, ಚಿದಾನಂದ ಎಂ.ಗೌಡ, ಎಂ.ಎಲ್ ಅನಿಲ್ ಕುಮಾರ್, ನಸೀರ್ ಅಹಮದ್, ಡಾ. ಡಿ.ಟಿ. ಶ್ರೀನಿವಾಸ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಜಿಲ್ಲಾ ಅಧ್ಯಕ್ಷರಾದ ವೈ.ಶಿವಕುಮಾರ್, ಕೋಲಾರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮತ್ತು ಆಡಳಿತಾಧಿಕಾರಿಗಳು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ತುಳಸಿ ಮದ್ದಿನೇನಿ ಅವರು ಭಾಗವಹಿಸುವರು.

# ಪ್ರಜಾಪ್ರಭುತ್ವಕ್ಕೆ ಮುನ್ನುಡಿ ಬರೆದವರು ಬಸವಣ್ಣ: ಡಿಸಿ ಜಿ. ಪ್ರಭು ಬಣ್ಣನೆ

ಚಿಕ್ಕಬಳ್ಳಾಪುರ

"ಬಸವಣ್ಣನವರ ನೇತೃತ್ವದಲ್ಲಿ 850 ವರ್ಷಗಳ ಹಿಂದೆ ನಡೆದ ಶರಣ ಚಳುವಳಿಯ ವಚನಗಳು ಸರಳ ಆಡುಭಾಷೆಯ ಮೂಲಕ ಸಮಾಜದ ಅಂಕುಡೊಂಕುಗಳನ್ನು ತಿದ್ದಿವೆ. ಅಂದು ಬಸವಣ್ಣನವರು ಸ್ಥಾಪಿಸಿದ ಅನುಭವ ಮಂಟಪವೇ ವಿಶ್ವದ ಮೊದಲ ಸಂಸತ್ತು ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆಗೆ ಮುನ್ನುಡಿ," ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಸೋಮವಾರ ನಗರದ ಬಸವನಗುಡಿ ಮುಂಭಾಗ ಆಯೋಜಿಸಿದ್ದ 'ವಿಶ್ವಗುರು, ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತಿ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



<u>ಜಾಗತಿಕ ಮಟ್ಟದಲ್ಲಿ ವಚನ ಸಾಹಿತ್ಯ:</u> "12ನೇ ಶತಮಾನದ ವಚನ ಚಳುವಳಿ ಒಂದು ದೊಡ್ಡ ಕ್ರಾಂತಿಯನ್ನೇ ಸೃಷ್ಟಿಸಿತು. ಶರಣರ ಜೀವನಾನುಭವದಿಂದ ಬಂದ ವಚನಗಳು ಇಂದು ಭಾರತದ ಆಚೆಗೂ ತಲುಪಿವೆ. ಭಾರತೀಯ ಸಂಸ್ಕೃತಿ ಮತ್ತು ಸಂಸ್ಕಾರದ ಮೌಲ್ಯಗಳನ್ನು ಜಾಗತಿಕ ಮಟ್ಟದಲ್ಲಿ ಎತ್ತಿಹಿಡಿದಿವೆ. ಇಂದಿನ ಯುವ ಪೀಳಿಗೆ ಕಂದಾಚಾರ ಹಾಗೂ ಮೌಢ್ಯಗಳನ್ನು ತೊಡೆದುಹಾಕಲು ವಚನಗಳನ್ನು ಪ್ರೇರಣೆಯಾಗಿ ಬಳಸಿಕೊಳ್ಳಬೇಕು" ಎಂದು ಅವರು ಕರೆ ನೀಡಿದರು.

<u>ಪ್ರಜಾಪ್ರಭುತ್ವಕ್ಕೆ ಬಸವಣ್ಣನವರೇ ಮಾದರಿ:</u> ವಿಶ್ವದ ವಿವಿಧ ಆಡಳಿತ ವ್ಯವಸ್ಥೆಗಳ ಬಗ್ಗೆ ಪ್ರಸ್ತಾಪಿಸಿದ ಜಿಲ್ಲಾಧಿಕಾರಿಗಳು, "ಜಗತ್ತಿನಲ್ಲಿ ಇಂದು ಅಸ್ತಿತ್ವದಲ್ಲಿರುವ ಕಮ್ಯುನಿಸ್ಟ್, ಮಿಲಿಟರಿ ಅಥವಾ ರಾಜಾಡಳಿತಕ್ಕಿಂತ ಪ್ರಜಾಪ್ರಭುತ್ವವೇ ಶಕ್ತಿಶಾಲಿ. ಇಂತಹ ಮೌಲ್ಯಯುತ ವ್ಯವಸ್ಥೆಗೆ ಅಡಿಪಾಯ ಹಾಕಿದವರು ಬಸವಣ್ಣನವರು. ಅವರ ಕಾಯಕ ನಿಷ್ಠೆ ಮತ್ತು ಆದರ್ಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸಲು ಸರ್ಕಾರ 31ಕ್ಕೂ ಹೆಚ್ಚು ಮಹನೀಯರ ಜಯಂತಿಗಳನ್ನು ಆಚರಿಸುತ್ತಿದೆ," ಎಂದರು.

<u>ಸಾಧಕರಿಗೆ ಸನ್ಮಾನ:</u> ಕಾರ್ಯಕ್ರಮದಲ್ಲಿ ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಇದೇ ವೇಳೆ ವಿವಿಧ ಕ್ಷೇತ್ರಗಳ ಸಾಧಕರನ್ನು ಹಾಗೂ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ನಡೆದ ವಚನ ಗೀತ ಗಾಯನ ಸಾರ್ವಜನಿಕರ ಗಮನ ಸೆಳೆಯಿತು.

ಜಿಲ್ಲಾ ಪಂಚಾಯತ್ ಸಿಇಓ ಡಾ. ವೈ. ನವೀನ್ ಭಟ್, ಉಪ ವಿಭಾಗಾಧಿಕಾರಿ ಡಿ.ಎಚ್. ಅಶ್ವಿನ್, ಮುಖಂಡರಾದ ಮಹೇಶ್ ಬಸಾಪುರ, ಗಿರೀಶ್ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಧನ್ವಂತರಿ ಆಯುರ್ವೇದ ಆಸ್ಪತ್ರೆ ಲೋಕಾರ್ಪಣೆ

ಚಿಕ್ಕಬಳ್ಳಾಪುರ

ವೈದ್ಯಕೀಯ ಕ್ಷೇತ್ರದಲ್ಲಿ ಆಯುರ್ವೇದ ಮತ್ತು ಪಂಚಕರ್ಮ ವೈದ್ಯ ಪದ್ಧತಿಗೆ ತನ್ನದೇ ಆದ ವಿಶೇಷತೆ ಇದ್ದು, ಇದು ಭಾರತೀಯ ಸಂಸ್ಕೃತಿಯ ಅತ್ಯಂತ ಪುರಾತನ ಹಾಗೂ ನೈಸರ್ಗಿಕ ಚಿಕಿತ್ಸಾ ಪದ್ಧತಿಯಾಗಿದೆ ಎಂದು ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದ ಶ್ರೀ ಶ್ರೀ ಪೂರ್ಣಾನಂದಸ್ವಾಮೀಜಿ ತಿಳಿಸಿದರು.

ನಗರದ ಪ್ರಶಾಂತಿನಗರ ಬಡಾವಣೆಯಲ್ಲಿ ನೂತನವಾಗಿ ನಿರ್ಮಿಸಲಾಗಿರುವ **"ಧನ್ವಂತರಿ ಆಯುರ್ವೇದ ಆಸ್ಪತ್ರೆ"**ಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಆಯುರ್ವೇದ ಹಾಗೂ ಪಂಚಕರ್ಮ ಚಿಕಿತ್ಸೆಯಿಂದ ಎಂತಹ ಕಠಿಣ ಕಾಯಿಲೆಗಳನ್ನಾದರೂ ಗುಣಪಡಿಸಲು ಸಾಧ್ಯವಿದೆ. ಇದು ಮನುಷ್ಯನ ದೇಹದ ಮೇಲೆ ಯಾವುದೇ ಅಡ್ಡಪರಿಣಾಮ ಬೀರದ ಹಾನಿಕಾರಕವಲ್ಲದ ಪದ್ಧತಿಯಾಗಿದೆ. ಚಿಕ್ಕಬಳ್ಳಾಪುರದಂತಹ ಬೆಳೆಯುತ್ತಿರುವ ನಗರದಲ್ಲಿ ಇಂತಹ ಸುಸಜ್ಜಿತ ವೈದ್ಯಾಲಯ ಆರಂಭವಾಗಿರುವುದು ಶ್ಲಾಘನೀಯ ಎಂದರು. ನೂತನ ಕಟ್ಟಡ ಉದ್ಘಾಟಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸಿ ಮಾತನಾಡಿ, "ಸಾರ್ವಜನಿಕರು ಆಯುರ್ವೇದದ ಸೌಲಭ್ಯವನ್ನು ಸದು ಪಯೋಗಪಡಿಸಿಕೊಳ್ಳಬೇಕು. ಕಡಿಮೆ ಖರ್ಚಿನಲ್ಲಿ ಉತ್ತಮ ಆರೋಗ್ಯ ಸೇವೆ ಪಡೆಯುವ ಮೂಲಕ ಶೀಘ್ರ ಗುಣಮುಖರಾಗಲು ಇದು ಸಹಕಾರಿ," ಎಂದು ಹಾರೈಸಿದರು. ವೇದಬ್ರಹ್ಮ ವಾಸುದೇವಶಾಸ್ತ್ರೀಗಳು ಪೂಜಾ ವಿಧಿವಿಧಾನ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಹಾಗೂ ಆದಿಚುಂಚನಗಿರಿ ಮಠದ ಸಾರ್ವಜನಿಕ ಸಂಪರ್ಕ ಅಧಿಕಾರಿ ಕೆ.ಎನ್. ಗೋಪಾಲಾಚಾರಿ ಉಪಸ್ಥಿತರಿದ್ದರು.

# ಗರ್ಭಕಂಠದ ಕ್ಯಾನ್ಸರ್ ತಡೆಗೆ 'ಎಚ್‌ಪಿವಿ ಲಸಿಕೆ' ಕಡ್ಡಾಯಕ್ಕೆ ಇಓ ಕೃಷ್ಣಪ್ಪ ಕರೆ

ಮಾಲೂರು

ತಾಲ್ಲೂಕಿನಲ್ಲಿ 14 ರಿಂದ 15 ವರ್ಷದೊಳಗಿನ ಹೆಣ್ಣುಮಕ್ಕಳಲ್ಲಿ ಕಂಡುಬರುವ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಅಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ ಎಚ್‌ಪಿವಿ ಲಸಿಕೆ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ (ಇಒ) ವಿ. ಕೃಷ್ಣಪ್ಪ ತಿಳಿಸಿದರು.

ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಆರೋಗ್ಯ ಇಲಾಖೆ ಆಯೋಜಿಸಿದ್ದ ಅಂತರ್ ಇಲಾಖೆ ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

"ಸರ್ಕಾರವು ಮಹಿಳೆಯರ ಆರೋಗ್ಯ ರಕ್ಷಣೆಗಾಗಿ ಈಗಾಗಲೇ ಅಭಿಯಾನ ಆರಂಭಿಸಿದೆ. ಖಾಸಗಿ ಆಸ್ಪತ್ರೆಗಳಲ್ಲಿ ದುಬಾರಿ ವೆಚ್ಚದ ಈ ಲಸಿಕೆಯು ಸರ್ಕಾರಿ ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ಲಭ್ಯವಿದೆ. 14 ರಿಂದ 15 ವರ್ಷದೊಳಗಿನ ಹೆಣ್ಣುಮಕ್ಕಳು ಆಧಾರ್ ಕಾರ್ಡ್ ಅಥವಾ ಗುರುತಿನ ಚೀಟಿಯೊಂದಿಗೆ ಕೇಂದ್ರಗಳಿಗೆ ಭೇಟಿ ನೀಡಿ ಲಸಿಕೆ ಪಡೆಯಬಹುದು. ತಾಲ್ಲೂಕಿನಲ್ಲಿ ಈವರೆಗೆ 489 ಮಕ್ಕಳಿಗೆ ಲಸಿಕೆ ನೀಡಲಾಗಿದೆ," ಎಂದು ಅವರು ಮಾಹಿತಿ ನೀಡಿದರು.

ಲಸಿಕೆ ಹಾಕಿಸಿಕೊಳ್ಳುವುದರಿಂದ ಯಾವುದೇ ಅಡ್ಡಪರಿಣಾಮಗಳಿಲ್ಲ. ಸಾರ್ವಜನಿಕರು ಮತ್ತು ಪೋಷಕರು ಯಾವುದೇ ಮೂಢನಂಬಿಕೆಗಳಿಗೆ ಕಿವಿಗೊಡಬಾರದು. "ಹೆಣ್ಣು ಮಗುವಿನ ಆರೋಗ್ಯವೇ ದೇಶದ ಭಾಗ್ಯ" ಎಂಬ ಧ್ಯೇಯದೊಂದಿಗೆ ಕ್ಯಾನ್ಸರ್ ಮುಕ್ತ ನಾಳೆಗಾಗಿ ಲಸಿಕೆ ಪಡೆಯುವುದು ಪ್ರತಿಯೊಬ್ಬರ ಹಕ್ಕು ಎಂದರು.

ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ರಮೇಶ್ ಬಾಬು ಮಾತನಾಡಿ, "ಭಾರತೀಯ ಮಹಿಳೆಯರಲ್ಲಿ ಕಂಡುಬರುವ ಕ್ಯಾನ್ಸರ್‌ಗಳಲ್ಲಿ ಗರ್ಭಕಂಠದ ಕ್ಯಾನ್ಸರ್ ಪ್ರಮುಖ ಸ್ಥಾನದಲ್ಲಿದೆ. 2024ರ ಅಂದಾಜಿನ ಪ್ರಕಾರ ದೇಶದಲ್ಲಿ ಸುಮಾರು 78,499 ಹೊಸ ಪ್ರಕರಣಗಳು ಪತ್ತೆಯಾಗಿದ್ದು, 42,392 ಸಾವುಗಳು ಸಂಭವಿಸಿವೆ. ಇದನ್ನು ತಡೆಯಲು 14–15 ವರ್ಷದೊಳಗಿನ ವಯಸ್ಸು ಸೂಕ್ತ ಸಮಯವಾಗಿದ್ದು, ತಾಲ್ಲೂಕಿನ 2,563 ಹೆಣ್ಣುಮಕ್ಕಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದೆ," ಎಂದರು. ಸಭೆಯಲ್ಲಿ ಬಾಲ್ಯ ವಿವಾಹ ನಿಯಂತ್ರಣ, ಡೆಂಗ್ಯೂ, ಚಿಕನ್ ಗುನ್ಯಾ, ಮಲೇರಿಯಾ ಹಾಗೂ ಟಿಬಿ ಮುಕ್ತ ಭಾರತ ಅಭಿಯಾನದ ಕುರಿತು ಚರ್ಚಿಸಲಾಯಿತು. ಸಿಡಿಪಿಒ ಶೋಭಾ, ಬಿಆರ್‌ಸಿ ವೆಂಕಟಸ್ವಾಮಿ, ಸಮಾಜ ಕಲ್ಯಾಣ ಇಲಾಖೆಯ ಶಿವಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಮೇ.1ರಂದು ಅಂಬೇಡ್ಕರ್ ನಗರದಲ್ಲಿ ಶ್ರೀ ರೇಣುಕಾಯಲ್ಲಮ್ಮ ದೇವಿಯ ಹೂವಿನ ಕರಗ ಮಹೋತ್ಸವ

ಕೋಲಾರ

ದೇವಿ ರೇಣುಕಾಯಲ್ಲಮ್ಮ ಸೇವಾ ಟ್ರಸ್ಟ್ ವತಿಯಿಂದ ಓಂ ಶಕ್ತಿ ಆದಿಪರಾಶಕ್ತಿ ದೇವಿ ರೇಣುಕಾಯಲ್ಲಮ್ಮ ದೇವಿಯ ಬ್ರಹ್ಮ ರಥೋತ್ಸವ, ಕರಗ ಉತ್ಸವ, ಅಗ್ನಿಕುಂಡ ಮತ್ತು ದೀಪೋತ್ಸವ ಕಾರ್ಯಕ್ರಮವನ್ನು ಏ.29 ರಿಂದ ಮೇ.2 ರವರೆಗೆ ನಗರದ ಬಂಗಾರಪೇಟೆ ಮುಖ್ಯ ರಸ್ತೆಯ ಅಂಬೇಡ್ಕರ್ ನಗರದಲ್ಲಿ ಏರ್ಪಡಿಸಲಾಗಿದೆ ಎಂದು ಟ್ರಸ್ಟಿನ ಅಧ್ಯಕ್ಷ ಡಾ. ಎ.ಕೃಷ್ಣಪ್ಪ ತಿಳಿಸಿದರು.

ಪತ್ರಿಕಾ ಹೇಳಿಕೆ ನೀಡಿರುವ ಅವರು, ನಾಲ್ಕು ದಿನಗಳ ನಡೆಯುವ ಕರಗ ಉತ್ಸವದಲ್ಲಿ ಶಾಸಕ ಕೊತ್ತೂರು ಮಂಜುನಾಥ್, ಡಿಐಜಿಪಿ ಡಿ.ದೇವರಾಜ್, ಎಂಎಲ್ಸಿ ಅನಿಲ್ ಕುಮಾರ್, ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ. ಸಿಎಂಆರ್ ಶ್ರೀನಾಥ್ ಸೇರಿದಂತೆ ಅನೇಕ ಗಣ್ಯರು ಅಧಿಕಾರಿಗಳು ಭಾಗವಹಿಸುತ್ತಾರೆ ಎಂದು ಹೇಳಿದರು.

ಇದೇ 29 ಬುಧವಾರ ಶ್ರೀದೇವಿ ರೇಣುಕಾಯಲ್ಲಮ್ಮ ದೇವಿಗೆ ಬೆಳಿಗ್ಗೆ ಸುಪ್ರಭಾತ, ಸಂಕಲ್ಪ, ಅಭಿಷೇಕ, ಮಹಾಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗ ಜರುಗಲಿದೆ. ಜಾತ್ರಾ ಮಹೋತ್ಸವದ ಪ್ರಯುಕ್ತ ರಂಗೋಲಿ ಸ್ಪರ್ಧೆ, ವಿಶೇಷ ದೀಪಾಲಂಕಾರ, ಸಂಜೆ 6ಕ್ಕೆ ಧ್ವಜಾರೋಹಣ, 8 ಗಂಟೆಗೆ ಹಸಿಕರಗ ಜರುಗಲಿದೆ. ಈ ವೇಳೆ ಅಪಾರ ಭಕ್ತಾಧಿಗಳು ಕರಗ ಉತ್ಸವದಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗಬೇಕು ಎಂದು ಮನವಿ ಮಾಡಿದರು. ಈ ವೇಳೆ ದೇವಿ ರೇಣುಕಾಯಲ್ಲಮ್ಮ ಸೇವಾ ಟ್ರಸ್ಟ್ ಪದಾಧಿಕಾರಿಗಳಾದ ಶಾಂತ ಕುಮಾರ್, ಶ್ರೀರಾಮ್ ಇದ್ದರು.

# ತೀವ್ರ ಬಿಸಿಲಿನ ತಾಪ; ಸಾರ್ವಜನಿಕರಿಗೆ ಆರೋಗ್ಯ ಇಲಾಖೆಯಿಂದ ಸುರಕ್ಷತಾ ಮಾರ್ಗಸೂಚಿ ಪ್ರಕಟ

ಚಿಕ್ಕಬಳ್ಳಾಪುರ

2026ರ ಬೇಸಿಗೆ ಕಾಲದ (ಮಾರ್ಚ್ ನಿಂದ ಮೇ) ತಾಪಮಾನದ ಅವಧಿಯಲ್ಲಿ ರಾಜ್ಯದ ಬಹುತೇಕ ಭಾಗಗಳಲ್ಲಿ ಗರಿಷ್ಠ ತಾಪಮಾನವು ಸಾಮಾನ್ಯಕ್ಕಿಂತ ಹೆಚ್ಚಾಗಿರುವ ಸಾಧ್ಯತೆ ಇದೆ. ತೀವ್ರ ತಾಪಮಾನವು ಸಾರ್ವಜನಿಕರ ಆರೋಗ್ಯದ ಮೇಲೆ ವಿಶೇಷವಾಗಿ ಮಕ್ಕಳು, ವೃದ್ದರು ಮತ್ತು ಅನಾರೋಗ್ಯ ಪೀಡಿತರ ಮೇಲೆ ಗಂಭೀರ ಪರಿಣಾಮ ಬೀರಬಹುದು. ಬಿಸಿಲಿನಿಂದ ಉಂಟಾಗುವ ಬಳಲಿಕೆ, ನಿರ್ಜಲೀಕರಣ ಮತ್ತು ಶಾಖಾಘಾತ ತಡೆಗಟ್ಟಲು ಮಾರ್ಗಸೂಚಿಗಳನ್ನು ನೀಡಿದ್ದು ಆ ಮಾರ್ಗಸೂಚಿಗಳು ಈ ಕೆಳಕಂಡತಿವೆ.

ಹೆಚ್ಚು ನೀರು ಕುಡಿಯುವುದು, ಬಾಯರಿಕೆ ಇಲ್ಲದಿದ್ದರೂ ಸಹ ಹೆಚ್ಚು ನೀರನ್ನು ಆಗಾಗ್ಗೆ ಕುಡಿಯಬೇಕು. ಬಾಯಾರಿಕೆಯು ನಿರ್ಜಲೀಕರಣದ ಲಕ್ಷಣವಾಗಿದೆ. ಪ್ರಯಾಣ ಮಾಡುವ ಸಮಯದಲ್ಲೂ ಕುಡಿಯಲು ನೀರನ್ನು ಜೊತೆಗೆ ತೆಗೆದುಕೊಂಡು ಹೋಗುವುದು ಅಗತ್ಯವಾಗಿದೆ. ಮೌಖಿಕ ಪುನರ್ಜಲೀಕರಣ ದ್ರಾವಣ (ಓ.ಆರ್.ಎಸ್) ಹಾಗೂ ಮನೆಯಲ್ಲಿಯೇ ಸಿದ್ಧಪಡಿಸಿದ ನಿಂಬೆ ಹಣ್ಣಿನ ಷರಬತ್ತು, ಮಜ್ಜಿಗೆ, ಲಸ್ಸಿ, ಹಣ್ಣಿನ ಜ್ಯೂಸ್‌ಗಳನ್ನು ಒಂದು ಚಿಟಿಕೆ ಉಪ್ಪಿನೊಂದಿಗೆ ಸೇವಿಸುವುದು ಉತ್ತಮ.

ಈ ಋತು ಮಾನದಲ್ಲಿ ಲಭ್ಯವಿರುವ ಹಾಗೂ ಹೆಚ್ಚು ನೀರಿನ ಅಂಶವನ್ನು ಹೊಂದಿರುವ ಹಣ್ಣು ಹಾಗೂ ತರಕಾರಿಗಳಾದ ಕಲ್ಲಂಗಡಿ, ಕರಬೂಜ, ಕಿತ್ತಳೆ, ದ್ರಾಕ್ಷಿ, ಅನಾನಸ್, ಸೌತೇಕಾಯಿ, ಎಳನೀರುಗಳನ್ನು ಹೆಚ್ಚಾಗಿ ಸೇವಿಸಬೇಕು.

ಶರೀರವನ್ನು ಸುರಕ್ಷಿತವಾಗಿಟ್ಟುಕೊಳ್ಳುವುದು, ತಿಳಿ ಬಣ್ಣದ, ಸಡಿಲವಾದ ಹತ್ತಿಯ ಬಟ್ಟೆಯನ್ನು ಧರಿಸುವುದು ಉತ್ತಮ. ಬಿಸಿಲಿನಲ್ಲಿ ಹೊರಹೋಗುವ ಸಂದರ್ಭಗಳಲ್ಲಿ ಛತ್ರಿ, ಟೋಪಿ, ಟವಲ್ ಅಥವಾ ಇನ್ನಾವುದೇ ಸಾಂಪ್ರದಾಯಿಕ ಪದ್ದತಿಯನ್ನು ಅನುಸರಿಸಿ, ಬಿಸಿಲಿನಿಂದ ರಕ್ಷಣೆ ಪಡೆಯುವುದು ಉತ್ತಮ. ಬಿಸಿಲಿನಲ್ಲೆ ನಡೆಯುವ ಸಂದರ್ಭದಲ್ಲಿ ಪಾದರಕ್ಷೆ/ಚಪ್ಪಲಿ ಅಥವಾ ಶೂಸ್‌ಗಳನ್ನು ಧರಿಸಬೇಕು.

<u>ಸದಾ ಎಚ್ಚರದಿಂದಿರಿ:</u> ರೇಡಿಯೋ, ದೂರದರ್ಶನ ಹಾಗೂ ದಿನಪತ್ರಿಕೆಗಳ ಮೂಲಕ ಸ್ಥಳೀಯ ಹವಾಮಾನದ ಮಾಹಿತಿಯನ್ನು ಪಡೆದು ಅದರಂತೆ ಚಟುವಟಿಕೆಗಳನ್ನು ಯೋಜಿಸುವುದು ಉತ್ತಮ. ಹವಾಮಾನದ ಕುರಿತು ಮಾಹಿತಿಯನ್ನು ಏಚಿಡಿಟಿಚಿಣಚಿಞಚಿ ಖಣಚಿಣಜ ಓಚಿಣಣಾಡಿಚಿಟ ಆುಛಿಣಜಡಿ ಒಂಟುಣಂಕಡಿಟಿರ ಅಜಟಿಣಡಿಜ ನ ಜಾಲತಾಣ https:/www.ksndmc.org/default.aspx ದಲ್ಲಿ ಮಾಹಿತಿಯನ್ನು ಪಡೆಯಬಹುದು.

<u>ಇತರ ಮುನ್ನೆಚ್ಚರಿಕಾ ಕ್ರಮಗಳು:</u> ಪ್ರತ್ಯೇಕವಾಗಿ/ಒಂಟಿಯಾಗಿ ವಾಸಿಸುವ ವೃದ್ದರು ಅಥವಾ ರೋಗಿಗಳ ಉಸ್ತುವಾರಿ ಹಾಗೂ ಅವರ ಆರೋಗ್ಯ ಸ್ಥಿತಿಯ ಮೇಲ್ವಿಚಾರಣೆಯನ್ನು ದೈನಂದಿನವಾಗಿ ಕೈಗೊಳ್ಳಬೇಕು. ಮನೆಯ ಒಳಾಂಗಣವನ್ನು ತಣ್ಣಗಿರಿಸಲು ಪರದೆಗಳು/ ಷಟರ್ ಗಳನ್ನು ಬಳಸಿ ಹಾಗೂ ರಾತ್ರಿಯ ಸಮಯದಲ್ಲಿ ಕಿಟಕಿಗಳನ್ನು ತೆರೆದಿಡಿ. ಹಗಲು ಹೊತ್ತಿನಲ್ಲಿ ಮನೆಯ ಕೆಳಗಿನ ಮಹಡಿಗಳಲ್ಲಿರುವುದು ಉತ್ತಮ. ಶರೀರವನ್ನು ತಣ್ಣಗಿರಲು ಫ್ಯಾನ್ ಅಥವಾ ತೇವವಾದ ಬಟ್ಟೆಯನ್ನು ಬಳಸಬಹುದು. <u>ಇತರ ಮುನ್ನೆಚ್ಚರಿಕಾ ಕ್ರಮಗಳು:</u> ಪ್ರತ್ಯೇಕವಾಗಿ/ ಒಂಟಿಯಾಗಿ ವಾಸಿಸುವ ವೃದ್ದರು ಅಥವಾ ರೋಗಿಗಳ ಉಸ್ತುವಾರಿ ಹಾಗೂ ಅವರ ಆರೋಗ್ಯ ಸ್ಥಿತಿಯ ಮೇಲ್ವಿಚಾರಣೆಯನ್ನು ದೈನಂದಿನವಾಗಿ ಕೈಗೊಳ್ಳಬೇಕು. ಮನೆಯ ಒಳಾಂಗಣವನ್ನು ತಣ್ಣಗಿರಿಸಲು ಪರದೆಗಳು/ಷಟರ್ ಗಳನ್ನು ಬಳಸಿ ಹಾಗೂ ರಾತ್ರಿಯ ಸಮಯದಲ್ಲಿ ಕಿಟಕಿಗಳನ್ನು ತೆರೆದಿಡಿ.

ಹಗಲು ಹೊತ್ತಿನಲ್ಲಿ ಮನೆಯ ಕೆಳಗಿನ ಮಹಡಿಗಳಲ್ಲಿರುವುದು ಉತ್ತಮ. ಶರೀರವನ್ನು ತಣ್ಣಗಿರಲು ಫ್ಯಾನ್ ಅಥವಾ ತೇವವಾದ ಬಟ್ಟೆಯನ್ನು ಬಳಸಬಹುದು.

<u>ಮಾಡಬಾರದ್ದು:</u> ಬಿಸಿಲಿನಲ್ಲಿ ಅಂದರೆ ಮಧ್ಯಾಹ್ನ 12 ಗಂಟೆಯಿಂದ 3 ಗಂಟೆಯವರೆಗೆ ಹೊರಗೆ ಹೋಗುವುದನ್ನು ತಪ್ಪಿಸಬೇಕು. ಮಧ್ಯಾಹ್ನದ ಸಂದರ್ಭದಲ್ಲಿ ಶ್ರಮದಾಯಕ ಹೊರಾಂಗಣ ಚಟುವಟಿಕೆಗಳನ್ನು ಕೈಗೊಳ್ಳಬಾರದು. ಚಪ್ಪಲಿ ಧರಿಸದೇ ಹೊರಹೋಗುವ ಅಭ್ಯಾಸವನ್ನು ತಪ್ಪಿಸಬೇಕು. ಮಧ್ಯಾಹ್ನದ ಸಮಯದಲ್ಲಿ ಅಡುಗೆ ಮಾಡುವುದುನ್ನು ತಪ್ಪಿಸಬೇಕು. ಅಡಿಗೆ ಸಿದ್ದಪಡಿಸುವ ಪ್ರದೇಶದಲ್ಲಿ ಕಿಟಕಿ ಹಾಗೂ ಬಾಗಿಲುಗಳನ್ನು ತೆರದಿಡಬೇಕು. ಮದ್ಯಪಾನ, ಟೀ, ಕಾಫಿ ಮತ್ತು ಕಾರ್ಬೋನೇಟೆಡ್ ಪಾನೀಯಗಳು ಅಥವಾ ಹೆಚ್ಚು ಸಕ್ಕರೆ ಅಂಶವನ್ನು ಹೊಂದಿದ ಪಾನೀಯಗಳಿಂದ ದೂರವಿರಬೇಕು. ವಾಹನಗಳ ಒಳಾಂಗಣದಲ್ಲಿನ ಹೆಚ್ಚಿನ ತಾಪಮಾನವು ಅಪಾಯಕಾರಿಯಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಹಾಗೂ ಉಚಿತ ಆರೋಗ್ಯ ಸಹಾಯವಾಣಿ 104 ಕ್ಕೆ ಕರೆ ಮಾಡಿ ಸಂಪರ್ಕಿಸಬಹುದೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಅವರು ನೀಡಿರುವ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy